ಸಂಪುಟ: 05 ಸಂಚಿಕೆ: 352 ಪುಟಗಳು: 08 ಶುಕ್ರವಾರ 06 ಮಾರ್ಚ್ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಶುದ್ಧ ಚಾರಿತ್ರ್ಯವೊಂದೇ ಕಷ್ಟ ಪರಂಪರೆಗಳ ಅಭೇದ್ಯ ಕೋಟೆಯನ್ನು ಸೀಳಿಕೊಂಡು ಹೋಗಬಲ್ಲದು

# ಭ್ರಷ್ಟಕುಳಗಳಿಗೆ ಲೋಕಾ ಶಾಕ್

## ಬೆಂಗಳೂರು ಸೇರಿದಂತೆ 7 ಜಿಲ್ಲೆಗಳಲ್ಲಿ ದಾಳಿ






• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಭ್ರಷ್ಟಾಚಾರದ ವಿರುದ್ಧ ಲೋಕಾಯುಕ್ತ ಅಧಿಕಾರಿಗಳು ಮಿಂಚಿನ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಬೆಳ್ಳಂಬೆಳಿಗ್ಗೆಯೇ ದಾಳಿ ಮಾಡಿ, ಹಲವು ಸರ್ಕಾರಿ ಅಧಿಕಾರಿಗಳ ಮನೆಗಳು ಮತ್ತು ಕಚೇರಿಗಳನ್ನು ಪರಿಶೀಲಿಸುತ್ತಿರುವುದು ರಾಜ್ಯದಾದ್ಯಂತ ಸಂಚಲನ ಮೂಡಿಸಿದೆ. ಬೆಂಗಳೂರು ಸೇರಿದಂತೆ ಏಳು ಜಿಲ್ಲೆಗಳಲ್ಲಿ ಏಕಕಾಲದಲ್ಲಿ ದಾಳಿ ಮಾಡಿದ್ದಾರೆ. ಇದರಿಂದ ಹಲವು ಅಧಿಕಾರಿಗಳು ನಡುಕ ಶುರುವಾಗಿದೆ.

**ಅಧಿಕಾರಿಗಳನ್ನೇ ಆಟ ಆಡಿಸಿದ ಅಧಿಕಾರಿ**



ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮ ಚೀಫ್ ಇಂಜಿನಿಯರ್ ಸೇರಿದಂತೆ ಹಲವು ಉನ್ನತ ಅಧಿಕಾರಿಗಳು ಈ ಲೋಕಾಯುಕ್ತ ದಾಳಿಯ ಗುರಿಯಾಗಿದ್ದಾರೆ. ಆದಾಯಕ್ಕಿಂತ ಹೆಚ್ಚಿನ ಆಸ್ತಿ ಗಳಿಕೆ, ಭ್ರಷ್ಟಾಚಾರದ ದೂರುಗಳ ಹಿನ್ನೆಲೆಯಲ್ಲಿ ನಡೆದ ಈ ಕಾರ್ಯಾಚರಣೆಯು ಸರ್ಕಾರಿ ವ್ಯವಸ್ಥೆಯಲ್ಲಿ ಸ್ವಚ್ಛತೆಯ ಅಗತ್ಯವನ್ನು ಮತ್ತೊಮ್ಮೆ ಎತ್ತಿ ತೋರಿಸಿದೆ.



**ರಾಜ್ಯದ 7 ಜಿಲ್ಲೆಗಳಲ್ಲಿ ಲೋಕಾಯುಕ್ತ ದಾಳಿ:** ಬೆಂಗಳೂರಿನ ಮೂರು ಕಡೆಗಳಲ್ಲಿ ಲೋಕಾಯುಕ್ತ ತಂಡಗಳು ಕಾರ್ಯಾಚರಣೆ ನಡೆಸಿವೆ. ಮೊದಲಿಗೆ KRIDL ಚೀಫ್ ಇಂಜಿನಿಯರ್ ವಸಂತ್ ನಾಯ್ಕ್ ಅವರ ಮನೆ ಮತ್ತು ಕಚೇರಿಯ ಮೇಲೆ ದಾಳಿ ನಡೆದಿದೆ. ವಸಂತ್ ನಾಯ್ಕ್ ಅವರು ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ಅಧಿಕಾರಿ. ಅವರ ಮನೆಯಲ್ಲಿ ದಾಖಲೆಗಳನ್ನು ಪರಿಶೀಲಿಸುತ್ತಿರುವ ಅಧಿಕಾರಿಗಳು ಭ್ರಷ್ಟಾಚಾರದ ಸಾಕ್ಷ್ಯಗಳನ್ನು ಹುಡುಕುತ್ತಿದ್ದಾರೆ. ಇದೇ ಸಂದರ್ಭದಲ್ಲಿ ಸಿಂಗನಾಯಕನಹಳ್ಳಿ ಕೋ-ಆಪರೇಟಿವ್ ಸೊಸೈಟಿಯ ಸಿಇಒ ಶಶಿಧರ್ ಅವರ ಮನೆಯ ಮೇಲೂ ದಾಳಿ ಮಾಡಲಾಗಿದೆ. ಶಶಿಧರ್ ಅವರು ಸಹಕಾರಿ ಸಂಸ್ಥೆಯಲ್ಲಿ ಮುಖ್ಯ ಪಾತ್ರ ವಹಿಸಿದ್ದರು. ಮತ್ತೊಂದು ದಾಳಿಯು ಹೆಬ್ಬಾಳದ ವೆಟರ್ನರಿ ಕಾಲೇಜಿನ ಅಸಿಸ್ಟೆಂಟ್ ಪ್ರೊಫೆಸರ್ ಇಂದರೇಶ್ ಅವರ ಮೇಲೆ ನಡೆದಿದೆ. ಈ ಅಧಿಕಾರಿಗಳು ಸರ್ಕಾರಿ ಹುದ್ದೆಗಳಲ್ಲಿ ಇದ್ದುಕೊಂಡು ಅಕ್ರಮ ಆಸ್ತಿ ಸಂಗ್ರಹಿಸಿರುವ ಆರೋಪಗಳು ಕೇಳಿಬರುತ್ತಿವೆ.

**ಬಾಗಲಕೋಟೆಯಲ್ಲೂ ಲೋಕಾ ರೇಡ್:** ಬಾಗಲಕೋಟೆಯಲ್ಲಿ ದಾಳಿಯು ಹೆಚ್ಚು ರೋಚಕವಾಗಿದೆ. ಬೆಂಗಳೂರಿನ ಕರ್ನಾಟಕ ರೋಡ್ ಡೆವಲಪ್ಮೆಂಟ್ ಕಾರ್ಪೋರೇಷನ್‌ನ ಚೀಫ್ ಇಂಜಿನಿಯರ್ ವಸಂತ್ ವಾಲಪ್ಪ ನಾಯ್ಕ್ ಅವರ

### ಮನೆಯ ಕಿಟಕಿ ಬಡಿದು, ಕೂಗಿದರೂ ಬಾಗಿಲು ತೆರೆಯದ ಆಸಾಮಿ!

**ಬಲೆಗೆ ಬಿದ್ದವರು**

- ವಿರೇಶ ಹಿರೇಮಠ ಉಪ ವಿದ್ಯುತ್ ಪರಿವೀಕ್ಷಕ ಜೆಸ್ಕಾಂ ಯಾದಗಿರಿ
- ಸತೀಶ್ ಎಇಇ, ಪಿಡಬ್ಲ್ಯುಡಿ ಗದಗ
- ಎಂ.ಕೆ. ಸುರಕೋಡ್ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗದಗ
- ಆಸೀಫ್ ಇಕ್ಬಾಲ್ ಹುಸೇನ್ ಎಇಇ, ನಗರ ನೀರು ಸರಬರಾಜು ಮಂಡಳಿ- ಮೈಸೂರು ಶಶಿಧರ್ ಸಿಇಒ, ರೈತ ಸೇವಾ ಸಹಕಾರ ಸಂಘ, ಯಲಹಂಕ
- ಹೆಚ್.ಸಿ. ಇಂದ್ರೇಶ್ ಸಹಾಯಕ ಪ್ರಾಧ್ಯಾಪಕ, ಪಶುವೈದ್ಯಕೀಯ ಕಾಲೇಜು, ಹೆಬ್ಬಾಳ ಬೆಂಗಳೂರು

**ಬಿಸಿಎಂ ಅಧಿಕಾರಿ ಮೇಲೆ ದಾಳಿ**

ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ಬಿಸಿಎಂ) ಅಧಿಕಾರಿ ಎಂ.ಕೆ. ಸುರಕೋಡ ಅವರ ನಿವಾಸ ಹಾಗೂ ಸಂಬಂಧಿಸಿದ ಸ್ಥಳಗಳ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಗದಗ ನಗರದ ವಿಶ್ವೇಶ್ವರ ನಗರದ ಅವರ ನಿವಾಸ ಸೇರಿದಂತೆ ಧಾರವಾಡ ಮತ್ತು ರೋಣ ತಾಲ್ಲೂಕಿನ ಕೌಜಗೇರಿ ಸೇರಿ ಒಟ್ಟು ಆರು ಸ್ಥಳಗಳಲ್ಲಿ ಏಕಕಾಲದಲ್ಲಿ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ.ಲೋಕಾಯುಕ್ತ ಎಸ್‌ಪಿ ಎಸ್.ಟಿ. ಸಿದ್ದಲಿಂಗಪ್ಪ ಅವರ ನೇತೃತ್ವದಲ್ಲಿ ಆರು ತಂಡಗಳನ್ನು ರಚಿಸಿ ಈ ಕಾರ್ಯಾಚರಣೆ ಕೈಗೊಳ್ಳಲಾಗಿತ್ತು. ಗದಗ ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ ಸೇರಿದಂತೆ ಹಲವಾರು ಅಧಿಕಾರಿಗಳು ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದಾರೆ. ರೋಣ ತಾಲ್ಲೂಕಿನ ಕೌಜಗೇರಿ ಗ್ರಾಮದವರಾದ ಎಂ.ಕೆ. ಸುರಕೋಡ ಅವರು ಶಿರಹಟ್ಟಿಯಲ್ಲಿ ಬಿಸಿಎಂ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಸೇವಾ ಅವಧಿಯಲ್ಲಿ ಅಕ್ರಮವಾಗಿ ಅಪಾರ ಆಸ್ತಿ ಗಳಿಸಿರುವ ಆರೋಪಗಳ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದ್ದು, ಪರಿಶೀಲನೆ ಪೂರ್ಣಗೊಂಡ ಬಳಿಕ ಅಧಿಕೃತ ಮಾಹಿತಿ ನೀಡಲಾಗುವುದು ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.



ಮೇಲೆ ದಾಳಿ ನಡೆದಿದೆ. ಅವರ ಮನೆ, ಸಹೋದರನ ಮನೆ ಮತ್ತು ತಾಯಿಯ ನಿವಾಸದ ಮೇಲೆ ಏಕಕಾಲದಲ್ಲಿ ದಾಳಿ ಮಾಡಲಾಗಿದೆ. ಬಾಗಲಕೋಟೆ ತಾಲ್ಲೂಕಿನ ಬಿಲ್ ಕೆರೂರ್ ಗ್ರಾಮದಲ್ಲಿ ವಸಂತ್ ಅವರ ತಾಯಿ ವಾಸವಾಗಿದ್ದ ಮನೆಯನ್ನು ಪರಿಶೀಲಿಸಲಾಗಿದೆ. ಅಲ್ಲದೆ, ಅವರ ಸಹೋದರ ಭೀಮಸೇನ್ ನಾಯ್ಕ್ ಅವರ ಮನೆಯ ಮೇಲೂ ದಾಳಿ ನಡೆದಿದೆ.


**ಹಾಸನದಲ್ಲೂ ದಾಳಿ:** ಹಾಸನದಲ್ಲೂ ಕೂಡ ದಾಳಿ ನಡೆದಿದೆ. ಮಹಾನಗರ ಪಾಲಿಕೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ (ಎಇಇ) ಎಂ.ಸಿ. ಸತ್ಯನಾರಾಯಣ ಅವರ ಮನೆಯ ಮೇಲೆ ಬೆಳ್ಳಂಬೆಳಿಗ್ಗೆ ದಾಳಿ ನಡೆದಿದೆ. ಹಾಸನ ನಗರದ ರವೀಂದ್ರ ನಗರದಲ್ಲಿರುವ ಅವರ ನಿವಾಸಕ್ಕೆ ಲೋಕಾಯುಕ್ತ ತಂಡ ಬಂದಾಗ, ಸತ್ಯನಾರಾಯಣ ಅವರು ಬಾಗಿಲು ತೆರೆಯಲು ನಿರಾಕರಿಸಿದರು. ಇದರಿಂದಾಗಿ ಅಧಿಕಾರಿಗಳು ಮನೆ ಮುಂದೆಯೇ ಠಿಕಾಣಿ ಹೂಡಿದರು. ಕೊನೆಗೆ ಗೇಟ್ ಮೇಲಿಂದ ಹತ್ತಿ ಬಾಗಿಲು ತಟ್ಟುವಂತಹ ಸನ್ನಿವೇಶ ಉಂಟಾಯಿತು.

**ಮೈಸೂರಿನಲ್ಲಿ ಬಲೆ:** ಮೈಸೂರಿನಲ್ಲಿ ಲೋಕಾಯುಕ್ತ ತಂಡಗಳು ಎರಡು ಕಡೆಗಳಲ್ಲಿ ದಾಳಿ ನಡೆಸಿವೆ. ಜಲಭವನದ ಎಇಇ ಮತ್ತು ಇಇ (ಇನ್‌ಚಾರ್ಜ್) ಆಶಿಫ್ ಇಕ್ಬಾಲ್ ಅವರ ಕಚೇರಿ ಮತ್ತು ಮನೆಯ ಮೇಲೆ ಕಾರ್ಯಾಚರಣೆ ನಡೆದಿದೆ. ಸರಸ್ವತಿಪುರಂನಲ್ಲಿರುವ ಜಲಭವನ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಕೇಂದ್ರವಾಗಿದೆ. ಅಲ್ಲದೆ, ಆಶಿಫ್ ಅವರ ಎನ್.ಆರ್. ಮೊಹಲ್ಲಾದ ಮನೆಯನ್ನು ಸಹ ಪರಿಶೀಲಿಸಲಾಗಿದೆ. ಭ್ರಷ್ಟಾಚಾರದ ದೂರುಗಳ ಹಿನ್ನೆಲೆಯಲ್ಲಿ ನಡೆದ ಈ ದಾಳಿಯಲ್ಲಿ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ. ಇನ್ನೂ ಇತರ ಜಿಲ್ಲೆಗಳಲ್ಲೂ ದಾಳಿ ನಡೆದಿದೆ. ಯಾದಗಿರಿಯಲ್ಲಿ ವಿರೇಶ್ ಹಿರೇಮಠ್ ಅವರು ಡೆಪ್ಯುಟಿ ಎಲೆಕ್ಟ್ರಿಕಲ್ ಇನ್ಸ್ಪೆಕ್ಟರ್ ಆಗಿದ್ದು, ವಿದ್ಯುತ್ ಇಲಾಖೆಗೆ ಸಂಬಂಧಿಸಿದ್ದರು. ಮಂಡ್ಯದಲ್ಲಿ ಪಿಡಬ್ಲ್ಯುಡಿ ಎಇಇ ಎಸ್. ಸತೀಶ್ ಅವರ ಮೇಲೆ ದಾಳಿ ನಡೆದಿದೆ. ಧಾರವಾಡದಲ್ಲಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಕೆ. ಸುರಕೋಡ್ ಗುರಿಯಾಗಿದ್ದಾರೆ. ಈ ದಾಳಿಗಳು ವಿವಿಧ ಇಲಾಖೆಗಳಲ್ಲಿನ ಭ್ರಷ್ಟಾಚಾರವನ್ನು ಬಯಲು ಮಾಡುತ್ತಿವೆ. ಈ ದಾಳಿಗಳು ಕರ್ನಾಟಕದ ಸರ್ಕಾರಿ ವ್ಯವಸ್ಥೆಯಲ್ಲಿ ಭ್ರಷ್ಟಾಚಾರದ ವ್ಯಾಪಕತೆಯನ್ನು ತೋರಿಸುತ್ತವೆ. ಲೋಕಾಯುಕ್ತದಂತಹ ಸಂಸ್ಥೆಗಳು ಇಂತಹ ಕಾರ್ಯಾಚರಣೆಗಳ ಮೂಲಕ ಸ್ವಚ್ಛ ಆಡಳಿತಕ್ಕೆ ಮಾರ್ಗ ಮಾಡುತ್ತಿವೆ.

### ಲೋಕಾಯುಕ್ತ ದಾಳಿಗೊಳಗಾಗಿದ್ದ ಅಧಿಕಾರಿ ನಾಪತ್ತೆ

ಇತ್ತೀಚೆಗೆ ಲೋಕಾಯುಕ್ತ ದಾಳಿಗೊಳಗಾಗಿದ್ದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (ಕೆಆರ್‌ಇಐಎಸ್) ಅಧೀಕ್ಷಕ ಅಭಿಯಂತರ ಎಚ್.ಎಂ. ಜನಾರ್ಧನ್ ಅವರು ಕಳೆದಒಂದು ತಿಂಗಳಿನಿಂದ ನಿಗೂಢವಾಗಿ ನಾಪತ್ತೆಯಾಗಿದ್ದು, ಈ ಕುರಿತು ಸಮಗ್ರ ವಾದ ತನಿಖೆ ನಡೆಸುವಂತೆ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ನಗರ ಪೊಲೀಸ್ ಆಯುಕ್ತರಿಗೆ ದೂರು ಸಲ್ಲಿಸಿದೆ. ಲೋಕಾಯುಕ್ತ ದಾಳಿಗೊಳಗಾಗಿದ್ದ ಜನಾರ್ಧನ್ ಅವರು ಫೆ.7 ರಿಂದ ಇದುವರೆಗೂ ಕಚೇರಿಗೆ ಹಾಜರಾಗಿಲ್ಲ ಮತ್ತು ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿಲ್ಲ ಎಂಬ ಅಧಿಕೃತ ಮಾಹಿತಿಯನ್ನು ಕೆ.ಆರ್.ಇ.ಐ. ಎಸ್. ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕರು ಲಿಖಿತವಾಗಿ ನೀಡಿದ್ದಾರೆ. ಒಬ್ಬ ಜವಾಬ್ದಾರಿಯುತ ಉನ್ನತ ಅಧಿಕಾರಿ ಸುದೀರ್ಘ ಕಾಲದಿಂದ ನಾಪತ್ತೆಯಾಗಿರುವುದು ಆಡಳಿತ ವಲಯದಲ್ಲಿ ತೀವ್ರ ಆತಂಕ ಮೂಡಿಸಿದೆ. ಒಬ್ಬ ಉನ್ನತ ದರ್ಜೆಯ ಸರ್ಕಾರಿ ಅಧಿಕಾರಿ ಯಾವುದೇ ರಜೆ ಅಥವಾ ಮುನ್ಸೂಚನೆ ಇಲ್ಲದೆ 25ಕ್ಕೂ ಹೆಚ್ಚು ದಿನಗಳಿಂದ ನಾಪತ್ತೆಯಾಗಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಲೋಕಾಯುಕ್ತ ತನಿಖೆಗೆ ಹೆದರಿ ಅಥವಾ ಸಾಕ್ಷ್ಯಗಳನ್ನು ನಾಶಪಡಿಸುವ ಉದ್ದೇಶದಿಂದ ಅಧಿಕಾರಿ ತಲೆಮರೆಸಿಕೊಂಡಿದ್ದಾರೆಯೇ ಅವರ ನಾಪತ್ತೆಯ ಹಿಂದೆ ಪ್ರಭಾವಿ ವ್ಯಕ್ತಿಗಳ ಕೈವಾಡವಿದೆಯೇ ಎಂಬ ಸಂಶಯ ವ್ಯಕ್ತವಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.


# ವಿನ್ಯಾಸಗಾರರು ಬೇಕಾಗಿದ್ದಾರೆ



ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಛಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ. ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ

9448225696

ಉದಯ ವಾಹಿನಿ

#: 1230 'JAYAMAHAL 13th cross, 2nd phase, Girinagar, Bangalore-560085. (Near to bangalore one park, opposite mandya medical)
udayavahininews@gmail.com


## ನಟ ದರ್ಶನ್ ಮತ್ತು ಬಳಗಕ್ಕೆ ಮತ್ತೆ ಜೈಲೂಟವೇ ಗತಿ

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳಾಗಿರುವ ಪವಿತ್ರಾ ಗೌಡ, ಲಕ್ಷ್ಮಣ್, ನಾಗರಾಜ್ ಮತ್ತಿತರರಿಗೆ ಮನೆ ಊಟಕ್ಕೆ ಹೈಕೋರ್ಟ್ ಬ್ರೇಕ್ ಹಾಕಿದೆ. ಅಲ್ಲದೆ, ''ವೈದ್ಯಕೀಯ ಸಲಹೆ ಇದ್ದರೆ ಮಾತ್ರ ಮನೆ ಊಟಕ್ಕೆ ಅವಕಾಶವಿದೆ. ಕೈದಿ ಕೇಳಿದ ಕೂಡಲೇ ಮನೆ ಊಟಕ್ಕೆ ಒದಗಿಸಲು ಅವಕಾಶವಿಲ್ಲ,'' ಎಂದು ಆದೇಶಿಸಿದೆ. ''ಜೈಲಿನ ದ್ವಾರಗಳ ಬಾಗಿಲುಗಳಲ್ಲಿ ಮಾನವ ಘನತೆಯ ರಕ್ಷಣೆ ನಿಲ್ಲುತ್ತದೆ. ಕಾನೂನಿನನ್ವಯ ಕೈದಿಗಳಿಗೆ ಸ್ವಾತಂತ್ರ್ಯವಿಲ್ಲದಿದ್ದರೂ ಮೂಲ ಸೌಕರ್ಯಗಳಿಗೆ ಅವರು ಅರ್ಹರಾಗಿರುತ್ತಾರೆ. ವಿಚಾರಣಾಧೀನ ಕೈದಿಗಳಿಗೆ ಮನೆ ಊಟ ನೀಡದಿರಲು ನಿಷೇಧವಿಲ್ಲ. ಆದರೆ, ಜೈಲು ನಿಯಮಗಳು ಮತ್ತು ಪ್ರಕ್ರಿಯೆ ಅನುಸಾರ ಮನೆ ಊಟ ಪೂರೈಸಬಹುದಾಗಿದೆ. ಅದಕ್ಕೆ ವೈದ್ಯಕೀಯ ವರದಿ ಅತ್ಯಗತ್ಯ. ಕೋರಿಕೆ ಆಧರಿಸಿ ಮನೆ ಊಟ ತರಿಸಿಕೊಳ್ಳಲು ಅನುಮತಿಸಲಾಗದು,'' ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳಾದ ನಟ ದರ್ಶನ್, ಪವಿತ್ರಾ ಗೌಡ ಮತ್ತು ಇತರರಿಗೆ ಮನೆ ಊಟ ನೀಡುವಂತೆ ವಿಚಾರಣಾ ನ್ಯಾಯಾಲಯ ನೀಡಿದ್ದ ಆದೇಶವನ್ನು ಇದೀಗ ಹೈಕೋರ್ಟ್ ತಡೆ ಹಿಡಿದಿದೆ.

ಈ ನಿಟ್ಟಿನಲ್ಲಿ ರಾಜ್ಯ ಸರಕಾರ ಸಲ್ಲಿಸಿದ್ದ ಅರ್ಜಿಯನ್ನು ಪರಿಶೀಲಿಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠ ವೈದ್ಯಕೀಯ ಶಿಫಾರಸು ಇಲ್ಲದೆ ಮನೆ ಊಟಕ್ಕೆ ಅವಕಾಶವಿಲ್ಲ ಎಂದು ಸ್ಪಷ್ಟಪಡಿಸಿದೆ. ತಾರತಮ್ಯದ ವಿನಾಯಿತಿಗಳು ಜೈಲು ನಿರ್ವಹಣೆಯಲ್ಲಿ ಗೊಂದಲ ಉಂಟುಮಾಡುತ್ತವೆ ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ.

## ಕರ್ನಾಟಕ ಪೊಲೀಸ್ 8,176 ಹುದ್ದೆ ನೇಮಕ ಪ್ರಕ್ರಿಯೆಗೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಗೃಹ ಇಲಾಖೆಯಲ್ಲಿ ಖಾಲಿಯಿರುವ 8,176 ಹುದ್ದೆಗಳನ್ನು ನೇರ ನೇಮಕಾತಿ ಮಾಡಿಕೊಳ್ಳಲು ರಾಜ್ಯ ಸರಕಾರ ಮಂಜೂರಾತಿ ನೀಡಿದೆ. ಜಿಲ್ಲಾವಾರು ಖಾಲಿ ಹುದ್ದೆಗಳ ಹಂಚಿಕೆ ಮಾಡಿದ್ದು, ಬೆಂಗಳೂರಿನಲ್ಲಿ 3 ಸಾವಿರಕ್ಕೂ ಅಧಿಕ ಹುದ್ದೆಗೆ ನೇಮಕ ಮಾಡಿಕೊಳ್ಳಲಾಗುತ್ತಿದೆ.

ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ರಾಜ್ಯ ಸರಕಾರವು ಅನುಮತಿ ನೀಡಿದೆ. ಈ ಬೆನ್ನಲ್ಲೇ ವಿವಿಧ ಘಟಕಗಳಿಗೆ ಹಂಚಿಕೆಯಾಗಿರುವ ಹುದ್ದೆಗಳ ಮಾಹಿತಿಯನ್ನು ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿ ನೇಮಕಾತಿ ವಿಭಾಗಕ್ಕೆ ರವಾನಿಸಿದೆ. ಗೃಹ ಇಲಾಖೆಯಲ್ಲಿಖಾಲಿಯಿರುವ ಹುದ್ದೆಗಳನ್ನು ನಗರ, ಜಿಲ್ಲಾಹಾಗೂ ಘಟಕಗಳಿಗೆ ಮರು ಹಂಚಿಕೆ ಮಾಡಿ, ತಮ್ಮ ಘಟಕಗಳಿಗೆ ಹಂಚಿಕೆಯಾಗಿರುವ ಹುದ್ದೆಗಳಿಗೆ ಸಂಬಂಧಿಸಿದ ವರ್ಗೀಕರಣದ ವಿವರವನ್ನು ಪೊಲೀಸ್ ನೇಮಕಾತಿ ವಿಭಾಗಕ್ಕೆ ಒದಗಿಸುವಂತೆ ಈ ಹಿಂದೆ ನಿರ್ದೇಶನ ನೀಡಲಾಗಿತ್ತು. ವಿವಿಧ ಘಟಕಗಳಿಗೆ ಚಾಲ್ತಿ ಮೀಸಲು/ರೋಸ್ಟರ್ ನಿಯಮಗಳ ಅನ್ವಯ ವರ್ಗೀಕರಣದ ವಿವರವನ್ನು ಪೊಲೀಸ್ ನೇಮಕಾತಿ ವಿಭಾಗಕ್ಕೆ ರವಾನೆ ಮಾಡಲಾಗಿದೆ.

# ರಾಜ್ಯದ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಸಿದ್ದರಾಮಯ್ಯ 17ನೇ ಬಜೆಟ್ ನೇರ ಪ್ರಸಾರ!

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರು ಶುಕ್ರವಾರದಂದು ತಮ್ಮ 17 ನೇ ಬಜೆಟ್ ಮಂಡನೆ ಮಾಡಲಿದ್ದಾರೆ. ಈಗಾಗಲೇ 16 ಬಜೆಟ್ ಮಂಡನೆ ಮಾಡುವ ಮೂಲಕ ಸಿದ್ದರಾಮಯ್ಯ ದಾಖಲೆ ನಿರ್ಮಿಸಿದ್ದಾರೆ. ಶುಕ್ರವಾರ ಮಂಡನೆ ಮಾಡಲಿರುವ 17 ನೇ ಬಜೆಟ್ ರಾಜ್ಯದ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ನೇರ ಪ್ರಸಾರ ಮಾಡಲು ನಿರ್ಧಾರ ಮಾಡಲಾಗಿದೆ.

17ನೇ ಬಾರಿ ಬಜೆಟ್ ಮಂಡಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆ ಸೃಷ್ಟಿಸಿದ್ದು, ಈ ಬಜೆಟ್ ಮಂಡನೆಯ ನೇರಪ್ರಸಾರವನ್ನು ರಾಜ್ಯದ ಆಯ್ದ ಬಸ್ ನಿಲ್ದಾಣದ ಟಿವಿಗಳಲ್ಲಿ ಹಮ್ಮಿಕೊಳ್ಳಲಾಗಿದೆ. ರಾಜ್ಯದ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಪ್ರಸಾರ ಮಾಡಲು ಉದ್ದೇಶಿಸಿದೆ.

ಕರ್ನಾಟಕ ರಾಜ್ಯದ ಸುದೀರ್ಘ ಅವಧಿಗೆ ಮುಖ್ಯಮಂತ್ರಿ ಆಗಿ ಕಾರ್ಯನಿರ್ವಹಿಸುತ್ತಿರುವ ಸಿದ್ದರಾಮಯ್ಯ ವಿಧಾನಸೌಧದಲ್ಲಿ ಮಂಡಿಸಲಿರುವ ಮಹತ್ವದ ಬಜೆಟ್ ನೇರ ಪ್ರಸಾರವನ್ನು ರಾಜ್ಯದ ಜನತೆಗೆ ತಲುಪಿಸುವ ಉದ್ದೇಶದಿಂದ ವೃತ್ತಿ ಸೊಲ್ಯೂಷನ್ಸ್ ಲಿಮಿಟೆಡ್ ಸಂಸ್ಥೆಯು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ನೇರ ಪ್ರಸಾರ ಹಮ್ಮಿಕೊಳ್ಳಲಾಗಿದೆ.



**ನೇರವಾಗಿ ಮಾಹಿತಿ ಪಡೆಯುವ ಅವಕಾಶ**

ರಾಜ್ಯದಾದ್ಯಂತ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಇರುವ ತನ್ನ ಡಿಜಿಟಲ್ ಡಿಸ್ಪ್ಲೇ ಪರದೆಗಳ ಮೂಲಕ ನೇರ ಪ್ರಸಾರ ಮಾಡಲು ಮುಂದಾಗಿದೆ. ವಿಧಾನಸೌಧದಲ್ಲಿ ನಡೆಯುವ ಬಜೆಟ್ ಮಂಡನೆ ಹಾಗೂ ಬಳಿಕ ನಡೆಯಲಿರುವ ಮುಖ್ಯಮಂತ್ರಿಗಳ ಪತ್ರಿಕಾಗೋಷ್ಠಿಯ ನೇರ ಪ್ರಸಾರವನ್ನು ರಾಜ್ಯದ ವಿವಿಧ ಬಸ್ ನಿಲ್ದಾಣಗಳಲ್ಲಿ ಜನರು ವೀಕ್ಷಿಸುವ ಅವಕಾಶ ಕಲ್ಪಿಸಲಾಗುತ್ತದೆ. ಈ ಮೂಲಕ ರಾಜ್ಯದ ಜನತೆಗೆ ಸರ್ಕಾರದ ಬಜೆಟ್ ಕುರಿತು ನೇರವಾಗಿ ಮಾಹಿತಿ ಪಡೆಯುವ ಅವಕಾಶ ಕಲ್ಪಿಸಲಾಗುತ್ತಿದೆ.

ಸಿಎಂ ಸಿದ್ದರಾಮಯ್ಯ ಅವರು ಶುಕ್ರವಾರ ಬಜೆಟ್ ಮಂಡನೆ ಮಾಡುವ ನಿಟ್ಟಿನಲ್ಲಿ ಅಂತಿಮ ಹಂತದ ಸಿದ್ದತೆಯಲ್ಲಿ ತೊಡಗಿಕೊಂಡಿದ್ದಾರೆ.

ಇದೇ ಸಂದರ್ಭದಲ್ಲಿ ಬಜೆಟ್ ಬಗ್ಗೆ ಟೀಕೆ ಮಾಡಿರುವ ವಿಪಕ್ಷ ನಾಯಕ ಆರ್ ಅಶೋಕ್ 'ಸಿದ್ದರಾಮಯ್ಯ ಸಾಲದ ರಾಮಯ್ಯವಾಗಿದ್ದಾರೆ. ಜನರಿಗೆ ಹೊರೆಯಾಗದ ಬಜೆಟ್ ನೀಡಬೇಕು. ಸಾಲದ ಕೂಪಕ್ಕೆ ಹೋಗದಂತೆ ಬಜೆಟ್ ಮಂಡನೆ ಮಾಡಬೇಕು. ಸಾಲ ಮಾಡಿ ಸರ್ಕಾರ ನಡೆಸಲು ನೀವೇ ಬೇಕಾ. ಸಾಲ ಮಾಡಿ ಸರ್ಕಾರ ನಡೆಸಲು ಸಿದ್ದರಾಮಯ್ಯ ಯಾಕೆ ಬೇಕು ಎಂದು ಪ್ರಶ್ನಿಸಿದ್ದಾರೆ.

ಜನ ಸಿಎಂ ಸಿದ್ದರಾಮಯ್ಯ ಬಗ್ಗೆ ಏನು ಆಸೆ ಪಟ್ಟಿದ್ದರು ಅದು ಹುಸಿಯಾಗಿದೆ. ಬಸವರಾಜ ಬೊಮ್ಮಾಯಿ ಸಾಲ ಇಲ್ಲದ ಬಜೆಟ್ ಮಂಡನೆ ಮಾಡಿದ್ದರು.

ಈ ಬಾರಿ ಒಂದು ಲಕ್ಷ ಕೋಟಿ ಸಾಲ ಮಾಡುವ ಸಾಧ್ಯತೆ ಇದೆ. ಒಳಜಗಳದಿಂದ ಸರ್ಕಾರ ಸತ್ತು ಹೋಗಿದೆ.ಬಜೆಟ್ ನಲ್ಲಿ ಹೊಸತನ ಇರಲ್ಲ, ಕೇಂದ್ರವನ್ನು ಬೈಯೋದೇ ಬಜೆಟ್ ಆಗಿದೆ. ಕಳೆದ ಬಾರಿಯ ಬಜೆಟ್ ನಲ್ಲಿ ಘೋಷಣೆ ಆಗಿದ್ದ 9% ಅನುಷ್ಠಾನ ಆಗಿದೆ. ತೆರಿಗೆ ಸಂಗ್ರಹದಲ್ಲಿ ಸರ್ಕಾರ ಹಿನ್ನಡೆ ಅನುಭವಿಸಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

# ದಾವಣಗೆರೆ ದಕ್ಷಿಣ ಅಭ್ಯರ್ಥಿ ಆಯ್ಕೆಯಲ್ಲಿ ಗೊಂದಲ

## ■ ಬಿಜೆಪಿ ಬಣಗಳ ನಡುವೆ ಸಂಘರ್ಷ ■ ಸಮಸ್ಯೆ ಬಗೆಹರಿಸ್ತಾರಾ ಉಸ್ತುವಾರಿ ಅಗರವಾಲ್

• ಉದಯವಾಹಿನಿ, ದಾವಣಗೆರೆ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗೆ ಬಿಜೆಪಿ ಅಭ್ಯರ್ಥಿ ಆಯ್ಕೆಯಲ್ಲಿ ಗೊಂದಲ ತೀವ್ರಗೊಂಡಿದೆ. ಬಿಜೆಪಿ ಬಣಗಳ ನಡುವೆ ಸಂಘರ್ಷ ಜೋರಾಗಿದ್ದು, ಸಮಸ್ಯೆ ಬಗೆಹರಿಸಲು ಸ್ವತಃ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ಅಗರವಾಲ್ ಅಖಾಡಕ್ಕೆ ಇಳಿದಿದ್ದಾರೆ. ದಾವಣಗೆರೆಯ 8 ಕ್ಷೇತ್ರಗಳ ಅಭ್ಯರ್ಥಿಗಳ ಹೆಸರನ್ನು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಘೋಷಣೆ ಮಾಡಿದ್ದರು. ಇದಕ್ಕೆ ರೆಬೆಲ್ಸ್ ಬಣ ತೀವ್ರ ವಿರೋಧ ಸೂಚಿಸಿದೆ.

ಈ ನಡುವೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹಾಗೂ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ಅಗರ್ವಾಲ್ ಅವರು ಭೇಟಿ ನೀಡಿ ಸ್ಥಳೀಯ ನಾಯಕರ ಜೊತೆಗೆ ಮಾತುಕತೆಯನ್ನು ನಡೆಸಿದ್ದಾರೆ. ಇದಾಗ ಬಳಿಕ ಮಾತನಾಡಿರುವ ವಿಜಯೇಂದ್ರ

ದಾವಣಗೆರೆ ದಕ್ಷಿಣಕ್ಕೆ 8 ರಿಂದ 10 ಜನ ಆಕಾಂಕ್ಷಿಗಳಿದ್ದಾರೆ. ನಾಲ್ಕೈದು ಜನರನ್ನು ಭೇಟಿ ಮಾಡಿದ್ದೇವೆ. ಮಾಜಿ ಸಂಸದ ಸಿದ್ದೇಶ್ವರ್ ಅವರನ್ನೂ ಭೇಟಿ ಮಾಡುತ್ತೇವೆ ಎಂದು ಹೇಳಿದರು. ಅಲ್ಲಿ ಕೂಡ ಮೂರ್ನಾಲ್ಕು ಜನ ಆಕಾಂಕ್ಷಿಗಳಿದ್ದು ಅವರನ್ನು ಮಾತನಾಡಿಸುತ್ತೇವೆ ಎಂದರು.

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಳೆದ ಒಂದು ವಾರದಿಂದ ಸಂಘಟನೆ ಕೆಲಸ ನಡೆಯುತ್ತಿದೆ. ದಾವಣಗೆರೆ ಜಿಲ್ಲೆ ಮತ್ತು ಅಕ್ಕಪಕ್ಕದ ಜಿಲ್ಲೆಯ 150ಕ್ಕೂ ಹೆಚ್ಚು ಕಾರ್ಯಕರ್ತರು ಬಂದು 'ವಿಸ್ತಾರಕ್ ಯೋಜನೆ' ನಡೆಸುತ್ತಿದ್ದಾರೆ. ಪ್ರತಿ ಬೂತ್‌ನಲ್ಲಿ ಒಂದು ವಾರ ಇದ್ದು, ಬೂತ್ ನಲ್ಲಿರುವ ವಿಚಾರಗಳನ್ನು ಅರ್ಥ ಮಾಡಿಕೊಳ್ಳುವುದು, ಕಾರ್ಯಕರ್ತರಿಗೆ ಧೈರ್ಯ ತುಂಬುವುದು, ಸಂಘಟನಾತ್ಮಕವಾಗಿ ಏನೇನು ಕೆಲಸ ಮಾಡಬೇಕೋ ಅವೆಲ್ಲವನ್ನೂ ಮಾಡಿದ್ದಾರೆ ಎಂದರು.



**ರೆಬೆಲ್ ಬಣ ತೀವ್ರ ವಿರೋಧ**

**ಸಿದ್ದೇಶ್ವರ್ ಮತ್ತು ರೇಣುಕಾಚಾರ್ಯ ಬಣಗಳ ನಡುವೆ ಸಂಧಾನಕ್ಕೆ ಯತ್ನ:** ದಾವಣಗೆರೆ ದಕ್ಷಿಣ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಜ ಎಂ ಸಿದ್ದೇಶ್ವರ್ ಮತ್ತು ರೇಣುಕಾಚಾರ್ಯ ಬಣಗಳ ನಡುವೆ ಸಂಧಾನಕ್ಕೆ ಯತ್ನ ನಡೆಯುತ್ತಿದೆ. ಒಮ್ಮತದ ಅಭ್ಯರ್ಥಿ ಆಯ್ಕೆ, ಚುನಾವಣಾ ತಯಾರಿ, ತಂತ್ರಗಾರಿಕೆ ಬಗ್ಗೆ ವಿಜಯೇಂದ್ರ ನೇತೃತ್ವದಲ್ಲಿ ಚರ್ಚೆ ನಡೆದಿದೆ.

**ಬಿಎಸ್‌ವೈ ಹೇಳಿಕೆ ಹಿಂಪಡೆಯಬೇಕು ಎಂದು ಆಗ್ರಹ**

ದಾವಣಗೆರೆ ಬಿಜೆಪಿ ಅಭ್ಯರ್ಥಿ ಆಯ್ಕೆ ವಿಚಾರವಾಗಿ ಬಿಎಸ್ ಯಡಿಯೂರಪ್ಪ ಅವರು ನೀಡಿರುವ ಹೇಳಿಕೆಯನ್ನು ಹಿಂಪಡೆಯಬೇಕು ಎಂದು ರೆಬೆಲ್ ಬಣ ಆಗ್ರಹಿಸಿದೆ. ಮಾಜಿ ಸಂಸದ ಜಿ ಎಂ ಸಿದ್ದೇಶ್ವರ್ ನೇತೃತ್ವದಲ್ಲಿ ಬಿಎಸ್ ಯಡಿಯೂರಪ್ಪ ನೀಡಿದ್ದ ಹೇಳಿಕೆಗೆ ತೀವ್ರ ವಿರೋಧ ವ್ಯಕ್ತವಾಗಿದೆ. ಬಿಎಸ್‌ವೈ ಹೇಳಿಕೆಗೆ ಖಂಡಿಸಿ ಜಿಎಂ ಸಿದ್ದೇಶ್ವರ ಅವರ ನೇತೃತ್ವದಲ್ಲಿ ಜಿಲ್ಲೆಯ ಎಲ್ಲಾ ಕ್ಷೇತ್ರಗಳ ಮುಖಂಡರ ಸಭೆಯನ್ನು ಕರೆಯಲಾಗಿತ್ತು. ಪ್ರತಿ ಕ್ಷೇತ್ರದಿಂದ 100ಕ್ಕೂ ಅಧಿಕ ಮುಖಂಡರು ಈ ಸಭೆಯಲ್ಲಿ ಭಾಗವಹಿಸುವಂತೆ ಸೂಚಿಸಲಾಗಿತ್ತು. ರಾಷ್ಟ್ರೀಯ ನಾಯಕರನ್ನು ಭೇಟಿ ಮಾಡುವುದು ಹಾಗೂ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ನ್ಯಾಯ ಒದಗಿಸಲು ಹೋರಾಟದ ರೂಪುರೇಷೆ ಮಾಡುವ ನಿಟ್ಟಿನಲ್ಲಿಯೂ ಈ ಬಣ ಸಿದ್ದತೆ ಮಾಡಿಕೊಳ್ಳುತ್ತಿದೆ.

ಜಿ ಎಂ ಸಿದ್ದೇಶ್ವರ್ ಬಣಕ್ಕೂ ಸಭೆಗೆ ಆಹ್ವಾನ ನೀಡಲಾಗಿತ್ತು. ಆದರೆ ಅವರು ಭಾಗಿಯಾಗಿರಲಿಲ್ಲ.

ಹೊನ್ನಾಳಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಜಿ ಸಿಎಂ ಯಡಿಯೂರಪ್ಪ ಕೆಲ ಕ್ಷೇತ್ರಗಳ ಅಭ್ಯರ್ಥಿಗಳ ಹೆಸರನ್ನು ಘೋಷಣೆ ಮಾಡಿದ್ದರು.

ಈ ಹಿನ್ನೆಲೆಯಲ್ಲಿ ಬಿಎಸ್ ಯಡಿಯೂರಪ್ಪ ಹಾಗೂ ವಿಜಯೇಂದ್ರ ವಿರುದ್ಧ ಮಾಜಿ ಸಂಸದ ಜಿಎಂ ಸಿದ್ದೇಶ್ವರ್ ಟೀಮ್ ತಿರುಗಿ ಬಿದ್ದಿದೆ. ಚುನಾವಣೆಗೆ ಇನ್ನೂ ಎರಡು ವರ್ಷ ಅವಧಿ ಇರುವಾಗಲೇ ಅಭ್ಯರ್ಥಿಗಳ ಘೋಷಣೆ ಮಾಡಿದ್ದಾರೆ.

ಅ ಹೇಳಿಕೆ ಹಿಂಪಡೆಯಬೇಕು ಎಂದು ಜಿಎಂ ಸಿದ್ದೇಶ್ವರ್ ಆಪ್ತ ಬಣದ ಆಗ್ರಹವಾಗಿದೆ.

**ಸಮಸ್ಯೆ ಬಗೆಹರಿಸುತ್ತೇವೆ:** ಏನೇ ವ್ಯತ್ಯಾಸಗಳಿದ್ದರೂ ಅದನ್ನು ಸರಿಪಡಿಸುವ ಶಕ್ತಿ ನಮ್ಮೆಲ್ಲರಲ್ಲೂ ಇದೆ. ಹಾಗಾಗಿ ನಾನು ಇಲ್ಲಿಗೆ ಬಂದಿದ್ದೇನೆ. ನಮ್ಮ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯದ ಉಸ್ತುವಾರಿಗಳಾದ ರಾಧಾಮೋಹನ್ ದಾಸ್ ಅಗ್ರವಾಲ್ ಅವರೂ ಬಂದಿದ್ದಾರೆ. ಎಲ್ಲರೂ ಕುಳಿತು ಸಮಸ್ಯೆ ಬಗೆಹರಿಸುತ್ತೇವೆ. ಇದನ್ನು ಮುಂದುವರೆಯಲು ಬಿಡುವುದಿಲ್ಲ ಎಂದು ವಿಜಯೇಂದ್ರ ತಿಳಿಸಿದ್ದಾರೆ.

**ಈ ದಿನದ ದರ** ಪೆಟ್ರೋಲ್: 102.96 ₹/L ಡೀಸೆಲ್ : 91.52 ₹/L ಬಂಗಾರ: ₹16,288/Gram24ct ₹14,930/Gram22ct ಬೆಳ್ಳಿ: ₹285.00/Gram

## ಜಯನಗರ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ವಿಶೇಷ ಪೂಜೆ, ಅನ್ನದಾನ ಸೇವೆ , ನರ್ತನ ಸೇವೆ


ಉದಯವಾಹಿನಿ ಚಿತ್ರ

• ಉದಯವಾಹಿನಿ,ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್‌ಕೆ ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಮಾರ್ಚ್ 5, ಗುರುವಾರ ಬೆಳಗ್ಗೆ ರಾಯರಿಗೆ ಪಂಚಾಮೃತ ಅಭಿಷೇಕ, ಕನಕಾಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ ಹಾಗೂ ಅನ್ನದಾನ ಸೇವೆ ಕಾರ್ಯಕ್ರಮಗಳು ನಡೆದವು. ಸಂಜೆಯ ಕಾರ್ಯಕ್ರಮದಲ್ಲಿ ರಥೋತ್ಸವ, ಗಜವಾಹನೋತ್ಸವ, ಅಷ್ಟಾವಧಾನ, ತೊಟ್ಟಿಲು ಪೂಜೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ವಿದುಷಿ

ಶ್ರೀಮತಿ ಗೌರಿ ಸಾಗರ್ ಅವರ ನಿರ್ದೇಶನದಲ್ಲಿ ಶ್ರೀ ಶ್ರೀಕಂಠೇಶ್ವರ ಕಲಾ ಕೇಂದ್ರದ ವಿದ್ಯಾರ್ಥಿಗಳಿಂದ ನರ್ತನ ಸೇವೆಗಳು ಜರುಗಿದವು ಎಂದು ಶ್ರೀ ನಂದಕಿಶೋರ್ ಆಚಾರ್ ಅವರು ತಿಳಿಸಿದ್ದಾರೆ.

## ಡ್ರಗ್ ಸೇವನೆ ತಪಾಸಣೆ

• ಉದಯವಾಹಿನಿ, ಬೆಂಗಳೂರು

ಡ್ರಗ್ ರಹಿತ ಸಮಾಜ ನಿರ್ಮಾಣಕ್ಕಾಗಿ ಕರ್ನಾಟಕ ಪೊಲೀಸ್ ಆರಂಭಿಸಿರುವ ಸನ್ಮಿತ್ರ ಉಪಕ್ರಮದ ಭಾಗವಾಗಿ ಪಶ್ಚಿಮ ಬೆಂಗಳೂರು ವಿಭಾಗದ ಶಿಕ್ಷಣ ಸಂಸ್ಥೆಗಳಲ್ಲಿ ನಡೆಸಿದ ಡ್ರಗ್ ತಪಾಸಣೆಯಲ್ಲಿ 31 ವಿದ್ಯಾರ್ಥಿಗಳು ಡ್ರಗ್ ಸೇವನೆ ಮಾಡಿದಿರುವುದು ಪತ್ತೆಯಾಗಿದೆ. ಅಧಿಕಾರಿಗಳ ಪ್ರಕಾರ, 1,200 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮೂತ್ರದ ಸ್ಯಾಂಪಲ್ ನೀಡಿದ್ದಾರೆ. ಅವುಗಳಲ್ಲಿ 585 ಪರೀಕ್ಷಿಸಲಾಗಿದ್ದು, 31 ವಿದ್ಯಾರ್ಥಿಗಳ ವರದಿ ಪಾಸಿಟಿವ್ ಎಂದು ದೃಢಪಟ್ಟಿವೆ.

ಡ್ರಗ್ ಸೇವನೆ ಪತ್ತೆಯಾದ ವಿದ್ಯಾರ್ಥಿಗಳಿಗೆ ಮಾನಸಿಕ ಆರೋಗ್ಯ ತಜ್ಞರಿಂದ ಕೌನ್ಸೆಲಿಂಗ್ ಹಾಗೂ ಅಗತ್ಯ ವೈದ್ಯಕೀಯ ನೆರವು ನೀಡಲಾಗುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ. ವಿದ್ಯಾರ್ಥಿಗಳ ಹೆಸರು ಮತ್ತು ಕುಟುಂಬದ ವಿವರಗಳನ್ನು ಸಂಪೂರ್ಣವಾಗಿ ಗೌಪ್ಯವಾಗಿರಿಸಲಾಗುತ್ತದೆ .

ವಿವಿಧ ರಾಜ್ಯಗಳು ಮತ್ತು ಜಿಲ್ಲೆಗಳಿಂದ ಬಂದಿರುವ ವಿದ್ಯಾರ್ಥಿಗಳಿಂದ ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇತರ ಕಾಲೇಜುಗಳಲ್ಲೂ ಈ ಅಭಿಯಾನ ಮುಂದುವರಿಯಲಿದೆ. ಪೋಷಕರನ್ನೂ ಕೌನ್ಸೆಲಿಂಗ್ ಪ್ರಕ್ರಿಯೆಯಲ್ಲಿ ಒಳಗೊಳ್ಳಿಸಲಾಗುತ್ತದೆ ಎಂದು ಪಶ್ಚಿಮ ವಿಭಾಗದ ಡಿಸಿಪಿ ಯತೀಶ್ ಎನ್. ತಿಳಿಸಿದ್ದಾರೆ.

## ಮೈತ್ರಿ ಪಕ್ಷದ ವಿರೋಧಿಯನ್ನು ಜೆಡಿಎಸ್‌ಗೆ ಸೇರಿಸಿಕೊಂಡ ಕುಮಾರಣ್ಣ: ಭುಗಿಲೆದ್ದ ಅಸಮಾಧಾನ

• ಉದಯವಾಹಿನಿ,ಬೆಂಗಳೂರು

ಕೋಲಾರ ಜಿಲ್ಲೆಯ ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ಮಹತ್ವದ ರಾಜಕೀಯ ಬೆಳವಣಿಗೆ ನಡೆದಿದೆ. 2023ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ವಿರುದ್ಧ ಬಂಡಾಯದಿಂದ ಸ್ಪರ್ಧಿಸಿ ಸೋತಿದ್ದ ಹೂಡಿ ವಿಜಯ್ ಕುಮಾರ್ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ. ಬಿಜೆಪಿಯಿಂದ ಬಂಡಾಯವೆದ್ದು ಮಾಲೂರು ಸ್ವಾಭಿಮಾನಿ ಜನತಾ ಪಕ್ಷದಿಂದ ನಿಂತು ಸೋತಿದ್ದ ವಿಜಯ್ ಕುಮಾರ್ ಬೆಂಗಳೂರಿನ ಜೆಪಿ ಭವನದಲ್ಲಿ ಕೇಂದ್ರ ಸಚಿವ ಮತ್ತು ಜೆಡಿಎಸ್ ರಾಜ್ಯಾಧ್ಯಕ್ಷ ಎಚ್‌ಡಿ ಕುಮಾರಸ್ವಾಮಿ ಜೆಡಿಎಸ್ ವರಿಷ್ಠ ಎಚ್‌ಡಿ ದೇವೇಗೌಡ, ನಿಖಿಲ್‌ಕುಮಾರಸ್ವಾಮಿ ಸಮ್ಮುಖದಲ್ಲಿ ಜೆಡಿಎಸ್ ಸೇರ್ಪಡೆಯಾದರು.

## ಆರ್ಥಿಕ 'ಶಕ್ತಿ' ಕಳೆದುಕೊಂಡ ಸಾರಿಗೆ ನಿಗಮ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಒದಗಿಸಿದೆ. ಈ ಶಕ್ತಿ ಯೋಜನೆ ಜನಪ್ರಿಯವಾಗಿದ್ದರೂ, ರಾಜ್ಯದ ನಾಲ್ಕು ಸಾರಿಗೆ ನಿಗಮಗಳಿಗೆ ಇದು ಭಾರೀ ಆರ್ಥಿಕ ಹೊರೆಯಾಗಿ ಪರಿಣಮಿಸಿದೆ. ಯೋಜನೆಯ ಅನುಷ್ಠಾನದ ನಂತರ ನಗದು ಹರಿವಿನ ತೀವ್ರ ಕೊರತೆ ಉಂಟಾಗಿದ್ದು, ಸಿಬ್ಬಂದಿಗಳ ಭವಿಷ್ಯ ನಿಧಿ, ಗ್ರ್ಯಾಚ್ಯುಟಿ, ಉಪದಾನ ಮತ್ತು ದೈನಂದಿನ ಕಾರ್ಯಾಚರಣೆ ವೆಚ್ಚ ಭರಿಸುವುದು ಕಷ್ಟವಾಗಿದೆ. ಈ ಬಗ್ಗೆ HTSUA ಅಧ್ಯಕ್ಷರು ಮತ್ತು ಎಂಡಿ ಅಕ್ರಂ ಪಾಷಾ ಅವರು ಸಾರಿಗೆ ಇಲಾಖೆ ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ ಸ್ಫೋಟಕ ಮಾಹಿತಿಗಳು ಬಹಿರಂಗವಾಗಿವೆ.

## ಇಂದು ಗುತ್ತಿಗೆದಾರರ ಪ್ರತಿಭಟನೆ, ಎಲ್ಲಾ ಕಾಮಗಾರಿಗಳು ಬಂದ್

• ಉದಯವಾಹಿನಿ,ಬೆಂಗಳೂರು

ಕರ್ನಾಟಕ ರಾಜ್ಯ ಗುತ್ತಿಗೆದಾರರು ಕರೆದಿರುವ ಪ್ರತಿಭಟನೆಗೆ ಜಿಬಿಎ ನಗರ ಪಾಲಿಕೆಗಳ ಕಾರ್ಯನಿರತ ಗುತ್ತಿಗೆದಾರರ ಸಂಘ ಬೆಂಬಲ ವ್ಯಕ್ತಪಡಿಸಿರುವುದರಿಂದ ನಾಳಿನ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡಿದೆ. ಬಾಕಿ ಬಿಲ್ ಪಾವತಿಗಾಗಿ ಮತ್ತು ಇನ್ನಿತರ ಬೇಡಿಕೆಗಳನ್ನು ಈಡೇರಿಸುವಂತೆ ರಾಜ್ಯ ಸಂಘದವರು ಕರೆದಿರುವ ಪ್ರತಿಭಟನೆ ಗೆ ಜಿಬಿಎ ನಗರ ಪಾಲಿಕೆಗಳ ಕಾರ್ಯನಿರತ ಗುತ್ತಿಗೆದಾರರ ಸಂಘದ ವತಿಯಿಂದ ಸಂಪೂರ್ಣ ಬೆಂಬಲ ನೀಡಲಾಗುತ್ತಿದೆ ಎಂದು ಸಂಘದ ಅಧ್ಯಕ್ಷ ಕೆ.ಟಿ. ಮಂಜುನಾಥ್ ತಿಳಿಸಿದ್ದಾರೆ. ರಾಜ್ಯದ ಇತರ ಗುತ್ತಿಗೆದಾರರಂತೆ ಜಿಬಿಎ ಗುತ್ತಿಗೆದಾರರು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ನಮ ಸಮಸ್ಯೆ ನಿವಾರಿಸುವಂತೆ ಸರ್ಕಾರದ ಗಮನ ಸೆಳೆದರೂ ಯಾವುದೆ ಪ್ರಯೋಜನವಾಗುತ್ತಿಲ್ಲ, ಮುಖ್ಯವಾಗಿ ಕಳೆದ ಐದು ವರ್ಷಗಳಿಂದ ತಡೆ ಹಿಡಿದಿರುವ ಗುತ್ತಿಗೆದಾರರ ಶೇ 10% ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು,

## ರಾಜ್ಯದ ವಿವಿಧ ಭಾಗಗಳಲ್ಲಿ ಹಿಂದೂಗಳ ಮೇಲೆ ನಡೆಯುತ್ತಿರುವ ದಾಳಿಗಳ ಬಗ್ಗೆ ತಕ್ಷಣ ಕಠಿಣ ಕ್ರಮ ಕೈಗೊಳ್ಳಿ !

### ಬೆಂಗಳೂರು ಜಿಲ್ಲಾಧಿಕಾರಿಗಳ ಕಛೇರಿಯ ಮೂಲಕ ಗೃಹ ಸಚಿವರು,ಪೊಲೀಸ್ ಮಹಾನಿರ್ದೇಶಕರಿಗೆ ಮನವಿ

• ಉದಯವಾಹಿನಿ,ಬೆಂಗಳೂರು

ಇತ್ತೀಚಿನ ದಿನಗಳಲ್ಲಿ ಕರ್ನಾಟಕದ ವಿವಿಧ ಭಾಗಗಳಲ್ಲಿ ಹಿಂದೂ ಸಮುದಾಯ, ಅವರ ಮನೆಗಳು, ಶಾಂತಿಯುತ ಮೆರವಣಿಗೆಗಳು ಹಾಗೂ ವ್ಯಕ್ತಿಗಳ ಮೇಲೆ ನಿರಂತರವಾಗಿ ದಾಳಿ ನಡೆಯುತ್ತಿರುವ ಘಟನೆಗಳು ಬೆಳಕಿಗೆ ಬರುತ್ತಿದ್ದು, ಇದು ರಾಜ್ಯದ ಕಾನೂನು-ಸುವ್ಯವಸ್ಥೆಗೆ ಗಂಭೀರ ಸವಾಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯು ತೀವ್ರ ಆತಂಕ ವ್ಯಕ್ತಪಡಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಇಂದು ಬೆಂಗಳೂರು ಜಿಲ್ಲಾಧಿಕಾರಿಗಳ ಕಛೇರಿಯ ಮೂಲಕ ಗೃಹ ಸಚಿವರಿಗೆ ಮತ್ತು ಪೊಲೀಸ್ ಮಹಾನಿರ್ದೇಶಕರಿಗೆ ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯಿಂದ ಮನವಿ ಸಲ್ಲಿಸಲಾಯಿತು. ಈ ಸಂಧರ್ಭದಲ್ಲಿ ಭಜರಂಗದಳದ ಶ್ರೀ.ಎಂ.ಎಲ್. ಶಿವಕುಮಾರ್, ವಕೀಲರಾದ ಶ್ರೀ. ತ್ಯಾಗರಾಜ್, ಹಿಂದೂ ಮುಖಂಡರಾದ ಶ್ರೀ.ಪುರುಷೋತ್ತಮ್, ಶ್ರೀ. ಸಿದ್ದರಾಜು, ಸೌ.ಜ್ಯೋತಿ ಗೌಡ , ಶ್ರೀ. ಶಿವಯ್ಯ ಶಾಸ್ತ್ರೀ, ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ಸದಸ್ಯರಾದ ಶ್ರೀ. ನಾರಾಯಣ ಗೌಡ,ಶ್ರೀ.ರವಿಶಂಕರ್, ಕು. ಸುಮತಿ ಹಾಗೂ ವಿವಿಧ ಹಿಂದೂ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

**ಘಟನೆಗಳ ವಿವರ:** 1.ಫೆಬ್ರವರಿ 22 ರಂದು ಬಾಗಲಕೋಟೆಯಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಅಂಗವಾಗಿ ನಡೆಯುತ್ತಿದ್ದ ಭವ್ಯ ಮೆರವಣಿಗೆಯ ಮೇಲೆ ಕಿಲ್ಲಾದ ಪಂಕಾ ಮಸೀದಿ ಬಳಿ ಕೆಲವು ಮುಸ್ಲಿಂ ಯುವಕರು ಕಲ್ಲು ತೂರಾಟ ನಡೆಸಿದರು. ಈ ದಾಳಿಯಲ್ಲಿ ಕರ್ತವ್ಯದಲ್ಲಿದ್ದ ಎಸ್‌ಪಿ ಸಿದ್ದಾರ್ಥ್ ಗೋಯಲ್ ಸೇರಿದಂತೆ ಕೆಲವರಿಗೆ ಗಾಯಗಳಾಗಿವೆ. ಶಾಂತಿಯುತ ಮೆರವಣಿಗೆಯ


ಉದಯವಾಹಿನಿ ಚಿತ್ರ

ಮೇಲೆ ನಡೆದ ಈ ದಾಳಿ ಅತ್ಯಂತ ಖಂಡನೀಯ. 2.ಫೆಬ್ರವರಿ 24, ಚಿಕ್ಕಮಗಳೂರು (ತಿಲಕ್ ಪಾರ್ಕ್ ಸಮೀಪ): ಕಳೆದ ಒಂದು ವಾರದಿಂದ ಹಿಂದೂಗಳ ಮನೆಯ ಮೇಲೆ ಆಗಾಗ ಕಲ್ಲು ತೂರಾಟ ನಡೆಯುತ್ತಿದ್ದು, ಸೋಮವಾರ ರಾತ್ರಿ ಕಲ್ಲು ತೂರಾಟ ನಡೆಸುತ್ತಿದ್ದ ಕೆಲವು ಮುಸ್ಲಿಂ ಯುವಕರನ್ನು ಬಜರಂಗದಳದ ಕಾರ್ಯಕರ್ತರು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.3.ಫೆಬ್ರವರಿ 24, ಬೈಲೂರು, ಮುರುಡೇಶ್ವರ (ಉತ್ತರ ಕನ್ನಡ) ಹಿಂದೂಗಳ ಮನೆಗಳ ಮೇಲೆ ಕಲ್ಲು ತೂರಾಟ ನಡೆಸಿ ಆತಂಕದ ವಾತಾವರಣ ಸೃಷ್ಟಿಸಲಾಗಿದೆ. ಸ್ಥಳೀಯರು ಇಬ್ಬರು ಆರೋಪಿಗಳನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದು, ಒಬ್ಬ ಆರೋಪಿ ಪರಾರಿಯಾಗಿದ್ದಾನೆ. 4.ಫೆಬ್ರವರಿ 24, ಊರಗಡೂರು, ಶಿವಮೊಗ್ಗ ಎಸ್‌ಎಸ್‌ಎಲ್‌ಸಿ ಓದುತ್ತಿದ್ದ ತಿಲಕ್ ಹಿಂದೂ ಬಾಲಕನನ್ನು ಐದು ಮಂದಿ ಮುಸ್ಲಿಂ ಯುವಕರು ಸೇರಿ ಹತ್ಯೆ ಮಾಡಿದ್ದಾರೆ ಇದು ಅತ್ಯಂತ ಕ್ರೂರ ಹಾಗೂ ದುಃಖಕರ ಘಟನೆ.

**,ಚಿತ್ರದುರ್ಗ:** ಮೊಬೈಲ್ ಸ್ಕ್ರೀನ್ ಗಾರ್ಡ್ ವಿಚಾರವಾಗಿ ನಡೆದ ಗಲಾಟೆಯಲ್ಲಿ ಮೊಬೈಲ್ ಅಂಗಡಿ ಮಾಲೀಕ ಹಾಗೂ ಹಿಂದೂ ನಾಯಕ ವಿಕ್ರಮ್ ಚೌಧ್ರಿಗೆ ಮುಸ್ಲಿಂ ಯುವಕ ಚಾಕು ಇರಿದ ಘಟನೆ ನಡೆದಿದೆ. ಈ ಎಲ್ಲಾ ಘಟನೆಗಳು ಅತ್ಯಂತ ಗಂಭೀರವಾಗಿದ್ದು, ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ಈ ಕೆಳಗಿನ ಬೇಡಿಕೆಗಳನ್ನು ಮಾಡುತ್ತಿದೆ.

ಎಲ್ಲಾ ಘಟನೆಗಳ ಬಗ್ಗೆ ವೇಗವಾದ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಬೇಕು. 2.ಬಾಗಲಕೋಟೆ ಶಿವಾಜಿ ಜಯಂತಿ ಮೆರವಣಿಗೆ ಮೇಲೆ ನಡೆದ ದಾಳಿಯನ್ನು ಎನ್‌ಐಎ ಮೂಲಕ ತನಿಖೆ ಮಾಡುವ ಕುರಿತು ಪರಿಗಣಿಸಬೇಕು ಮತ್ತು ಅಪರಾಧಿಗಳ ಮೇಲೆ ಕೋಕಾ ಕಾಯಿದೆ ಹಾಕಬೇಕು. 3.ಕಲ್ಲು ತೂರಾಟ, ಹತ್ಯೆ ಮತ್ತು ಚಾಕು ಇರಿತ ಪ್ರಕರಣಗಳಲ್ಲಿ ಭಾಗಿಯಾದ ಎಲ್ಲಾ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.4.ಪರಾರಿಯಾಗಿರುವ ಆರೋಪಿಗಳನ್ನು ತಕ್ಷಣ ಬಂಧಿಸಲು ವಿಶೇಷ ತಂಡ ರಚಿಸಬೇಕು.

ಹಿಂದೂಗಳ ಮೆರವಣಿಗೆಗಳು ಮತ್ತು ಮನೆಗಳಿಗೆ ಸಮರ್ಪಕ ಪೊಲೀಸ್ ಭದ್ರತೆ ಒದಗಿಸಬೇಕು.6.ರಾಜ್ಯದಲ್ಲಿ ಶಾಂತಿ ಮತ್ತು ಸೌಹಾರ್ದ ಕಾಪಾಡಲು ಮುನ್ನೆಚ್ಚರಿಕಾ ಕ್ರಮಗಳನ್ನು ಬಲಪಡಿಸಬೇಕು.

7.ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕಠಿಣ ತಡೆ ಕ್ರಮಗಳನ್ನು ಜಾರಿಗೊಳಿಸಬೇಕು. ರಾಜ್ಯದಲ್ಲಿ ಶಾಂತಿ, ಕಾನೂನು ಸುವ್ಯವಸ್ಥೆ ಮತ್ತು ಎಲ್ಲಾ ನಾಗರಿಕರ ಸುರಕ್ಷತೆ ಕಾಪಾಡುವುದು ಸರ್ಕಾರದ ಪ್ರಮುಖ ಕರ್ತವ್ಯವಾಗಿದೆ. ಆದ್ದರಿಂದ ಮೇಲ್ಕಂಡ ಘಟನೆಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ವಿನಂತಿಸುತ್ತೇವೆ.

## ಏರ್‌ಪೋರ್ಟ್‌ಗೆ ಪ್ರಶಸ್ತಿ ; ಪ್ರಯಾಣಿಕರ ಹೃದಯ ಗೆದ್ದ ವಿಮಾನ ನಿಲ್ದಾಣ!

## ಏರ್‌ಪೋರ್ಟ್‌ಗೆ ಅತ್ಯುತ್ತಮ ಪಟ್ಟ

• ಉದಯವಾಹಿನಿ,ಬೆಂಗಳೂರು

ವಾರ್ಷಿಕ 43.8ಮಿಲಿಯನ್ ಪ್ರಯಾಣಿಕರನ್ನು ನಿರ್ವಹಿಸಿರುವ , 03ನೇ ಟರ್ಮಿನಲ್ ಸ್ಥಾಪನೆಗೆ ಸಜ್ಜಾಗಿರುವ ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಜಾಗತಿಕವಾಗಿ ಮತ್ತೊಂದು ಮೈಲಿಗಲ್ಲು ಸಾಧಿಸಿದೆ. ದೇಶದ ಜನನಿಬಿಡ ಏರ್‌ಪೋರ್ಟ್‌ಗಳಲ್ಲಿ ಒಂದಾಗಿದ್ದು, ಸತತ ನಾಲ್ಕನೇ ಬಾರಿಗೆ ಕೆಐಎ ಪ್ರತಿಷ್ಠಿತ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದೆ. 2025ನೇ ಸಾಲಿನ ಎಸಿಐ ಎಎಸ್‌ಕ್ಯೂ ಪ್ರಶಸ್ತಿಗಳ ಜಾಗತಿಕ ಮಟ್ಟದ ಅತ್ಯುತ್ತಮ ಆಗಮನ ಏರ್‌ಪೋರ್ಟ್ ಬೆಸ್ಟ್ ಏರ್‌ಪೋರ್ಟ್ ಪ್ರಶಸ್ತಿ ಪಡೆದುಕೊಂಡಿದೆ. ಬೆಂಗಳೂರು ಏರ್‌ಪೋರ್ಟ್‌ನ ಈ ಸಾಧನೆಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

ಬೆಂಗಳೂರು ವಿಮಾನ ನಿಲ್ದಾಣಕ್ಕೆ ಜಾಗತಿಕ ಗೌರವ ಸಿಕ್ಕಿದ್ದು, ಇದ್ದು ಕರ್ನಾಟಕ ಹೆಮ್ಮೆ ಎಂದು ಕೈಗಾರಿಕೆ ಹಾಗೂ ಮೂಲ ಸೌಕರ್ಯಾಭಿವೃದ್ಧಿ ಸಚಿವ ಎಂಬಿ ಪಾಟೀಲ್ ಹರ್ಷ ವ್ಯಕ್ತಪಡಿಸಿದ್ದಾರೆ. ಎಕ್ಸ್ ಪೋಸ್ಟ್ ಮಾಡಿರುವ ಸಚಿವರು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಏರ್ ಪೋರ್ಟ್ ಕೌನ್ಸಿಲ್ ಇಂಟರ್ ನ್ಯಾಷನಲ್ ಪ್ರಶಸ್ತಿಗೆ ಸತತ ನಾಲ್ಕನೇ ವರ್ಷವೂ ಪಾತ್ರವಾಗಿದೆ ಎಂದು ಹೇಳಿದರು.

ಬೆಂಗಳೂರು ಏರ್‌ಪೋರ್ಟ್‌ನ ಈ ನಿರಂತರ ಸಾಧನೆ ಬೆಂಗಳೂರಿನ ವಿಶ್ವದರ್ಜೆಯ ಮೂಲಸೌಕರ್ಯ ಮತ್ತು ಉನ್ನತ ಸೇವಾ ಮಾನದಂಡಗಳ ಪ್ರತಿಬಿಂಬವಾಗಿದೆ. ಈಗಾಗಲೇ ಭಾರತದಲ್ಲಿ ಏರೋಸ್ಪೇಸ್ ಮತ್ತು ಡಿಫೆನ್ಸ್ ರಾಜಧಾನಿ ಎಂದು ಗುರುತಿಸಿಕೊಂಡಿರುವ ಕರ್ನಾಟಕ,




ವಿಮಾನಯಾನ ಕ್ಷೇತ್ರದಲ್ಲಿಯೂ ತನ್ನ ಪ್ರಾಬಲ್ಯವನ್ನು ಮತ್ತಷ್ಟು ಬಲಪಡಿಸುತ್ತಿದೆ. ವೇಗವಾಗಿ ಬೆಳೆಯುತ್ತಿರುವ ಅತ್ಯಾಧುನಿಕ ಮೂಲ ಸೌಕರ್ಯಗಳೊಂದಿಗೆ, ಬೆಂಗಳೂರಿನ ವಿಮಾನಯಾನ ಪರಿಸರ ವ್ಯವಸ್ಥೆಯು ಮುಂದಿನ ದಿನಗಳಲ್ಲಿ ಜಾಗತಿಕ ಭೂಪಟದಲ್ಲಿ ಇನ್ನಷ್ಟು ಎತ್ತರಕ್ಕೆ ಏರಲಿರುವುದು ಖಚಿತ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

### ಮೂರನೇ ಟರ್ಮಿನಲ್ ನಿರ್ಮಾಣ ಯಾವಾಗ?


### ಜಾಗತಿಕ ಪ್ರಶಸ್ತಿಯ ಮಹತ್ವ

ಕೆಂಪೇಗೌಡ ವಿಮಾನ ನಿಲ್ದಾಣದ ಈ ಪದೇ ಪದೇ ದೊರಕುವ ಪ್ರಶಸ್ತಿ, ಬೆಂಗಳೂರು ನಗರವನ್ನು ಭಾರತದಲ್ಲಿ ಮಾತ್ರವಲ್ಲದೆ, ವಿಶ್ವದ ಪ್ರಮುಖ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಒಬ್ಬರಾಗಿ ಗುರುತಿಸುತ್ತದೆ. ಪ್ರಯಾಣಿಕರ ಅನುಭವ ಮತ್ತು ಸೇವಾ ಗುಣಮಟ್ಟದ ಮೇಲೆ ಧ್ಯಾನ ಕೊಡುವ ಮೂಲಕ, ಕೆಐಎ ತನ್ನ ವಿಶ್ವಸ್ತರಿಯ ಖ್ಯಾತಿಯನ್ನು ಮತ್ತಷ್ಟು ಬಲಪಡಿಸಿದೆ. ಬಿಐಎಲ್ ಅಧಿಕಾರಿಗಳು ಮುಂದಿನ ದಿನಗಳಲ್ಲಿ ವಿಮಾನ ನಿಲ್ದಾಣದ ಕಾರ್ಯಕ್ಷಮತೆ, ಪ್ರಯಾಣಿಕರ ಅನುಕೂಲತೆ, ಡಿಜಿಟಲ್ ಸೇವೆಗಳು ಮತ್ತು ಸೌಲಭ್ಯಗಳನ್ನು ಇನ್ನಷ್ಟು ಹೆಚ್ಚಿಸಲು ನಿರಂತರ ಗಮನ ಹರಿಸುವುದಾಗಿ ತಿಳಿಸಿದ್ದಾರೆ. ವಿಶೇಷವಾಗಿ ಗರಿಷ್ಠ ಪ್ರಯಾಣದ ಸಮಯದಲ್ಲಿ ಪ್ರಯಾಣಿಕರ ಸುಗಮ ಹಕ್ಕುಗಳನ್ನು ಖಚಿತಗೊಳಿಸುವತ್ತ ಗಮನ ನೀಡಲಾಗುವುದು.

### ಏರ್‌ಪೋರ್ಟ್‌ನಲ್ಲಿ ಅತ್ಯುತ್ತಮ ಟರ್ಮಿನಲ್

ಉದ್ಯಾನ ನಗರಿ ಬೆಂಗಳೂರಿನ ಪರಂಪರೆ ಸಾರುವಂತೆ ಹಸಿರು ಗೋಡೆಗಳಿರುವ ಭವ್ಯ ಮತ್ತು ಬೃಹತ್ ಟರ್ಮಿನಲ್ ಬೆಂಗಳೂರು ಏರ್‌ಪೋರ್ಟ್ ನಲ್ಲಿದೆ. ಇದು ವಾರ್ಷಿಕ 25-50 ಮಿಲಿಯನ್ ಪ್ರಯಾಣಿಕರನ್ನು ನಿರ್ವಹಿಸುವ ಶಕ್ತಿ ಹೊಂದಿದೆ. ಅಂತಾರಾಷ್ಟ್ರೀಯ ಪ್ರಯಾಣಿಕರಿಗೆ ಅತ್ಯುತ್ತಮ ಸೇವೆ ನೀಡುವಂತೆ ವಿಶೇಷ ವಿನ್ಯಾಸದಲ್ಲಿ ಸ್ಥಾಪಿಸಲಾಗಿದೆ. ಫೈಸ್ಟಾರ್ ಸ್ಕೈಟ್ರ್ಯಾಕ್ಸ್ ರೇಟಿಂಗ್ ಪಡೆದ ಅದ್ಭುತ ಟರ್ಮಿನಲ್ ಇದಾಗಿದೆ. 2.55 ಲಕ್ಷ ಚದರ ಕಿಲೋ ಮೀಟರ್ ವಿಶಾಲವಾಗಿದೆ. ಟರ್ಮಿನಲ್ ಸೌಂದರ್ಯ, ಪ್ರಯಾಣ ಸೇವೆ, ವಿಶೇಷತೆಗಳು, ಕಾರ್ಗೋಸೇವೆ ವಲಯದ ಸಾಧನೆಗೆ ಈ ಹಿಂದೆ ಕೆಐಎ ಹಲವು ಪ್ರಶಸ್ತಿಗಳನ್ನು ಪಡೆದಿದೆ.

### 34 ವಿಮಾನಗಳ ಹಾರಾಟ ರದ್ದು



ಮಧ್ಯಪ್ರಾಚ್ಯದಲ್ಲಿನ ಸಂಘರ್ಷದಿಂದಾಗಿ ಮಾರ್ಚ್ 4ರಂದು ಬೆಂಗಳೂರಿನಿಂದ ತೆರಳಬೇಕಿದ್ದ 16 ವಿಮಾನಗಳು, ಬೆಂಗಳೂರಿಗೆ ಬಂದಿಳಿಯಬೇಕಿದ್ದ 18 ವಿಮಾನಗಳ ಹಾರಾಟ ರದ್ದಾಗಿದೆ. ಐದು ದಿನಗಳಿಂದ ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಅಬುಧಾಬಿ, ರಿಯಾದ್, ಜೆದ್ದಾ, ದಮ್ಮಾಮ್, ದುಬೈ ಹಾಗೂ ದೋಹಾಕ್ಕೆ ತೆರಳಬೇಕಿದ್ದ 1 ವಿಮಾನಗಳು ಹಾಗೂ ಈ ಪ್ರದೇಶಗಳಿಂದ ಬೆಂಗಳೂರಿಗೆ ಬರಬೇಕಿದ್ದ 18 ವಿಮಾನಗಳ ಹಾರಾಟ ರದ್ದಾಗಿವೆ ಎಂದು ಕೆಐಎ ತಿಳಿಸಿದೆ. ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮಾ.5ರಂದು ಸಂಚರಿಸಬೇಕಿದ್ದ 10ಕ್ಕೂ ಅಧಿಕ ವಿಮಾನಗಳು ರದ್ದುಗೊಂಡಿದೆ ಎಂದು ಪ್ರಕಟಣೆ ತಿಳಿಸಿದೆ.

## ಹೇಮಾವತಿ ಲಿಂಕ್ ಕೆನಾಲ್ ಯೋಜನೆ ನಿಲ್ಲಿಸಲು ಸಾಧ್ಯವಿಲ್ಲ: ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಹೇಮಾವತಿ ಲಿಂಕ್ ಕೆನಾಲ್ ಯೋಜನೆ ನಿಲ್ಲಿಸಲು ಯಾರಿಂದಲೂ ಆಗುವುದಿಲ್ಲ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹೇಮಾವತಿ ಲಿಂಕ್ ಕೆನಾಲ್ ಯೋಜನೆ ನಿಲ್ಲಿಸಲು ಯಾರಿಂದಲೂ ಆಗುವುದಿಲ್ಲ. ಒಂದಿಬ್ಬರು ಕೇಳಿದ ಹಿನ್ನೆಲೆಯಲ್ಲಿ ಅವರಿಗೆ ಅನುದಾನ ನೀಡಿದ್ದೇವೆ. ಈ ಯೋಜನೆ ಕೆಲಸ ನಡೆಯಲಿದೆ. ತಲೆಕೆಡಿಸಿಕೊಳ್ಳುವುದು ಬೇಡ. ಇದೇ ವೇಳೆ ಸತ್ತೇಗಾಲದಿಂದ ನೀರು ಬರುವುದು ಯಾವಾಗ ಎಂದು ಕೇಳಿದಾಗ, ಕಾಲುವೆ ಕಾಮಗಾರಿ ನಡೆಯುತ್ತಿದ್ದು, ನಾನು ಕಾಮಗಾರಿ ಸ್ಥಳಕ್ಕೂ ಭೇಟಿ ನೀಡಿದ್ದೇನೆ. ಆ ಕೆಲಸ ಕೂಡ ಆಗಲಿದೆ ಎಂದರು.

ವಿದೇಶಕ್ಕೆ ತೆರಳಿದ್ದ ಶಾಸಕರು ವಾಪಸ್ಸಾಗಿದ್ದು, ನಿಮ್ಮನ್ನು ಭೇಟಿ ಮಾಡಿದ್ದಾರಾ ಎಂದು ಕೇಳಿದಾಗ, ಬಂದು ಭೇಟಿ ಮಾಡುತ್ತಿದ್ದಾರೆ. ಪ್ರವಾಸದಲ್ಲಿ ಏನೆಲ್ಲಾ ನೋಡಿದರು ಎಂದು ತಿಳಿಸುತ್ತಿದ್ದಾರೆ ಎಂದು ತಿಳಿಸಿದರು. ಬಜೆಟ್ ಬಗ್ಗೆ ಕೇಳಿದಾಗ, ನಮ್ಮ ಜಿಲ್ಲೆಯ ಕೆಲಸಗಳು ಬಜೆಟ್ ಮೇಲೆ ನಿಂತಿಲ್ಲ. ಬೇರೆಯವರಿಗೆ ಬಜೆಟ್


ಉದಯವಾಹಿನಿ ಚಿತ್ರ

ಬೇಕಾಗಿರಬಹುದು, ನಮಗೆ ಬೇಡ. ಪೆನ್ನು ಪೇಪರ್ ನನ್ನ ಹತ್ತಿರವಿದೆ.

ಜಿಲ್ಲೆಯ ಜನ ಬಜೆಟ್‌ನಿಂದ ಏನು ನಿರೀಕ್ಷೆ ಇಟ್ಟುಕೊಳ್ಳಬಹುದು ಎಂದು ಕೇಳಿದಾಗ, ಬಜೆಟ್ ಮೇಲೆ ನಿರೀಕ್ಷೆ ಇಟ್ಟುಕೊಳ್ಳುವ ಅವಶ್ಯಕತೆ ಇಲ್ಲ. ಬಜೆಟ್ ಇರಲಿ, ಇಲ್ಲದಿರಲಿ, ನಾವು ನಮ್ಮ ಜಿಲ್ಲೆಯಲ್ಲಿ ಕೆಲಸ ಮಾಡುತ್ತಿರುತ್ತೇವೆ. ಇಡೀ ದೇಶದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಮಾತ್ರ ಒಂದು ಶಾಲೆಗೆ 15 ಕೋಟಿ ರೂ. ವೆಚ್ಚದಂತೆ 25 ಕೆಪಿಎಸ್ ಶಾಲೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಇದನ್ನು ನಾವು ಬಜೆಟ್‌ನಲ್ಲಿ ಈ ಯೋಜನೆ ಸೃಷ್ಟಿಕರ್ತರು ನಾವೇ. ಹೊಸ ನೀತಿ ರೂಪಿಸಿದ್ದೇವೆ.

## ಒಳ ಮೀಸಲಾತಿ ಇತ್ಯರ್ಥ ಮಾಡೋಕೆ ಎಷ್ಟು ವರ್ಷ ಬೇಕು?

• ಉದಯವಾಹಿನಿ ,ಬೆಂಗಳೂರು

ಒಳ ಮೀಸಲಾತಿ ಗೊಂದಲ ಇತ್ಯರ್ಥ ಮಾಡೋಕೆ ಎಷ್ಟು ವರ್ಷ ಬೇಕು ಸಿದ್ದರಾಮಯ್ಯನವರೇ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಸಿಎಂಗೆ ಪ್ರಶ್ನೆ ಮಾಡಿದ್ದಾರೆ. ಮಾಲೂರಿನ ಹೂಡಿ ವಿಜಯ್ ಕುಮಾರ್ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈ ವೇಳೆ, ಕಾಂಗ್ರೆಸ್ ನಾಯಕರಿಗೆ ಹೇಳ್ತೀನಿ, ರಾಜ್ಯದಲ್ಲಿ 8-10 ವರ್ಷಗಳಿಂದ ಮೀಸಲಾತಿ ವಿಚಾರ ಕೆದಕಿ ಎಲ್ಲಾ ಪಕ್ಷಗಳು ಸಮಾಜಗಳ ಸಂಘರ್ಷಗಳು, ಅವಿಶ್ವಾಸ ಮೂಡಿಸೋ ಕೆಲಸ ಆಗ್ತಿದೆ. ಧಾರವಾಡದಲ್ಲಿ ಉದ್ಯೋಗಿಗಳು ಹೋರಾಟ ಮಾಡಿದ್ರು. ಅದಕ್ಕೆ ಸರ್ಕಾರ 56 ಸಾವಿರ ಹುದ್ದೆ ಕೊಡ್ತೀನಿ ಅಂದರು. ಈಗ ನೇಮಕಾತಿಗೆ ಒಳ ಮೀಸಲಾತಿ ಸಮಸ್ಯೆ ಅಂತ ಮಾತಾಡ್ತಾ ಇದ್ದಾರೆ. ಇವತ್ತು ಕ್ಯಾಬಿನೆಟ್ ಏನ್ ಆಗುತ್ತೋ ಗೊತ್ತಿಲ್ಲ. ಒಳ ಮೀಸಲಾತಿ ವಿಷಯದಲ್ಲಿ ಇವತ್ತಿನ ಕ್ಯಾಬಿನೆಟ್ ನಲ್ಲಿ 2-3 ಸಚಿವರ ಗುಂಪು ಆಗಿದೆ. ಇವತ್ತು ಏನ್ ಆಗುತ್ತೋ ಗೊತ್ತಿಲ್ಲ ಅಂತ ಕಿಡಿಕಾರಿದರು.

ಎಲ್ಲಾ ಸಮುದಾಯಕ್ಕೆ ಕರೆ ಕೊಡ್ತೀನಿ ಒಂದು ಅವಕಾಶ ಕೊಡಿ. ರಾಜ್ಯದಲ್ಲಿ ಜನಪರ, ಜನರ ಭರವಸೆ ಈಡೇರಿಸುವ ಸರ್ಕಾರ ಬರಲು ಜಾತಿ ಬಿಟ್ಟು ಒಂದು ಅವಕಾಶ ಕೊಡಿ ಅಂತ ಮನವಿ ಮಾಡಿದರು. ಅಹಿಂದ ನಾಯಕ ಅಂತಾರೆ. ಯಾವ ಜಾತಿಗೆ ಏನ್ ಕೊಟ್ರಿ ಅಂತ ಪಟ್ಟಿ ಬಿಟ್ಟರೆ ಅವರ ಬಂಡವಾಳ ಗೊತ್ತಾಗುತ್ತದೆ.

ನಮ್ಮ ಪಕ್ಷಕ್ಕೆ ಜಾತಿ ಇಲ್ಲ. ಸರ್ವ ಜನಾಂಗದ ಶಾಂತಿಯ ತೋಟ ಆಗಬೇಕು ಅನ್ನೋದು ನಮ್ಮ ಆಸೆ ಎಂದರು. ಆಕಸ್ಮಿಕವಾಗಿ ರಾಜಕೀಯಕ್ಕೆ ಬಂದೆ. ತಂದೆಯವರ ಮನಸು ನೋಯಿಸಿ, ಅವರ ಮಾತು ಕೇಳಲಿಲ್ಲ.


ಉದಯವಾಹಿನಿ ಚಿತ್ರ

ಎರಡು ಬಾರಿ ಸಿಎಂ ಆದೆ ನಾನು ಅಂತ ಇತಿಹಾಸ ಮೆಲುಕು ಹಾಕಿದ್ರು. ಯಾರೋ ಮಾಗಡಿಯಲ್ಲಿ ಕುಮಾರಸ್ವಾಮಿ ಸಾಕ್ಷಿ ಗುಡ್ಡೆ ಕೊಡಿ ಅಂತ ಕೇಳ್ತಾರೆ. ನಾನು ಎಲ್ಲಿಂದ ಸಾಕ್ಷಿ ಗುಡ್ಡೆ ತರಲಿ. ಆರೂವರೆ ಕೋಟಿ ಜನರೇ ನನ್ನ ಸಾಕ್ಷಿ ಗುಡ್ಡೆ. ನಾನು ಯಾವುದೇ ದೊಡ್ಡ ಬಿಲ್ಡಿಂಗ್ ಕಟ್ಟಿಲ್ಲ ಎಂದರು. ಒಳ ಮೀಸಲಾತಿ ಬಗ್ಗೆ ನಿರ್ಧಾರ ಮಾಡದೇ 8 ವರ್ಷ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ದೇವರಾಜ್ ಅರಸ್ ದಾಖಲೆ ಮುರಿದೆ ಅಂತಾರೆ.

ಒಳ ಮೀಸಲಾತಿ ಗೊಂದಲ ಕ್ಲಿಯರ್ ಮಾಡೋಕೆ ಎಷ್ಟು ವರ್ಷ ಬೇಕು ಸಿದ್ದರಾಮಯ್ಯ ಅವರೇ. ಕುರ್ಚಿ ವಿಷಯ ಬಂದಾಗ ಮಾತ್ರ ಅಹಿಂದ ಅಂತ ಹೇಳ್ತಾರೆ. ಅಮೇಲೆ ಅವರು ಅಲ್ಲೇ ಇವರು ಇಲ್ಲೆ ಅಂತ ಸಿದ್ದರಾಮಯ್ಯ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

### ಸಿಎಂ ಈ ಬಾರಿ 1.15 ಲಕ್ಷ ಕೋಟಿ ಸಾಲದ ಬಜೆಟ್ ಮಂಡನೆ

## ಬಿಜೆಪಿ ವಿಪಕ್ಷ ಅಶೋಕ್ ಟೀಕೆ

• ಉದಯವಾಹಿನಿ, ಬೆಂಗಳೂರು



ಈ ಬಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ 1.15 ಲಕ್ಷ ಕೋಟಿ ರೂ. ಸಾಲ ಮಾಡಿ, ಬಜೆಟ್ ಮಂಡಿಸಲಿದ್ದಾರೆ. ಈ ಬಾರಿಯೂ ಜನರ ಮೇಲೆ ತೆರಿಗೆಗಳ ಹೊರೆ ಹಾಕುವುದು ಖಚಿತ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಎಂದರೆ ತೆರಿಗೆ ಹೇರುವ ರಾಮಯ್ಯ ಆಗಿದ್ದಾರೆ. ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ತೆರಿಗೆಗಳ ಹೊರೆಯನ್ನು ಕಡಿಮೆ ಮಾಡಿದ್ದಾರೆ.

ಸಿಎಂ ಸಿದ್ದರಾಮಯ್ಯ ತಿಂಗಳಿಗೆ ನಾಲ್ಕರಂತೆ ತೆರಿಗೆ ಹಾಕುತ್ತಾರೆ. ಈಗಾಗಲೇ 36 ತೆರಿಗೆಗಳನ್ನು ಜನರ ಮೇಲೆ ಹೇರಿದ್ದಾರೆ. ಚುನಾವಣೆಗೆ ಮುನ್ನ ಜನರ ಮೇಲೆ ಹೊರೆ ಹಾಕದೇ ಗ್ಯಾರಂಟಿ ತರುತ್ತೇವೆ ಎಂದು ಭರವಸೆ ನೀಡಿ, ಈಗ ತೆರಿಗೆಗಳ ಹೊರೆ ಹೇರಿದ್ದಾರೆ. ಸಿದ್ದರಾಮಯ್ಯನವರ ಅವಧಿ ಮುಗಿಯುವ ವೇಳೆಗೆ ಒಟ್ಟು ಸಾಲ 8 ಲಕ್ಷ ಕೋಟಿ ರೂ. ಮೀರಲಿದೆ. ಇದರಿಂದಾಗಿ ಆರ್ಥಿಕ ಶಿಸ್ತು ಮೀರಿ ಹೋಗುತ್ತದೆ. ಇದು ಅವರ ಕಣ್ಕಟ್ಟು ವಿದ್ಯೆ ಎಂದಿದ್ದಾರೆ.

ಸಿಎಂ ಸಿದ್ದರಾಮಯ್ಯ ಇಲ್ಲದ ಆದಾಯವನ್ನು ಸೃಷ್ಟಿಸಿ, ಜಿಎಸ್‌ಡಿಪಿಗೆ ಹೋಲಿಕೆ ಮಾಡುವ ಶೇಕಡ ಪ್ರಮಾಣವನ್ನು ಕಡಿಮೆ ಇರುವಂತೆ ತೋರಿಸುತ್ತಾರೆ. ಈ ಮೂಲಕ ಆರ್ಥಿಕ ಶಿಸ್ತು ಪಾಲಿಸಿದ್ದೇವೆ ಎಂದು ಸುಳ್ಳಾಗಿ ತೋರಿಸುತ್ತಾರೆ. ಬಜೆಟ್ ಎಂದರೆ ಆದಾಯ ಹೆಚ್ಚಿಸಿ, ಜನರಿಗೆ ಹೊರೆಯಾಗದಂತೆ ಮಾಡಬೇಕು. ಇದನ್ನೇ ಆರ್ಥಿಕ ಪರಿಣತಿ ಎಂದು ಹೇಳುತ್ತಾರೆ. ಸಾಲ ಮಾಡಿ ಸರ್ಕಾರ ನಡೆಸಲು ಇವರೇ ಬೇಕಿಲ್ಲ. ರಾಜ್ಯದ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗಲಿದೆ ಎಂದು ಜನರು ಅಂದುಕೊಂಡಿದ್ದು, ಸಂಪೂರ್ಣ ಸುಳ್ಳಾಗಿದೆ. ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸಾಲ ಇಲ್ಲದ ಬಜೆಟ್ ಮಂಡಿಸಿದ್ದು, ಇನ್ನೂ 24,400 ಕೋಟಿ ರೂ. ಸಾಲ ಪಡೆಯಬಹುದಿತ್ತು. ಅಂತಹ ಅವಕಾಶವಿದ್ದರೂ ಅವರು ಆಗ ಸಾಲ ಪಡೆದಿರಲಿಲ್ಲ. ಕಾಂಗ್ರೆಸ್ ಮಾತ್ರ ಪ್ರತಿ ವರ್ಷ ಸಾಲ ಪಡೆಯುತ್ತಲೇ ಇದೆ. ಈ ಬಾರಿ 1.15 ಲಕ್ಷ ಕೋಟಿ ರೂ. ಸಾಲ ಪಡೆಯಲಿದ್ದಾರೆ.

### ಕೆಪಿಎಸ್‌ಸಿ ಹಗರಣ

**ಕೆಪಿಎಸ್‌ಸಿ ಎಂದರೆ ಕಳ್ಳರ ದಂಧೆಯ ಕೇಂದ್ರ. ಹಣ ಕೊಡಲ್ಲ ಎಂದರೆ ಕಚೇರಿಯ ಒಳಗೆ ಕೂಡ ಬಿಡುವುದಿಲ್ಲ. ಕುಟುಂಬ, ಜಾತಿ ಎನ್ನುವುದು ಇಲ್ಲಿ ಮಾನದಂಡವೇ ಹೊರತು ಅಂಕ, ಪ್ರತಿಭೆ ಮುಖ್ಯವಲ್ಲ. ಕೆಪಿಎಸ್‌ಸಿ ಮುಚ್ಚಿ ಕೇಂದ್ರದ ಯುಪಿಎಸ್‌ಸಿ ಮಾದರಿಯ ಒಂದು ಸಂಸ್ಥೆಯನ್ನು ನಿರ್ಮಿಸಬೇಕು. ಈ ಬಗ್ಗೆ ವಿಧಾನಸಭೆ ಅಧಿವೇಶನದಲ್ಲಿ ಮಾತಾಡುತ್ತೇನೆ. ಜೊತೆಗೆ ಕಾನೂನು ಸುವ್ಯವಸ್ಥೆ, ಪ್ರತಿಭಟನೆಗಳು, ಮೊದಲಾದ ವಿಷಯಗಳ ಬಗ್ಗೆ ಮಾತಾಡುತ್ತೇನೆ ಎಂದು ಹೇಳಿದ್ದಾರೆ.**

## ವಾಲ್ಮೀಕಿ ಜನಾಂಗಕ್ಕೆ ಪರಿಷ್ಕೃತ ಮೀಸಲಾತಿಯಂತೆ ಸರ್ಕಾರಿ ಉದ್ಯೋಗಗಳಲ್ಲಿ ನೇಮಕಾತಿ ಮಾಡದಿದ್ದರೆ ಉಗ್ರ ಹೋರಾಟ

• ಉದಯವಾಹಿನಿ, ಬೆಂಗಳೂರು

ಜಸ್ಟೀಸ್ ನಾಗಮೋಹನ್ ದಾಸ್ ಸಮಿತಿ ವರದಿ ಆಧಾರದ ಮೇಲೆ ಹೆಚ್ಚಿಸಲಾಗಿರುವ ಮೀಸಲಾತಿ ಪ್ರಮಾಣವನ್ನು ಅಳವಡಿಸಿಕೊಂಡು ಸರ್ಕಾರಿ ನೇಮಕಾತಿ ಮಾಡಬೇಕು.

ಇಲ್ಲವಾದಲ್ಲಿ ಪರಿಶಿಷ್ಟ ಸಮುದಾಯದ ವಾಲ್ಮೀಕಿ ಜನಾಂಗಕ್ಕೆ ಭಾರೀ ಅನ್ಯಾವಾಗಲಿದೆ ಎಂದು ಮಹರ್ಷಿ ವಾಲ್ಮೀಕಿ ಗುರುಪೀಠ ಟ್ರಸ್ಟ್ ಹೇಳಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಾಲ್ಮೀಕಿ ಬೆಳ್ಳಿ ಗಂಗಾಧರ ಅವರು, ಮಹರ್ಷಿ ವಾಲ್ಮೀಕಿ ಗುರುಪೀಠ ಟ್ರಸ್ಟ್‌ನ ಅಧ್ಯಕ್ಷರಾದ ಶ್ರೀ ವಾಲ್ಮೀಕಿ ಪ್ರಸನ್ನನಂದ ಸ್ವಾಮೀಜಿ ಅವರ ನೇತೃತ್ವದಲ್ಲಿ ಹೋರಾಟ ನಡೆಸುತ್ತಿದ್ದೇವೆ. ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿರುವ ಸದುದ್ದೇಶವನ್ನು ಉಚ್ಚನ್ಯಾಯಾಲಯದ ಅವಗಾಹನೆಗೆ ತಂದು ಇದೀಗ ಉದ್ಭವಸಿರುವ ತೊಂದರೆಯನ್ನು ನಿವಾರಿಸಲು ಕ್ರಮ ತೆಗೆದುಕೊಳ್ಳಬೇಕು. ಇಲ್ಲವಾದಲ್ಲಿ ಪರಿಶಿಷ್ಟ ವಾಲ್ಮೀಕಿ ಸಮಾಜಕ್ಕೆ ಆಗಲಿರುವ ಅನ್ಯಾಯದ ವಿರುದ್ಧ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

ರಾಜ್ಯದಲ್ಲಿ 2011ರ ಜನಗಣತಿಯ ಪ್ರಕಾರ ಪರಿಶಿಷ್ಟ ಪಂಗಡದವರ ಜನಸಂಖ್ಯೆ 42.49 ಲಕ್ಷ ಮತ್ತು ಪರಿಶಿಷ್ಟ ಜಾತಿ ಜನಸಂಖ್ಯೆ 1.04 ಕೋಟಿಗಳಿಗೂ ಹೆಚ್ಚಿದೆ.



ರಾಜ್ಯದ ಒಟ್ಟಾರೆ ಜನಸಂಖ್ಯೆಯಲ್ಲಿ ಇವರ ಪ್ರಮಾಣ ಅನುಕ್ರಮವಾಗಿ ಶೇಕಡ 7 ಮತ್ತು ಶೇಕಡ 17 ರಷ್ಟಿದೆ.

ಅದರ ವ್ಯಾಪ್ತಿಯಡಿ ಬರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ಸಾರ್ವಜನಿಕ ಉದ್ಯೋಗಗಳಲ್ಲಿ ಈ ಜನಾಂಗದವರ ಪ್ರಾತಿನಿಧ್ಯತೆ ಇವರ ಜನಸಂಖ್ಯೆಗೆ ಅನುಗುಣವಾಗಿ ಇಲ್ಲದೇ ಇರುವುದನ್ನು ಸರ್ಕಾರದ ಗಮನಕ್ಕೆ ಕಾಲ ಕಾಲಕ್ಕೆ ತಂದಿದ್ದರೂ ಸಹ 1954 ರಲ್ಲಿ ನಿಗದಿ ಮಾಡಿದ್ದ ಮೀಸಲಾತಿ ಪ್ರಮಾಣವನ್ನು ಪರಿಶಿಷ್ಟ ಪಂಗಡದವರಿಗೆ ಶೇಕಡ 3 ರಿಂದ 7 ಕ್ಕೆ ಮತ್ತು ಪರಿಶಿಷ್ಟ ಜಾತಿಯವರಿಗೆ ಶೇಕಡ 15 ರಿಂದ 17 ಕ್ಕೆ ಹೆಚ್ಚಿಸದೇ ಇದ್ದ ಕಾರಣ 2022 ರಲ್ಲಿ ತಮ್ಮ ನೇತೃತ್ವದಲ್ಲಿ ಸಮುದಾಯಗಳು ನಡೆಸಿದ 257 ದಿನಗಳ ಸುಧೀರ್ಘ ಹೋರಾಟದ ಫಲವಾಗಿ ಸರ್ಕಾರ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ಏಕ ಸದಸ್ಯ ಆಯೋಗ ರಚಿಸಿ, ವರದಿಯ ಶಿಫಾರಸ್ಸುಗಳ ಆಧಾರದ ಮೇಲೆ ಪರಿಶಿಷ್ಟ ಪಂಗಡದವರಿಗೆ ಚಾಲ್ತಿಯಲ್ಲಿದ್ದ ಮೀಸಲಾತಿ ಪ್ರಮಾಣವನ್ನು ಶೇ. 15 ರಿಂದ 17ಕ್ಕೆ ಹೆಚ್ಚಿಸಿತು ಎಂದರು.

ಈ ಆದೇಶದ ಮೇರೆಗೆ ನೇಮಕಾತಿಗಳಲ್ಲಿ ರೋಸ್ಟರ್ ಬಿಂದುಗಳನ್ನು ನೇರನೇಮಕಾತಿ ಮತ್ತು ಬಡ್ತಿ ನೇಮಕಾತಿಗಳಲ್ಲಿ ಹೊಸದಾಗಿ ಅಳವಡಿಸಿಕೊಂಡು ನೇಮಕಾತಿ ಮಾಡುವಂತೆ ಆದೇಶ ಹೊರಡಿಸಲಾಗಿತ್ತು.

ಆದೇಶಗಳಿಂದ ಬಾಧಿತರಾದವರು ಕರ್ನಾಟಕ ಆಡಳಿತಾತ್ಮಕ ನ್ಯಾಯಮಂಡಳಿ ಮತ್ತು ಘನ ಕರ್ನಾಟಕ ಉಚ್ಚನ್ಯಾಯಾಲಯದಲ್ಲಿ ದಾವೆ ಹೂಡಿದ್ದು, ಇವುಗಳ ಆಧಾರದ ಮೇಲೆ ಉಚ್ಚನ್ಯಾಯಾಲಯ ಕಳೆದ ನವೆಂಬರ್ 27 ರಂದು ಮಧ್ಯಂತರ ಆದೇಶ ನೀಡಿ ಹೆಚ್ಚಿಸಲಾದ ಮೀಸಲಾತಿ ಪ್ರಮಾಣದಂತೆ ಯಾವುದೇ ನೇಮಕಾತಿಯ ಬಗ್ಗೆ ಘನ ನ್ಯಾಯಾಲಯದ ಅಂತಿಮ ಆದೇಶದವರೆಗೆ ಅಧಿಸೂಚನೆಗಳನ್ನು ಹೊರಡಿಸಬಾರದೆಂದು ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಒಳಮೀಸಲಾತಿ ಇಲ್ಲದೇ ನೇಮಕಾತಿ ಮಾಡಲು ಮುಂದಾಗಿರುವುದು ಆತಂಕಕಾರಿ ಎಂದರು.

ಆದೇಶಗಳಿಂದ ಅನೇಕ ವರ್ಷಗಳಿಂದ ಸಾರ್ವಜನಿಕ ನೇಮಕಾತಿಗಳಲ್ಲಿ ಶಿಕ್ಷಣ ಸಂಸ್ಥೆಗಳ ಪ್ರವೇಶಗಳಲ್ಲಿ ಸೂಕ್ತ ಪ್ರಾತಿನಿಧ್ಯ ಸಿಗದೆ ಪರಿಶಿಷ್ಟ ಪಂಗಡ ಮತ್ತು ಪರಿಶಿಷ್ಟ ಜಾತಿ ಸಮುದಾಯಗಳ ಯುವ ಸಮೂಹ ಮತ್ತು ವಿದ್ಯಾರ್ಥಿಗಳಿಗೆ ತುಂಬಲಾರದ ನಷ್ಟವಾಗಿದೆ ಎಂದು ಶ್ರೀ ವಾಲ್ಮೀಕಿ ಪ್ರಸನ್ನನಂದ ಸ್ವಾಮೀಜಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ವಾಲ್ಮೀಕಿ ಸಮಾಜದ ಮುಖಂಡ ಪಂಪಾಪತಿ, ಪ್ರೊ. ಗೋಪಾಲ ಕೃಷ್ಣ ಮತ್ತು ವಾಲ್ಮೀಕಿ ಸಮಾಜದ ಸಂಘಟನೆಗಳ ಇನ್ನಿತರರು ಸೇರಿದಂತೆ ಮುಖಂಡರು ಹಾಜರಿದ್ದರು.

### ಜಪಾನ್‌ನ ಹಿರೋಷಿಮಾ ಮೇಲೆ ಪ್ರಯೋಗ ಮಾಡಿದ ಪರಮಾಣು ಬಾಂಬ್‌ಗಳಿಗಿಂತ 20 ಪಟ್ಟು ಹೆಚ್ಚು ಶಕ್ತಿಶಾಲಿ

# ಡೂಮ್ಸ್ ಡೇ ಖಂಡಾತರ ಕ್ಷಿಪಣಿ ಪರೀಕ್ಷೆ ನಡೆಸಿದ ಯುಎಸ್

**ವಾಷಿಂಗ್ಟನ್:** ಅಮೆರಿಕಾ-ಇರಾನ್ ಮಧ್ಯೆ ಯುದ್ಧ ತಾರಕಕ್ಕೇರಿದ್ದು, ಮಧ್ಯಪ್ರಾಚ್ಯ ಸದ್ಯ ರಣರಂಗವಾಗಿದೆ. ಈ ಮಧ್ಯೆ, ಯುದ್ಧದ ಕಾವು ಹೆಚ್ಚಾಗುತ್ತಿದ್ದಂತೆ ಅಮೆರಿಕಾ ಕ್ಯಾಲಿಫೋರ್ನಿಯಾದ ಕರಾವಳಿಯಲ್ಲಿ ಡೂಮ್ಸ್ ಡೇ ಎಂದೇ ಕರೆಸಿಕೊಳ್ಳುವ ಅತ್ಯಂತ ಅಪಾಯಕಾರಿ ಪರಮಾಣು ಸಾಮರ್ಥ್ಯದ ಮಿನಿಟ್‌ಮ್ಯಾನ್ III ಖಂಡಾತರ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಪರೀಕ್ಷಿಸಿದೆ.

**ಯುಎಸ್ ನಿಂದ ಪರಮಾಣು ಸಾಮರ್ಥ್ಯದ ಕ್ಷಿಪಣಿ ಪರೀಕ್ಷೆ:** ಈ ಪರಮಾಣು ಸಾಮರ್ಥ್ಯದ ಮಿನಿಟ್‌ಮ್ಯಾನ್ III ಖಂಡಾತರ ಬ್ಯಾಲಿಸ್ಟಿಕ್ ಕ್ಷಿಪಣಿ



ಜಪಾನ್ ನ ಹಿರೋಷಿಮಾ ಮೇಲೆ ಪ್ರಯೋಗ ಮಾಡಿದ ಪರಮಾಣು ಬಾಂಬ್‌ಗಳಿಗಿಂತ 20 ಪಟ್ಟು ಹೆಚ್ಚು ಶಕ್ತಿಶಾಲಿ ವಾರ್ ಹೆಡ್ ಗಳನ್ನು ಹೊತ್ತೊಯ್ಯುವ ಸಾಮರ್ಥ್ಯವನ್ನು ಹೊಂದಿದೆ. ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆ ಹೆಚ್ಚಾಗುತ್ತಿರುವ ಬೆನ್ನಲ್ಲೆ, ಯುಎಸ್ ಇದರ ಪರೀಕ್ಷೆಗೆ ಮುಂದಾಗಿದ್ದು, ರಾತ್ರಿ ಯುಎಸ್ ವಾಯುಪಡೆಯ ಗ್ಲೋಬಲ್ ಸ್ಟ್ರೈಕ್ ಕಮಾಂಡ್ ವ್ಯಾಂಡೆನ್‌ಬರ್ಗ್ ಬಾಹ್ಯಾಕಾಶ ಪಡೆ ನೆಲೆಯಿಂದ ನಿರಾಯುಧ ಮಿನಿಟ್‌ಮ್ಯಾನ್ III ಅನ್ನು ಉಡಾವಣೆ ಮಾಡಿದೆ ಎಂದು ಯುಎಸ್ ಬಾಹ್ಯಾಕಾಶ ಪಡೆ ಹೇಳಿಕೆ ಬಿಡುಗಡೆ ಮಾಡಿದೆ.

**ಇರಾನ್ ಯುದ್ಧಕ್ಕೂ ಕ್ಷಿಪಣಿ ಪರೀಕ್ಷೆಗೂ ಸಂಬಂಧವಿಲ್ಲ ಎಂದ ಯುಎಸ್ :** ಯುಎಸ್ ಬಾಹ್ಯಕಾಶ ಪಡೆಯ ಹೇಳಿಕೆ ಪ್ರಕಾರ, ಜಿಟಿ 254 ಕ್ಷಿಪಣಿಯನ್ನು ದೀರ್ಘಕಾಲದ ನಿಯಮಿತ ಮೌಲ್ಯಮಾಪನ ಕಾರ್ಯಕ್ರಮದ ಭಾಗವಾಗಿ ಉಡಾವಣೆ ಮಾಡಲಾಗಿದ್ದು, ಈ ನಿರಾಯುಧ ರಾಕೆಟ್ ಪಶ್ಚಿಮ-ಮಧ್ಯ ಪೆಸಿಫಿಕ್ ಮಹಾಸಾಗರದ ಮಾರ್ಷಲ್ ದ್ವೀಪಗಳ ಬಳಿ ತನ್ನ ಉದ್ದೇಶಿತ ಗುರಿಯನ್ನು ತಲುಪಲು ಸಾಧ್ಯವಾಗಿದೆ. ಆದಾಗ್ಯೂ, ಪ್ರಸ್ತುತ ನಡೆಯುತ್ತಿರುವ ಸಂಘರ್ಷಕ್ಕೆ ಈ ಪರೀಕ್ಷೆಗಳು ಅಧಿಕೃತವಾಗಿ ಸಂಬಂಧಿಸಿಲ್ಲ ಎಂದು ಹೇಳಿಕೆಯಲ್ಲಿ ತಿಳಿಸಿದೆ.

ಇನ್ನು, ವಾಯುಪಡೆಯ ಗ್ಲೋಬಲ್ ಸ್ಟ್ರೈಕ್ ಕಮಾಂಡ್‌ನ 576 ನೇ ಫ್ಲೈಟ್ ಟೆಸ್ಟ್ ಸ್ಕ್ವಾಡ್ರನ್‌ನ ಕಮಾಂಡರ್ ಲೆಫ್ಟಿನೆಂಟ್ ಕರ್ನಲ್ ಕ್ಯಾರಿ ವ್ರೇ ಪ್ರಕಾರ, ಕ್ಷಿಪಣಿಯನ್ನು ಅದರ ಪರಿಣಾಮಕಾರಿತ್ವ, ಸಿದ್ಧತೆ ಮತ್ತು ನಿಖರತೆಯನ್ನು ಪರಿಶೀಲಿಸಲು ಉಡಾವಣೆ ಮಾಡಲಾಗಿದೆ. ಹೀಗೆ ವಿಭಿನ್ನ ಮಿಷನ್ ಪ್ರೊಫೈಲ್‌ಗಳನ್ನು ನಿರಂತರವಾಗಿ ಪರಿಶೀಲಿಸುವ ಮೂಲಕ, ಖಂಡಾಂತರ ಕ್ಷಿಪಣಿ ಸಂಪೂರ್ಣ ICBM ಫ್ಲೀಟ್‌ನ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಸಾಧ್ಯವಾಗುತ್ತದೆ.

ಈ ಮೂಲಕ ರಾಷ್ಟ್ರದ ಪರಮಾಣು ತ್ರಿಕೋನದ ಭೂ-ಆಧಾರಿತ ಲೆಗ್‌ಗೆ ಗರಿಷ್ಠ ಮಟ್ಟದ ಸಿದ್ಧತೆಯನ್ನು ಖಚಿತಪಡಿಸಿಕೊಳ್ಳುತ್ತೀದ್ದೆವೆ ಎಂದು ತಿಳಿಸಿದ್ದಾರೆ.

ಈ ಮೂಲಕ ಭೂಮಿಯ ಮೇಲೆ ಯಾವ ಮೂಲೆಯಲ್ಲಿ ಬೇಕಾದರೂ ಬಹು ಸ್ವತಂತ್ರವಾಗಿ ಗುರಿಯಾಗಿಸಬಹುದಾದ ಮರು-ಪ್ರವೇಶ ವಾಹನಗಳನ್ನು ನಿಯೋಜಿಸಬಲ್ಲದು, ಒಂದೇ ಕ್ಷಿಪಣಿಯು ಒಂದೇ ಉಡಾವಣೆಯಲ್ಲಿ ಹಲವಾರು ಗುರಿಗಳನ್ನು ಹೊಡೆಯಲು ಅನುವು ಮಾಡಿಕೊಡುತ್ತದೆ.ಹಾಗಾಗಿಯೇ ಇದು ಡೂಮ್ಸ್ ಡೇ (ಜಗತ್ತಿನ ಪ್ರಳಯದ ದಿನ ಅಥವಾ ವಿನಾಶದ ದಿನ) ಎಂದು ಕರೆಸಿಕೊಳ್ಳುತ್ತದೆ. ಈ ಪರೀಕ್ಷೆಗಳು ಪೂರ್ವನಿಯೋಜಿತವಾಗಿದ್ದು, ಮಧ್ಯಪ್ರಾಚ್ಯದ ಯುದ್ಧಕ್ಕೂ ಈ ಪರಿಶೀಲನೆಗೂ ಯಾವುದೇ ಸಂಬಂಧವಿಲ್ಲ ಎಂದು ಅಮೆರಿಕಾದ ಅಧಿಕಾರಿಗಳು ಹೇಳಿದಾಗ್ಯೂ, ಪರಮಾಣು ಸಾಮರ್ಥ್ಯದ ಖಂಡಾತರ ಕ್ಷಿಪಣಿಗಳ ಪರೀಕ್ಷೆಯ ಸಮಯ ಹಾಗೂ ಇದರ ಸುತ್ತಲೂ ಅಮೆರಿಕಾ ಹಾಗೂ ಇಸ್ರೇಲಿ ಅಧಿಕಾರಿಗಳು ನೀಡುತ್ತಿರುವ ಹೇಳಿಕೆಗಳು ಭಾರಿ ಕುತೂಹಲಕ್ಕೆ ಕಾರಣವಾಗುತ್ತಿದ್ದು, ಇನ್ನೊಂದೆಡೆ ಯುದ್ಧದ ತೀವ್ರತೆ ಹೆಚ್ಚಾದಂತೆ ಇದು ಇರಾನ್ ಅನ್ನು ಬೆದರಿಸುವ ಕಾರ್ಯತಂತ್ರ ಆಗಿರಬಹುದು ಎಂದು ವಿಶ್ಲೇಷಿಸಲಾಗುತ್ತಿದೆ.

- ಇರಾನ್ ಯುದ್ಧದ ನಡುವೆ ಪರಮಾಣು ಸಾಮರ್ಥ್ಯದ ಡೂಮ್ಸ್‌ಡೇ? ಖಂಡಾತರ ಕ್ಷಿಪಣಿಯ ಪರೀಕ್ಷೆ ನಡೆಸಿದ ಯುಎಸ್
- ಹಿರೋಶಿಮಾ ಮೇಲೆ ನಡೆಸಿದ ಪರಮಾಣು ಬಾಂಬ್‌ಗಿಂತ 20ಪಟ್ಟು ಹೆಚ್ಚು ಶಕ್ತಿಶಾಲಿ ವಾರ್ ಹೆಡ್‌ಗಳನ್ನು ಹೊತ್ತುಯ್ಯುವ ಸಾಮರ್ಥ್ಯವಿರುವ ಕ್ಷಿಪಣಿಯಿದು
- ಇರಾನ್ ಯುದ್ಧಕ್ಕೂ ಕ್ಷಿಪಣಿ ಪರೀಕ್ಷೆಗೂ ಸಂಬಂಧವಿಲ್ಲ ಎಂದ ಅಮೆರಿಕಾ
- ಏನಿದು ಡೂಮ್ಸ್ ಡೇ ಎಂದು ಕರೆಸಿಕೊಳ್ಳುವ ಮಿನಿಟ್‌ಮ್ಯಾನ್ III ಖಂಡಾತರ ಬ್ಯಾಲಿಸ್ಟಿಕ್ ಕ್ಷಿಪಣಿ?

**ಏನಿದು ಡೂಮ್ಸ್‌ಡೇ' ಕ್ಷಿಪಣಿ?**

**ಡೂಮ್ಸ್‌ಡೇ ಕ್ಷಿಪಣಿ ಎಂದು ಖ್ಯಾತಿ ಗಳಿಸಿರುವ ಈ ಮಿನಿಟ್‌ಮ್ಯಾನ್ III, ಅಮೆರಿಕದ ಪರಮಾಣು ಶಸ್ತ್ರಾಗಾರದಲ್ಲಿ ಅತ್ಯಂತ ವಿನಾಶಕಾರಿ ಅಸ್ತ್ರಗಳಲ್ಲಿ ಒಂದಾಗಿದೆ. ಆಗಲೇ ಹೇಳಿದಂತೆ ಹಿರೋಶಿಮಾ ಮೇಲೆ ಬಳಸಲಾಗಿದ್ದ ಪರಮಾಣು ಬಾಂಬ್‌ಗಿಂತ 20ಪಟ್ಟು ಹೆಚ್ಚು ಶಕ್ತಿಶಾಲಿ ಅಸ್ತ್ರಗಳನ್ನು ಹೊಯ್ಯುವ ಸಾಮರ್ಥ್ಯವಿರುವ ಈ ಮಿನಿಟ್‌ಮ್ಯಾನ್ III, ಸರಿಸುಮಾರು 6,000 ಮೈಲುಗಳ ವ್ಯಾಪ್ತಿ ಹೊಂದಿದ್ದು, ಗಂಟೆಗೆ 15,000 ಮೈಲುಗಳಿಗಿಂತ ಹೆಚ್ಚಿನ ವೇಗದಲ್ಲಿ ಪ್ರಯಾಣಿಸಬಲ್ಲದು. ಅಲ್ಲದೆ, ಇದು ಘನ ಇಂಧನದ ಮೇಲೆ ಚಲಿಸುವ ಸಾಮರ್ಥ್ಯವನ್ನು ಹೊಂದಿದ್ದು, ಹೆಚ್ಚಿನ ಕಾರ್ಯಕ್ಷಮತೆಯನ್ನು ನೀಡುತ್ತದೆ. ಈ ಮೂಲಕ ಇದು ಕೆಲವೇ ನಿಮಿಷಗಳಲ್ಲಿ ಖಂಡಗಳಾದ್ಯಂತ ಗುರಿಗಳನ್ನು ತಲುಪಲು ಅನುವು ಮಾಡಿಕೊಡುತ್ತದೆ.**

**ಏನಿದು ಪ್ರಳಯಾಂತಕ ಕ್ಷಿಪಣಿ?**

# ನೇಪಾಳದಲ್ಲಿ ಬಿರುಸಿನ ಮತದಾನ

**ಕಠ್ಮಂಡು:** ಕಳೆದ ವರ್ಷ ಜನರಲ್ ಜಿ ನೇತೃತ್ವದ ಬೃಹತ್ ದಂಗೆ ನಂತರ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಅವರ ಸರ್ಕಾರ ಪತನ ಗೊಳಿಸಿದ ನಂತರ ದೇಶ ನೂತನ ಸರ್ಕಾರ ರಚನೆಗೆ ಮುಂದಾಗಿದ್ದು 275 ಸ್ಥಾನಗಳಿಗೆ ಮತದಾನ ಬಿರುಸಿನ ಸಾಗಿದೆ.

ಬಿಗಿ ಭದ್ರತೆಯಲ್ಲಿ ಮತದಾನ ಪ್ರಗತಿಯಲ್ಲಿದ್ದು 275 ಸ್ಥಾನಗಳಿಗಾಗಿ 18.9 ದಶಲಕ್ಷ ಜನರು ತಮ್ಮ ರಾಜಕೀಯ ನಾಯಕರನ್ನು ಆಯ್ಕೆ ಮಾಡಲು ಸಾಂವಿಧಾನಿಕ ಹಕ್ಕು ಚಲಾಯಿಸಿದ್ದಾರೆ. ಅಧಿಕಾರದ ಗದ್ದುಗೆ ಯಾರ ಕೊರಳಿಗೆ ಎಂಬುದು ಕುತೂಹಲ ಕೆರಳಿಸಿದೆ. ಭಾರೀ ಭದ್ರತೆಯ ಅಡಿಯಲ್ಲಿ, ನೇಪಾಳದ ಜನರು ತಮ್ಮ ಮುಂದಿನ ಪ್ರಧಾನಿ ಮತ್ತು ಸರ್ಕಾರವನ್ನು ಆಯ್ಕೆ ಮಾಡಲು ಮತ ಚಲಾಯಿಸಿದ್ದರೆ, ಪ್ರಧಾನಿ ಹುದ್ದೆಗಳಲ್ಲಿ ಮೂರು ಪ್ರಮುಖ ನಾಯಕರಾದ ಬಾಲೇಂದ್ರ ಶಾ, ನೇಪಾಳದ ಅತ್ಯಂತ ಹಳೆಯ ಪಕ್ಷವಾದ ನೇಪಾಳಿ ಕಾಂಗ್ರೆಸ್‌ನ ಯುವ ನಾಯಕ ಗಗನ್ ಥಾಪಾ ಮತ್ತು ಕೊನೆಯದಾಗಿ ಮಾಜಿ ಪ್ರಧಾನಿ ಕೆ.ಪಿ. ಓಲಿ ಮುಂಚೂಣಿಯಲ್ಲಿದ್ದಾರೆ. ಭ್ರಷ್ಟಾಚಾರ ಮತ್ತು ಉದ್ಯೋಗ ಸೃಷ್ಟಿಯಿಂದ ಹಿಡಿದು ನೆರೆಯ ಭಾರತ ಮತ್ತು ಚೀನಾದೊಂದಿಗಿನ



ಸಂಬಂಧಗಳವರೆಗೆ, ಈ ಚುನಾವಣೆಯಲ್ಲಿ ನೇಪಾಳಕ್ಕೆ ಬಹಳಷ್ಟು ಅಪಾಯವಿದೆ.

ಫೆಬ್ರವರಿ 16 ರಿಂದ ಮಾರ್ಚ್ 2 ರವರೆಗೆ ರಾಜಕೀಯ ಪಕ್ಷಗಳು ತಮ್ಮ ಚುನಾವಣಾ ಪ್ರಚಾರಗಳನ್ನು ನಡೆಸಿದವು. ಎಲ್ಲಾ ಚುನಾವಣಾ ಪ್ರಚಾರಗಳ ಮೇಲೆ ನಿರ್ಬಂಧಗಳನ್ನು ವಿಧಿಸಲಾಯಿತು. ನೇಪಾಳದ ಪ್ರತಿನಿಧಿಗಳ ಸಭೆಯ 275 ಸದಸ್ಯರನ್ನು ಆಯ್ಕೆ ಮಾಡಲು ಸುಮಾರು 18.9 ಮಿಲಿಯನ್ ಅರ್ಹ ಮತದಾರರು ಆಯ್ಕೆ ಮಾಡಲಿದ್ದಾರೆ

ನೇಪಾಳದ ಮಧ್ಯಂತರ ಪ್ರಧಾನಿ ಸುಶೀಲಾ ಕರ್ಕಿ ಪ್ರತಿಕ್ರಿಯೆ ನೀಡಿ ಎಲ್ಲಾ ನಾಗರಿಕರು ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನ ಪ್ರಕ್ರಿಯೆಯಲ್ಲಿ ಭಾಗಿಯಾವವಂತೆ ಮನವಿ ಮಾಡಿದ್ದಾರೆ

ದೇಶದ ಸ್ಥಿರತೆ ಮತ್ತು ಸಮೃದ್ಧಿಯ ಜೊತೆಗೆ ನೇಪಾಳದ ''ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು'' ಭಾಗಿಯಾಗುವಂತೆ ಮನವಿ ಮಾಡಿದ್ದಾರೆ. ಬೆಳಗ್ಗೆ 7 ಗಂಟೆಯಿಂದ ಮತದಾನ ಆರಂಭವಾಗಿದ್ದು ಸಂಜೆ 5 ಗಂಟೆಯ ತನಕ ಮತದಾನ ನಡೆಯಲಿದ್ದು 275 ಸದಸ್ಯರ ಬಲದಲ್ಲಿ 165 ಸ್ಥಾನಕ್ಕೆ ನೇರ ಆಯ್ಕೆ ನಡೆಯಲಿದ್ದು 110 ಮಂದಿಯನ್ನು ಮತದಾನದ ಮೂಲಕ ಆಯ್ಕೆ ಮಾಡಲಾಗುತ್ತಿದೆ ಎಂದು ಹೇಳಲಾಗಿದೆ.

ನೇಪಾಳದ ಹಂಗಾಮಿ ಮುಖ್ಯ ಚುನಾವಣಾ ಆಯುಕ್ತ ರಾಮ್ ಪ್ರಸಾದ್ ಭಂಡಾರಿ ಅವರು ಮತಪೆಟ್ಟಿಗೆಗಳನ್ನು ಸಂಗ್ರಹಿಸಿದ ತಕ್ಷಣ ಮತ ಎಣಿಕೆಯನ್ನು ಪ್ರಾರಂಭಿಸಲು ಚುನಾವಣಾ ಸಂಸ್ಥೆ ಯೋಜಿಸಿದೆ ಎಂದು ಹೇಳಿದ್ದಾರೆ.

# ಪರಮಾಣು ಶಸ್ತ್ರಾಸ್ತ್ರ ಸಂಗ್ರಹಕ್ಕೆ ಕಿಮ್ ಪ್ರತಿಜ್ಞೆ

**ಸಿಯೋಲ್:** ಉತ್ತರ ಕೊರಿಯಾದ ನಾಯಕ ಕಿಮ್ ಜಾಂಗ್ ಉನ್ ತನ್ನ ಹೊಸ ವಿಧ್ವಂಸಕ ನೌಕೆಯನ್ನು ಕಾರ್ಯಾರಂಭ ಮಾಡುವ ಮೊದಲು ಸತತ ಎರಡು ದಿನಗಳ ಕಾಲ ಪರಿಶೀಲಿಸಿದರು ಮತ್ತು ಯುದ್ಧನೌಕೆಯಿಂದ ಹಾರಿಸಲಾದ ಕ್ರೂಸ್ ಕ್ಷಿಪಣಿಗಳ ಪರೀಕ್ಷೆಯನ್ನು ವೀಕ್ಷಿಸಿದರು, ಅವರ ನೌಕಾಪಡೆಯ ಪರಮಾಣು ಶಸ್ತ್ರಾಸ್ತ್ರಗಳನ್ನು ವೇಗಗೊಳಿಸುವುದಾಗಿ ಪ್ರತಿಜ್ಞೆ ಮಾಡಿದ್ದಾರೆ.

ಕಿಮ್ ನಾಂಪೊದ ಪಶ್ಚಿಮ ಹಡಗುಕಟ್ಟೆಗೆ ಭೇಟಿ ನೀಡಿದ ಸಂದರ್ಭದಲ್ಲಿ, ಏಪ್ರಿಲ್ 2025 ರಲ್ಲಿ ಮೊದಲು ಅನಾವರಣಗೊಂಡ ಅವರ 5,000 ಟನ್ ಯುದ್ಧನೌಕೆಯಾದ ಚೋ ಹ್ಯೋನ್‌ನಂತೆಯೇ ಅದೇ ವರ್ಗದ ಮೂರನೇ ವಿಧ್ವಂಸಕ ನೌಕೆಯ ನಿರ್ಮಾಣವನ್ನು ಪರಿಶೀಲಿಸಿದರು ಎಂದು ಉತ್ತರ ಕೊರಿಯಾದ ಅಧಿಕೃತ ಕೊರಿಯನ್ ಸೆಂಟ್ರಲ್ ನ್ಯೂಸ್ ಏಜೆನ್ಸಿ ತಿಳಿಸಿದೆ.

ಕಿಮ್ ಚೋ ಹ್ಯೋನ್‌ನ ಅಭಿವೃದ್ಧಿಯನ್ನು ತಮ್ಮ ಪರಮಾಣು-ಸಶಸ್ತ್ರ ಸೇನೆಯ ಕಾರ್ಯಾಚರಣೆಯ ವ್ಯಾಪ್ತಿ ಮತ್ತು ಪೂರ್ವಭಾವಿ ಮುಷ್ಕರ ಸಾಮರ್ಥ್ಯಗಳನ್ನು ವಿಸ್ತರಿಸುವ ಗುರಿಯತ್ತ ಗಮನಾರ್ಹ ಪ್ರಗತಿ ಎಂದು



ಶ್ಲಾಘಿಸಿದ್ದಾರೆ. ವಾಯು-ವಿರೋಧಿ ಮತ್ತು ನೌಕಾ-ವಿರೋಧಿ ಶಸ್ತ್ರಾಸ್ತ್ರಗಳು ಹಾಗೂ ಪರಮಾಣು-ಸಾಮರ್ಥ್ಯದ ಬ್ಯಾಲಿಸ್ಟಿಕ್ ಮತ್ತು ಕ್ರೂಸ್ ಕ್ಷಿಪಣಿಗಳನ್ನು ಒಳಗೊಂಡಂತೆ ವಿವಿಧ ಶಸ್ತ್ರಾಸ್ತ್ರ ವ್ಯವಸ್ಥೆಗಳನ್ನು ನಿರ್ವಹಿಸಲು ಹಡಗನ್ನು ವಿನ್ಯಾಸಗೊಳಿಸಲಾಗಿದೆ ಎಂದು ರಾಜ್ಯ ಮಾಧ್ಯಮ ಹೇಳುತ್ತದೆ.

ದಕ್ಷಿಣ ಕೊರಿಯಾದ ಮಿಲಿಟರಿ ಅಧಿಕಾರಿಗಳು ಮತ್ತು ತಜ್ಞರು ಹೇಳುವಂತೆ ಚೋ ಹ್ಯೋನ್ ಅನ್ನು ರಷ್ಯಾದ ಸಹಾಯದಿಂದ ನಿರ್ಮಿಸಲಾಗಿದೆ, ಆದರೆ ಅದು ಸಕ್ರಿಯ ಸೇವೆಗೆ ಸಿದ್ಧವಾಗಿದೆಯೇ ಎಂಬ ಬಗ್ಗೆ ಕೆಲವರು ಅನುಮಾನ ವ್ಯಕ್ತಪಡಿಸಿದ್ದಾರೆ.

# ಬಾಡಿಗಾರ್ಡ್ ಉಪಗ್ರಹಗಳ ಅಭಿವೃದ್ಧಿಗೆ ಮುಂದಾದ ಭಾರತ

**ನವದೆಹಲಿ:** ಭೌಗೋಳಿಕ ರಾಜಕೀಯ ಉದ್ವಿಗ್ನತೆ ಹೆಚ್ಚುತ್ತಿರುವ ಸಮಯದಲ್ಲಿ ಬಾಹ್ಯಾಕಾಶ ಸ್ವತ್ತುಗಳನ್ನು ರಕ್ಷಿಸುವ ಪ್ರಯತ್ನಗಳನ್ನು ದೇಶವು ಚುರುಕುಗೊಳಿಸುತ್ತಿದೆ. ಹೀಗಾಗಿ ಭಾರತದ ಭದ್ರತಾ ಸಂಸ್ಥೆಗಳು ಖಾಸಗಿ ಸ್ಟಾರ್ಟ್‌ಅಪ್‌ಗಳಿಗೆ ಬಾಡಿಗಾರ್ಡ್ ಉಪಗ್ರಹಗಳನ್ನು ಅಭಿವೃದ್ಧಿಪಡಿಸಲು ಕೇಳಿಕೊಂಡಿವೆ ಎಂದು ಮೂಲಗಳು ತಿಳಿಸಿವೆ.

ಸರ್ಕಾರಿ ಸಂಸ್ಥೆಗಳು ಮತ್ತು ಸ್ಟಾರ್ಟ್‌ಅಪ್‌ಗಳ ನಡುವಿನ ಚರ್ಚೆಗಳು ಮುಂದುವರಿದ ಹಂತಗಳಲ್ಲಿವೆ ಮತ್ತು ಖಾಸಗಿ ಕಂಪನಿಗಳು ಈ ವರ್ಷದ ಮೊದಲಾರ್ಧದಲ್ಲಿ ತಮ್ಮ ಮೊದಲ ಪರೀಕ್ಷಾ ಉಪಗ್ರಹವನ್ನು ಉಡಾವಣೆ ಮಾಡುವ ಗುರಿಯನ್ನು ಹೊಂದಿವೆ ಎಂದು ಮೂಲಗಳು ವಿವರಿಸಿವೆ. ಹೆಚ್ಚಿನ ಮೌಲ್ಯದ ಬಾಹ್ಯಾಕಾಶ ನೌಕೆಗಳಿಗೆ ಬೆಂಗಾವಲು, ರಕ್ಷಣೆ ಮತ್ತು ಕಕ್ಷೆಯ ಬೆದರಿಕೆಗಳನ್ನು ಎದುರಿಸಲು ಉದ್ದೇಶಿಸಲಾಗಿದೆ.ಈ ವರ್ಷದ ಅಂತ್ಯದ ವೇಳೆಗೆ ಅಥವಾ ಮುಂದಿನ ವರ್ಷದ ಆರಂಭದಲ್ಲಿ ಹೆಚ್ಚುವರಿ ಉಡಾವಣೆಗಳನ್ನು ನಿರೀಕ್ಷಿಸಲಾಗಿದೆ ಮತ್ತು ನಂತರ ಸರ್ಕಾರಿ ಸಂಸ್ಥೆಗಳು ತಂತ್ರಜ್ಞಾನವನ್ನು ಸ್ವಾಧೀನಪಡಿಸಿಕೊಳ್ಳುವ ಸಾಧ್ಯತೆಯಿದೆ, ಅವುಗಳು ಹೆಚ್ಚಿನ ಬಾಡಿಗಾರ್ಡ್ ಉಪಗ್ರಹಗಳನ್ನು ಅಭಿವೃದ್ಧಿಪಡಿಸುತ್ತವೆ ಎಂದು ಅವರು ಹೇಳಿದರು.



ಕಳೆದ ವರ್ಷ ನೆರೆಯ ಪಾಕಿಸ್ತಾನದೊಂದಿಗೆ ಗಡಿ ಸಂಘರ್ಷದ ನಂತರ ವಿದೇಶಿ ಬಾಹ್ಯಾಕಾಶ ನೌಕೆಯಿಂದ ಉಂಟಾಗುವ ರಾಷ್ಟ್ರೀಯ ಭದ್ರತಾ ಬೆದರಿಕೆಯ ಬಗ್ಗೆ ಭಾರತವು ಹೆಚ್ಚು ಕಾಳಜಿ ವಹಿಸುತ್ತಿದೆ. ಯುದ್ಧದ ಸಮಯದಲ್ಲಿ, ಚೀನಾ ಪಾಕಿಸ್ತಾನಕ್ಕೆ ಉಪಗ್ರಹ ಬೆಂಬಲವನ್ನು ನೀಡಿತು, ಇಸ್ಲಾಮಾಬಾದ್ ತನ್ನ ರಾಡಾರ್ ಮತ್ತು ವಾಯು ರಕ್ಷಣಾ ವ್ಯವಸ್ಥೆಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಹೊಂದಿಸಲು ಸಹಾಯ ಮಾಡಿತು ಎಂದು ಭಾರತದ ರಕ್ಷಣಾ ಸಚಿವಾಲಯದ ಅಡಿಯಲ್ಲಿ ಸಂಶೋಧನಾ ಗುಂಪು ಮೇ ತಿಂಗಳಲ್ಲಿ ತಿಳಿಸಿದೆ.

2024 ರಲ್ಲಿ ಸಂಭವಿಸಿದ ಘಟನೆಯಿಂದ ಸುರಕ್ಷತಾ ಕ್ರಮಗಳನ್ನು ಜಾರಿಗೆ ತರುವ ಬಯಕೆ ಆರಂಭವಾಯಿತು. ಗುರುತಿಸಲಾಗದ ನೆರೆಯ ದೇಶದ ಬಾಹ್ಯಾಕಾಶ ನೌಕೆಯು ನೆಲದ ಮೇಲಿನ ವಸ್ತುಗಳ ಮ್ಯಾಪಿಂಗ್ ಮತ್ತು ಮೇಲ್ವಿಚಾರಣೆಯಂತಹ ಮಿಲಿಟರಿ ಅನ್ವಯಿಕೆಗಳನ್ನು ಹೊಂದಿರುವ ಭಾರತೀಯ ಉಪಗ್ರಹದಿಂದ 1 ಕಿಲೋಮೀಟರ್ (0.6 ಮೈಲುಗಳು) ಒಳಗೆ ಬಂದಿತು ಎಂದು ಬ್ಲೂಮ್‌ಬರ್ಗ್ ನ್ಯೂಸ್ ಸೆಪ್ಟೆಂಬರ್‌ನಲ್ಲಿ ವರದಿ ಮಾಡಿದೆ.

# ಇಸ್ರೇಲ್ ದಾಳಿ: ಲೆಬೆನಾನ್‌ನಲ್ಲಿ ಮೂವರ ಸಾವು

**ಬೈರುತ್:** ಇಸ್ರೇಲ್ ಮತ್ತು ಇರಾನ್ ನಡುವಿನ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ, ಬೈರುತ್ ವಿಮಾನ ನಿಲ್ದಾಣದ ಹೆದ್ದಾರಿಯಲ್ಲಿ ವಾಹನಗಳ ಮೇಲೆ ಇಸ್ರೇಲ್ ನಡೆಸಿದ ಎರಡು ದಾಳಿಗಳಲ್ಲಿ ಮೂವರು ಸಾವನ್ನಪ್ಪಿದ್ದಾರೆ ಎಂದು ಲೆಬನಾನ್ ಆರೋಗ್ಯ ಸಚಿವಾಲಯ ತಿಳಿಸಿದೆ.

ಹೊಸ ಹಿಜ್ಬುಲ್ಲಾ ದಾಳಿಗೆ ಪ್ರತಿಕ್ರಿಯೆಯಾಗಿ ಇಸ್ರೇಲ್ ಬಾಂಬ್ ದಾಳಿಯ ಮೂರನೇ ದಿನದ ನಂತರ ತಡರಾತ್ರಿ ಈ ದಾಳಿಗಳು ನಡೆದಿವೆ. ಏತನ್ಮಧ್ಯೆ, ಇಸ್ರೇಲಿ ಸೇನೆಯು ಉತ್ತರ ಲೆಬನಾನ್ ನ ಅತಿದೊಡ್ಡ ನಗರವಾದ ಲೆಬನಾನ್ ನ ಟ್ರಿಪೋಲಿಯಲ್ಲಿರುವ ಪ್ಯಾಲೆಸ್ತೀನ್ ನಿರಾಶ್ರಿತರ ಶಿಬಿರದ ಮೇಲೆ ದಾಳಿ ನಡೆಸಿದೆ.

ಬೈರುತ್ ನ ಉಪನಗರಗಳ ಮೇಲೆ ವೈಮಾನಿಕ ದಾಳಿಗಳು ತೀವ್ರಗೊಂಡಿದ್ದರಿಂದ ಮತ್ತು ಹಿಜ್ಬುಲ್ಲಾ ಹೆಚ್ಚಿನ ದಾಳಿಗಳನ್ನು ಹೊತ್ತುಕೊಂಡಿದ್ದರಿಂದ ಇಸ್ರೇಲ್ ಮಿಲಿಟರಿ ದಕ್ಷಿಣ ಲೆಬನಾನ್ ನ ಡಜನ್ ಗಟ್ಟಲೆ ಗಡಿ ಗ್ರಾಮಗಳ ನಿವಾಸಿಗಳಿಗೆ ತಕ್ಷಣ ಸ್ಥಳಾಂತರಿಸುವಂತೆ ಎಚ್ಚರಿಕೆ ನೀಡಿದೆ.ಮುಂಜಾನೆ ಹೆಜ್ಬುಲ್ಲಾ ಉತ್ತರ ಇಸ್ರೇಲ್‌ಗೆ ರಾಕೆಟ್ ಗಳು ಮತ್ತು ಡ್ರೋನ್ ಗಳನ್ನು ಹಾರಿಸಿದಾಗ ಲೆಬನಾನ್ ಮಧ್ಯಪ್ರಾಚ್ಯದಲ್ಲಿ ವ್ಯಾಪಕ ಯುದ್ಧಕ್ಕೆ



ವಿಸ್ತರಿಸಲ್ಪಟ್ಟಿದೆ. ಇದು 70ಕ್ಕೂ ಹೆಚ್ಚು ಜನರನ್ನು ಹತ್ಯೆ ಮಾಡಿದ್ದು 400 ಕ್ಕೂ ಹೆಚ್ಚು ಜನರನ್ನು ಗಾಯಗೊಳಿಸಿದೆ ಮತ್ತು ದಕ್ಷಿಣ ಲೆಬನಾನ್, ಪೂರ್ವ ಬೆಕಾ ಕಣಿವೆ ಮತ್ತು ಬೈರುತ್ ನ ದಕ್ಷಿಣ ಉಪನಗರಗಳಿಂದ ಹತ್ತಾರು ಸಾವಿರ ಜನರನ್ನು ಸ್ಥಳಾಂತರಿಸಲಾಗಿದೆ.


ಹಿಜ್ಬುಲ್ಲಾ ಮತ್ತು ಇಸ್ರೇಲ್ ನಡುವಿನ ಸಂಘರ್ಷವು ಮೊದಲನೆಯದಲ್ಲ. 2023 ರ ಅಕ್ಟೋಬರ್ 7ರಂದು ದಕ್ಷಿಣ ಇಸ್ರೇಲ್ ಮೇಲೆ ಹಮಾಸ್ ನೇತೃತ್ವದ ದಾಳಿಯು ಗಾಜಾದಲ್ಲಿ ಯುದ್ಧವನ್ನು ಪ್ರಚೋದಿಸಿದ ಒಂದು ದಿನದ ನಂತರ ಹಿಜ್ಬುಲ್ಲಾ ಇಸ್ರೇಲ್ ಮೇಲೆ ಗುಂಡು ಹಾರಿಸಲು ಪ್ರಾರಂಭಿಸಿತು. ತಿಂಗಳುಗಳ ಕೆಳಮಟ್ಟದ ಹೋರಾಟದ ನಂತರ, 2024 ರ ಸೆಪ್ಟೆಂಬರ್ ನಲ್ಲಿ ಪೂರ್ಣ ಪ್ರಮಾಣದ ಯುದ್ಧ ಭುಗಿಲೆದ್ದಿತು ಮತ್ತು ಇಸ್ರೇಲ್ ನಂತರ ಲೆಬನಾನ್ ಮೇಲೆ ನೆಲದ ಆಕ್ರಮಣವನ್ನು ಪ್ರಾರಂಭಿಸಿತು. 2024 ರ ಕೊನೆಯಲ್ಲಿ ಅಮೆರಿಕ ಮಧ್ಯಸ್ಥಿಕೆಯ ಕದನ ವಿರಾಮವು ಹೋರಾಟವನ್ನು ನಿಲ್ಲಿಸಿದ ನಂತರ ಇಸ್ರೇಲಿ ಪಡೆಗಳು ದಕ್ಷಿಣ ಲೆಬನಾನ್‌ನ ಹೆಚ್ಚಿನ ಭಾಗದಿಂದ ಹಿಂದೆ ಸರಿದವು. ಆದರೆ ಗಡಿಯ ಲೆಬನಾನ್ ಭಾಗದಲ್ಲಿ ಐದು ಪಾಯಿಂಟ್‌ಗಳನ್ನು ಆಕ್ರಮಿಸಿಕೊಂಡವು. ಇಸ್ರೇಲ್ ಸಹ ದೈನಂದಿನ ದಾಳಿಗಳನ್ನು ನಡೆಸಿತು.

ಮುಖ್ಯವಾಗಿ ದಕ್ಷಿಣ ಲೆಬನಾನ್‌ನಲ್ಲಿ, ಹಿಜ್ಬುಲ್ಲಾ ಅಲ್ಲಿ ತನ್ನ ಸ್ಥಾನಗಳನ್ನು ಪುನರ್ನಿರ್ಮಿಸಲು ಪ್ರಯತ್ನಿಸುತ್ತಿದೆ, ಕದನ ವಿರಾಮ ಜಾರಿಯಲ್ಲಿದ್ದಾಗ ಸುಮಾರು 400 ಜನರನ್ನು ಕೊಂದಿದೆ. ಜನರು ನದಿಯ ದಕ್ಷಿಣಕ್ಕೆ ಹೋಗಲು ನಿರ್ಧರಿಸಿದರೆ, ಅವರು ತಮ್ಮ ಜೀವಕ್ಕೆ ಅಪಾಯವನ್ನುಂಟು ಮಾಡುತ್ತಾರೆ ಎಂದು ಇಸ್ರೇಲಿ ಸೇನೆಯ ಅರೇಬಿಕ್ ವಕ್ತಾರರು ಎಕ್ಸ್ ನಲ್ಲಿ ಎಚ್ಚರಿಸಿದ್ದಾರೆ.

# ಪಾಕ್-ಆಫ್ಘಾನ್ ನಡುವೆ ಕದನ ವಿರಾಮಕ್ಕೆ ಟರ್ಕಿ ಯತ್ನ

**ಇಸ್ಲಾಮಾಬಾದ್:** ಆಫ್ಘಾನಿಸ್ತಾನ ಮತ್ತು ಪಾಕಿಸ್ತಾನ ನಡುವಣ ಯುದ್ಧ ಆರನೇ ದಿನಕ್ಕೆ ಕಾಲಿಟ್ಟಿದ್ದು, ಉಭಯ ದೇಶಗಳ ನಡುವೆ ಹೊಸ ಕದನ ವಿರಾಮಕ್ಕೆ ಮಧ್ಯಸ್ಥಿಕೆ ವಹಿಸಲು ತಯಾರಿರುವುದಾಗಿ ಟರ್ಕಿ ಅಧ್ಯಕ್ಷ ರಿಸೆಪ್ ತಯ್ಯಪ್ ಎರ್ಡೋಗನ್ ಅವರು ಹೇಳಿದ್ದಾರೆ.

ಎರಡು ವಾರಗಳ ಹಿಂದೆ ಪಾಕಿಸ್ತಾನ ನಡೆಸಿದ ವೈಮಾನಿಕ ದಾಳಿಗೆ ಪ್ರತೀಕಾರವಾಗಿ ಕಳೆದವಾರ ಆಫ್ಘಾನಿಸ್ತಾನ ದಾಳಿ ಆರಂಭಿಸಿದ ಹಿನ್ನೆಲೆಯಲ್ಲಿ ಉಭಯ ದೇಶಗಳ ನಡುವೆ ಸಂಘರ್ಷ ಭುಗಿಲೆದ್ದಿದ್ದು, ಅಲ್ಲಿಂದೀಚೆಗೆ ಪಾಕಿಸ್ತಾನವು ಗಡಿಯುದ್ಧಕ್ಕೂ ಸೇನಾ ಕಾರ್ಯಾಚರಣೆ ನಡೆಸಿದ್ದು ಆಫ್ಘಾನಿಸ್ಥಾನದೊಂದಿಗೆ



ಪೂರ್ಣ ಸಮರ ಘೋಷಿಸಿತ್ತು. ಇದು ಅಂತಾರಾಷ್ಟ್ರೀಯ ಸಮುದಾಯವನ್ನು ಕಟ್ಟೆಚ್ಚರಗೊಳಿಸಿತ್ತು.

ಈ ಮುನ್ನ, ಎರಡು ನೆರೆ ರಾಷ್ಟ್ರಗಳು ಯುದ್ಧದ ಸನಿಹ ಬಂದಿದ್ದು ಕಳೆದ ಅಕ್ಟೋಬರ್‌ನಲ್ಲಿ ಕತಾರ್ ಮತ್ತು ಟರ್ಕಿಯ ಮಧ್ಯಸ್ಥಿಕೆಯಲ್ಲಿ ಕದನ ವಿರಾಮ ಘೋಷಣೆಯಾಗಿತ್ತು.

ಕತಾರ್‌ನಲ್ಲಿ ಸಹಿ ಮಾಡಲಾದ ಆ ಒಪ್ಪಂದವು ಇಸ್ತಾನ್‌ಬುಲ್‌ನಲ್ಲಿ ನಡೆದ ಆರು ದಿನಗಳ ಮಾತುಕತೆ ಬಳಿಕ ಏರ್ಪಟ್ಟಿತ್ತು.

ಟರ್ಕಿಷ್ ಅಧ್ಯಕ್ಷೀಯ ಕಚೇರಿಯ ಹೇಳಿಕೆ ಪ್ರಕಾರ ಎರ್ಡೋಗನ್ ಅವರು ಪಾಕ್ ಪ್ರಧಾನಿ ಶಹಬಾಜ್ ಷರೀಫ್ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿ ಪಾಕ್‌ನಲ್ಲಿನ ಭಯೋತ್ಪಾದಕ ದಾಳಿಯನ್ನು ಖಂಡಿಸಿದರು ಮತ್ತು ಪಾಕ್ ಹಾಗೂ ಆಫ್ಘಾನ್ ನಡುವೆ ಪುನಃ ಕದನ ವಿರಾಮಕ್ಕೆ ಪ್ರಯತ್ನಿಸುವುದಾಗಿ ಹೇಳಿದರು.

# ಪರ್ಶಿಯನ್ ಕೊಲ್ಲಿಯಲ್ಲಿ ಯುಎಸ್ ಟ್ಯಾಂಕರ್‌ಗೆ ಇರಾನ್ ಡಿಕ್ಕಿ

### ಹಿಂದೂಮಹಾಸಾಗರದಲ್ಲಿ ಐರಿಸ್ ದೆನಾ ಮೇಲಿನ ದಾಳಿಗೆ ಇರಾನ್ ಪ್ರತೀಕಾರ, ಯುಎಸ್‌ಗೆ ಶಾಕ್

**ಟೆಹ್ರಾನ್:** ಇರಾನ್-ಅಮೆರಿಕಾ ಯುದ್ಧ ತಾರಕಕ್ಕೇರಿದ್ದು, ಇದು ಹಿಂದೂ ಮಹಾಸಾಗರದವರೆಗೂ ವ್ಯಾಪಿಸಿದೆ. ಭಾರತದಲ್ಲಿ ಸೌಹಾರ್ದಯುತ ಮಿಲಿಟರಿ ಕವಾಯತು ಕಾರ್ಯಕ್ರಮದಲ್ಲಿ ಭಾಗವಹಿಸಿ ಇರಾನ್‌ಗೆ ಮರಳುತ್ತಿದ್ದ ಇರಾನ್‌ನ ಅತ್ಯಂತ ಶಕ್ತಿಶಾಲಿ ಯುದ್ಧನೌಕೆಯಾಗಿರು ಐರಿಸ್ ದೆನಾ ಮೇಲೆ ಹಿಂದೂಮಹಾಸಾಗರದಲ್ಲಿ ಶ್ರೀಲಂಕಾದ ಕರಾವಳಿಯಲ್ಲಿ ಅಮೆರಿಕಾದ ಟಾರ್ಪಿಡೋ ದಾಳಿ ನಡೆಸಿ ಮುಳುಗುವಂತೆ ಮಾಡಿ ಅದರಲ್ಲಿ 80ಕ್ಕೂ ಅಧಿಕ ನಾವಿಕರು ಸಾವನ್ನಪ್ಪುವಂತೆ ಮಾಡಿ, ಸಾಕಷ್ಟ



ಜನ ನಾಪತ್ತೆಗೆ ಕಾರಣವಾಗಿತ್ತು. ಸದ್ಯ ಯುಎಸ್ ನ ಈ ದಾಳಿಗೆ ಟಿಟ್ ಫಾರ್ ಟ್ಯಾಟ್ ಎಂಬಂತೆ ಇರಾನ್ ಪ್ರತಿಕ್ರಿಯೆ ನೀಡಿದ್ದು, ಉತ್ತರ ಪರ್ಷಿಯನ್ ಕೊಲ್ಲಿ ಯುಎಸ್‌ಟ್ಯಾಂಕರ್ ಅನ್ನು ಹೊಡೆದುರುಳಿಸಿದೆ.

ಈ ಕುರಿತು ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಉತ್ತರ ಪರ್ಷಿಯನ್ ಕೊಲ್ಲಿ ಇದ್ದ ಅಮೆರಿಕಾದ ಟ್ಯಾಂಕರ್ ಅನ್ನು ಗುರಿಯಾಗಿಸಿ ದಾಳಿ ನಡೆಸಿದ್ದು, ದಾಳಿಯ ತೀವ್ರತೆಗೆ ಟ್ಯಾಂಕರ್ ಗಂಭೀರವಾಗಿ ಹಾನಿಯಾಗಿದ್ದು, ಅಮೆರಿಕಾದ ಹಡಗು ಬೆಂಕಿಗೆ ಆಹುತಿಯಾಗಿದೆ ಎಂದು IRGC ತಿಳಿಸಿರುವುದಾಗಿ ಇರಾನಿ ಮಾಧ್ಯಮಗಳು ವರದಿ ಮಾಡಿದೆ.

**ಮತ್ತೆ ನಡೆಯುತ್ತಾ ದಾಳಿ?**

- ಹಿಂದೂಮಹಾಸಾಗರದಲ್ಲಿ ಇರಾನ್ ಯುದ್ಧನೌಕೆ ಹೊಡೆದುರುಳಿಸಿದ್ದ ಯುಎಸ್ ಇರಾನ್ ದಾಳಿಯ ಶಾಕ್
- ಉತ್ತರ ಪರ್ಶಿಯನ್ ಕೊಲ್ಲಿಯಲ್ಲಿದ್ದ ಅಮೆರಿಕಾದ ಟ್ಯಾಂಕರ್ ಮೇಲೆ ಇರಾನ್‌ನಿಂದ ಪ್ರತೀಕಾರದ ದಾಳಿ
- ಹಿಂದೂಮಹಾಸಾಗರದಲ್ಲಿರುವ ಮತ್ತೊಂದು ಇರಾನ್ ಹಡಗು, ಮತ್ತೆ ನಡೆಯುತ್ತಾ ದಾಳಿ?

**ಐರಿಸ್ ದೇನಾ ಮೇಲಿನ ದಾಳಿಗೆ ಪ್ರತ್ಯುತ್ತರ**

**ಎಚ್ಚರಿಕೆ ನೀಡಿದ್ದ ಇರಾನ್:** ಇದಕ್ಕೂ ಮೊದಲು ಹಿಂದೂಮಹಾಸಾಗರದಲ್ಲಿ ಇರಾನ್ ಯುದ್ಧನೌಕೆ ಐರಿಸ್ ದೇನಾ ಮೇಲೆ ದಾಳಿ ನಡೆಸಿದ್ದಕ್ಕೆ ಪ್ರತಿಕ್ರಿಯೆ ನೀಡಿದ್ದ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ ಇರಾನ್ ಕರಾವಳಿಯಿಂದ 2,000 ಮೈಲು ದೂರದಲ್ಲಿರುವ ಸಮುದ್ರದಲ್ಲಿ ಅಮೆರಿಕ ಒಂದು ದೌರ್ಜನ್ಯ ಎಸಗಿದೆ.

ಸುಮಾರು 130 ನಾವಿಕರನ್ನು ಹೊತ್ತೊಯ್ಯುತ್ತಿದ್ದ ಭಾರತದ ನೌಕಾಪಡೆಯ ಅತಿಥಿಯಾಗಿದ್ದ ಫ್ರಿಗೇಟ್ ದೇನಾ ಮೇಲೆ ಯಾವುದೇ ಎಚ್ಚರಿಕೆ ನೀಡದೆ ಅಂತರಾಷ್ಟ್ರೀಯ ನೀರಿನಲ್ಲಿ ಹೊಡೆದುಹಾಕಿದೆ. ಹೀಗೆ ಎಚ್ಚರಿಕೆ ನೀಡಿದ ಕೆಲ ಗಂಟೆಗಳಲ್ಲೇ ಅಮೆರಿಕಾದ ನೌಕೆಯ ಮೇಲೆ ದಾಳಿ ಮಾಡಿ ಬೆಂಕಿಗಾಹುತಿಯಾಗುವಂತೆ ಮಾಡಿದೆ.

ಇನ್ನು, ಭಾರತದಿಂದ ಕವಾಯತು ಕಾರ್ಯಕ್ರಮವನ್ನು ಮುಗಿಸಿಕೊಂಡು ಇರಾನ್ ನತ್ತ ಪ್ರಯಾಣ ಬೆಳೆಸಿದ್ದ ಸಮಯದಲ್ಲಿ ಅಮೆರಿಕಾ ಟಾರ್ಪಿಡೋ ಮೂಲಕ ದಾಳಿ ನಡೆಸಿದ್ದು, ಈ ದಾಳಿಯಲ್ಲಿ ನೌಕೆ ಪತನಗೊಂಡಿದ್ದು ಅದರಲ್ಲಿದ್ದ ಇರಾನಿ ನಾವಿಕರು ಸಾವನ್ನಪ್ಪಿದ್ದರು.

**ಶ್ರೀಲಂಕಾದತ್ತ ಸಾಗುತ್ತಿರುವ ಇರಾನ್ ಮತ್ತೊಂದು ಯುದ್ಧನೌಕೆ**

**ಇದಾದ ಬಳಿಕ ಈಗ ಮತ್ತೆ ಇರಾನ್‌ನ 2ನೇ ಯುದ್ಧನೌಕೆ ಸದ್ಯ ಹಿಂದೂಮಹಾಸಾಗರದಲ್ಲಿ ಶ್ರೀಲಂಕಾದ ಜಲಪ್ರದೇಶಕ್ಕೆ ಆಗಮಿಸಲು ವಿನಂತಿಯನ್ನು ಮಾಡಿಕೊಂಡಿದ್ದು, ಇದರಲ್ಲಿ ಸುಮಾರು 100ಕ್ಕೂ ಅಧಿಕ ಇರಾನಿ ನಾವಿಕರು ಇದ್ದು, ಇದು ಹಿಂದಿನ ಯುದ್ಧನೌಕೆಯಂತಯೇ ಅಮೆರಿಕಾದ ದಾಳಿಗೆ ಗುರಿಯಾಗಬಹುದು ಎಂದು ಶ್ರೀಲಂಕಾದ ಅಧಿಕಾರಿಗಳು ಕಳವಳ ವ್ಯಕ್ತಪಡಿಸಿರುವುದಾಗಿ ವರದಿಯಾಗಿದೆ. ಹೀಗೆ ಹಿಂದೂಮಹಾಸಾಗರದಲ್ಲಿ ಇರಾನ್ ನೌಕೆಗೆ ಅಮೆರಿಕಾ ನಡೆಸಿದ ದಾಳಿಗೆ ಪರ್ಶಿಯನ್ ಕೊಲ್ಲಿಯಲ್ಲಿ ಇರಾನ್ ಉತ್ತರ ಕೊಟ್ಟಿದ್ದು, ಸದ್ಯ ಇರಾನ್ ಮತ್ತೊಂದು ನೌಕೆ ಇನ್ನೂ ಹಿಂದೂಮಹಾಸಾಗರದಲ್ಲೇ ಉಳಿದಿದ್ದು, ಶ್ರೀಲಂಕಾದತ್ತ ಹೋಗಲು ಪ್ರಯತ್ನ ಮಾಡುತ್ತಿದ್ದು, ಇದು ಹಿಂದೂಮಹಾಸಾಗರದಲ್ಲಿ ಉದ್ವಿಗ್ನತೆಯ ಆತಂಕವನ್ನು ಹೆಚ್ಚಿಸಿದೆ.**

## ಮಿನಿ ನ್ಯೂಸ್

### ಅಸ್ಸಾಂನಲ್ಲಿ ಕಾಂಗ್ರೆಸ್ ಶಾಸಕರ ನಡಿಗೆ ಬಿಜೆಪಿ ಕಡೆಗೆ

**ಗುವಾಹಟಿ:** ವಿಧಾನಸಭಾ ಚುನಾವಣೆಗೆ ಮುನ್ನ ಅಸ್ಸಾಂನಲ್ಲಿ ಕಾಂಗ್ರೆಸ್ ಶಾಸಕರಾದ ಕಮಲಾಖ್ಯದೇ ಪುರಕಾಯಸ್ಥ, ಸಶಿಕಾಂತ ದಾಸ್ ಮತ್ತು ಬಸಂತ ದಾಸ್ ಅವರು ಇತರ ಇಬ್ಬರು ಶಾಸಕರೊಂದಿಗೆ ಬಿಜೆಪಿಗೆ ಸೇರ್ಪಡೆಗೊಂಡರು. ಇಲ್ಲಿ ನಡೆದ ಸಮಾರಂಭದಲ್ಲಿ ಕೇಂದ್ರ ಸಚಿವ ಪಬಿತ್ರ ಮಾರ್ಗರಿಟಾ ಅವರ ಸಮ್ಮುಖದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ದಿಲೀಪ್ ಸೈಕಿಯಾ ಅವರೆಲ್ಲರನ್ನೂ ಪಕ್ಷಕ್ಕೆ ಸೇರಿಸಿಕೊಂಡರು. ಅಸ್ಸಾಂ ಕಾಂಗ್ರೆಸ್‌ನ ಮಾಜಿ ಅಧ್ಯಕ್ಷ ಭೂಪೇನ್ ಬೋರಾ ಅವರು ಕೇಸರಿ ಪಕ್ಷಕ್ಕೆ ಸೇರ್ಪಡೆಯಾದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ.

126 ಸದಸ್ಯರ ಅಸ್ಸಾಂ ವಿಧಾನಸಭೆಗೆ ಏಪ್ರಿಲ್‌ನಲ್ಲಿ ಚುನಾವಣೆ ನಡೆಯುವ ಸಾಧ್ಯತೆಯಿದೆ. ಪುರಕಾಯಸ್ಥ ಕರೀಮ್‌ಗಂಜ್ (ಉತ್ತರ) ಅನ್ನು ಪ್ರತಿನಿಧಿಸುತ್ತದೆ, ಆದರೆ ಸಶಿಕಾಂತ ಮತ್ತು ಬಸಂತ ಕ್ರಮವಾಗಿ ರಹಾ ಮತ್ತು ಮಂಗಲ್ಡೋಯ್ (ಎಸ್‌ಸಿ) ಕ್ಷೇತ್ರಗಳ ಹಾಲಿ ಶಾಸಕರು.ಬಿಜೆಪಿ ಸೇರಿದ ಇನ್ನಿಬ್ಬರು ಕಾಂಗ್ರೆಸ್‌ನ ಮಾಜಿ ಜಂಟಿ ಕಾರ್ಯದರ್ಶಿ ಪಾರ್ಷ ಬಾಬ್ ಕಲಿತಾ ಮತ್ತು ತೃಣಮೂಲ ಕಾಂಗ್ರೆಸ್‌ನ ಮಾಜಿ ಪ್ರಧಾನ ಕಾರ್ಯದರ್ಶಿ ಕಂಕನ್ ನಾಥ್ ಆಗಿದ್ದಾರೆ.

ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರ ಆಪ್ತರು ಎಂದು ವರದಿಯಾಗಿರುವ ಈ ಮೂವರು ಶಾಸಕರು ಕಳೆದ ಕೆಲವು ವರ್ಷಗಳಿಂದ ಬಿಜೆಪಿಯನ್ನು ಬಹಿರಂಗವಾಗಿ ಬೆಂಬಲಿಸುತ್ತಿದ್ದರು, 2021 ರಲ್ಲಿ ಸಸಿಕಾಂತ ದಾಸ್ ಆಡಳಿತ ಪಕ್ಷದ ನೀತಿಗಳಿಗೆ ತಮ್ಮ ಬೆಂಬಲವನ್ನು ಘೋಷಿಸಿದರು. ಫೆಬ್ರವರಿ 22 ರಂದು ಬೋರಾ ಬಿಜೆಪಿಗೆ ಸೇರ್ಪಡೆಗೊಂಡರೆ, ಇತರ ಇಬ್ಬರು ಶಾಸಕರಾದ ಅಬ್ದುಲ್ ರಶೀದ್ ಮೊಂಡಲ್ ಮತ್ತು ಶೆರ್ಮನ್ ಅಲಿ ಅಹ್ಮದ್ ಕಳೆದ ತಿಂಗಳು ರೈಜೋರ್ ದಳಕ್ಕೆ ಸೇರ್ಪಡೆಗೊಂಡಿದ್ದರಿಂದ ಕಾಂಗ್ರೆಸ್‌ಗೆ ಆಘಾತವಾಗಿದೆ.ಮೊಂಡಲ್ ಮತ್ತು ಅಹ್ಮದ್ ಇಬ್ಬರೂ ಕ್ರಮವಾಗಿ ಗೋಲ್‌ಪಾರ (ಪಶ್ಚಿಮ) ಮತ್ತು ಬಾಗ್‌ಬಾರ್‌ನಿಂದ ಮೂರು ಬಾರಿ ಶಾಸಕರಾಗಿದ್ದಾರೆ.

### ವಾಣಿಜ್ಯ ಸಿಲಿಂಡರ್ ರಿಯಾಯಿತಿಗಳು ಸ್ಥಗಿತ

**ನವದೆಹಲಿ:** ಮಧ್ಯ ಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ ಅನಿಲ ಪೂರೈಕೆ ಮೇಲೆ ಪರಿಣಾಮ ಬೀರಿರುವುದರಿಂದ ವಾಣಿಜ್ಯ ಸಿಲಿಂಡರ್‌ಗಳಿಗೆ ನೀಡಲಾಗಿದ್ದ ರಿಯಾಯಿತಿಗಳನ್ನು ಸ್ಥಗಿತಗೊಳಿಸಲಾಗಿದೆ. ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ನಿರ್ದೇಶನದ ಮೇರೆಗೆ 19 ಕೆಜಿ ಮತ್ತು 47 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಮೇಲಿನ ರಿಯಾಯಿತಿಗಳನ್ನು ರದ್ದುಗೊಳಿಸಿರುವುದಾಗಿ ಇಂಡೇನ್ ಆಯಿಲ್ ಪ್ರಕಟಣೆಯಲ್ಲಿ ತಿಳಿಸಿದೆ. ಮಧ್ಯಪ್ರಾಚ್ಯದಲ್ಲಿನ ಭೌಗೋಳಿಕ ಮತ್ತು ರಾಜಕೀಯ ಪರಿಸ್ಥಿತಿ ಗಮನದಲ್ಲಿಟ್ಟುಕೊಂಡು 19 ಕೆಜಿ ಮತ್ತು 47.5 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಪೂರೈಕೆಗೆ ವಿಸ್ತರಿಸಲಾಗಿದ್ದ ಎಲ್ಲಾ ರಿಯಾಯಿತಿಗಳನ್ನ ಮುಂದಿನ ಅಧಿಸೂಚನೆಯವರೆಗೆ ತಡೆಹಿಡಿಯಲಾಗಿದೆ. ಇಂಡಿಯನ್ ಆಯಿಲ್ ನಿರ್ದೇಶನದ ಮೇರೆಗೆ ಈ ನಿರ್ಧಾರ ಕೈಗೊಂಡಿರುವುದಾಗಿ ಇಂಡೇನ್ ಗ್ಯಾಸ್ ಡಿಸ್ಟ್ರಿಬ್ಯೂಟರ್ಸ್ ತಿಳಿಸಿದೆ.

### ಖಮೇನಿ ಹತ್ಯೆ ಖಂಡಿಸಿ ಪ್ರತಿಭಟನೆ : ಐದನೇ ದಿನವೂ ಕಾಶ್ಮೀರ ಅಸ್ತವ್ಯಸ್ತ

**ಶ್ರೀನಗರ:** ಖಮೇನಿ ಹತ್ಯೆ ನಂತರ ಮುನ್ನೆಚ್ಚರಿಕೆ ಕ್ರಮವಾಗಿ ಜನರ ಚಲನವಲನಗಳ ಮೇಲೆ ಭಾಗಶಃ ನಿರ್ಬಂಧಗಳು ಜಾರಿಯಲ್ಲಿದ್ದರಿಂದ ಕಾಶ್ಮೀರದಲ್ಲಿ ಸಾಮಾನ್ಯ ಜೀವನವು ಸತತ ಐದನೇ ದಿನವೂ ಅಸ್ತವ್ಯಸ್ತವಾಗಿದೆ.

ಅಮೆರಿಕ-ಇಸ್ರೇಲ್ ಜಂಟಿ ದಾಳಿಯಲ್ಲಿ ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಹತ್ಯೆಯನ್ನು ಖಂಡಿಸಿ ಒಂದು ದಿನ ಮುಂಚಿತವಾಗಿ ಕಾಶ್ಮೀರದಾದ್ಯಂತ ಸ್ವಯಂಪ್ರೇರಿತ ಪ್ರತಿಭಟನೆಗಳು ಭುಗಿಲೆದ್ದ ನಂತರ ನಿರ್ಬಂಧಗಳನ್ನು ವಿಧಿಸಲಾಯಿತು. ಪರಿಸ್ಥಿತಿಯನ್ನು ಸಾಮಾನ್ಯ ಸ್ಥಿತಿಗೆ ತರುವ ಪ್ರಯತ್ನಗಳ ಭಾಗವಾಗಿ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ನಾಗರಿಕ ಸಮಾಜದ ಪ್ರತಿನಿಧಿಗಳು ಮತ್ತು ಧಾರ್ಮಿಕ ಮುಖಂಡರೊಂದಿಗೆ ಸಭೆ ನಡೆಸಿದರು.ಸಭೆಯ ನಂತರ, ಅಬ್ದುಲ್ಲಾ ಮಸೀದಿಗಳು, ದೇವಾಲಯಗಳು ಮತ್ತು ಇಮಾಂಬರಾಗಳಲ್ಲಿ ದುಃಖ ಮತ್ತು ಕೋಪವನ್ನು ವ್ಯಕ್ತಪಡಿಸುತ್ತಾ ಜನರು ಶಾಂತಿಯನ್ನು ಕಾಪಾಡಿಕೊಳ್ಳಲು ಮನವಿ ಮಾಡಿದರು. ಸರ್ಕಾರವು ಶನಿವಾರದವರೆಗೆ ಶಿಕ್ಷಣ ಸಂಸ್ಥೆಗಳನ್ನು ಮುಚ್ಚಿದೆ ಮತ್ತು ಮೊಬೈಲ್ ಇಂಟರ್ನೆಟ್ ವೇಗವನ್ನು ಕಡಿಮೆ ಮಾಡಿದೆ. ಕಾಶ್ಮೀರದ ಹಲವು ಭಾಗಗಳಲ್ಲಿ ಜನರ ಚಲನವಲನ ಮತ್ತು ಸಭೆ ಸೇರುವಿಕೆಯ ಮೇಲಿನ ನಿರ್ಬಂಧಗಳು ಮುಂದುವರೆದವು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಪರೀಕ್ಷೆಗೆ ಬಂದಿದ್ದ 16 ವರ್ಷದ ವಿದ್ಯಾರ್ಥಿನಿಗೆ ಶೌಚಾಲಯದಲ್ಲೇ ಹೆರಿಗೆ

**ಹೈದರಾಬಾದ್:** ತೆಲಂಗಾಣದ ನಾಗರ್ಕರ್ನೂಲ್‌ನಲ್ಲಿ ಪರೀಕ್ಷೆ ಬರೆಯಲು ಶಾಲೆಗೆ ಬಂದಿದ್ದ 16 ವರ್ಷದ ಬಾಲಕಿ ಮಗುವಿಗೆ ಜನ್ಮ ನೀಡಿದ್ದಾಳೆ.

ಬಾಲಕಿಯರ ವಸತಿ ಶಾಲೆಯ ವಿದ್ಯಾರ್ಥಿನಿಗೆ ಪರೀಕ್ಷಾ ಕೇಂದ್ರಕ್ಕೆ ಹಾಜರಾದಾಗ ತೀವ್ರವಾದ ಹೊಟ್ಟೆ ನೋವು ಕಾಣಿಸಿಕೊಂಡಿದೆ. ಕೂಡಲೇ ಈ ಬಗ್ಗೆ ಸಿಬ್ಬಂದಿಗೆ ಮಾಹಿತಿ ನೀಡಿದ್ದಾಳೆ. ನಂತರ ಆಕೆಯ ತಾಯಿ ಅವಳನ್ನು ಪಟ್ಟಣದ ಖಾಸಗಿ ಆಸ್ಪತ್ರೆಗೆ ಕರೆದೊಯ್ದಿದ್ದರು. ಈ ವೇಳೆ ವೈದ್ಯರು ಸ್ಕ್ಯಾನ್ ಮಾಡಿಸಲು ಸೂಚಿಸಿದ್ದರು.

ಸ್ಕ್ಯಾನಿಂಗ್ ಕೇಂದ್ರದಲ್ಲಿ ಕಾಯುತ್ತಿದ್ದಾಗ, ಬಾಲಕಿ ಶೌಚಾಲಯಕ್ಕೆ ತೆರಳಿದ್ದಳು. ಅಲ್ಲಿ ಅವಳು ಮಗುವಿಗೆ ಜನ್ಮ ನೀಡಿದ್ದಾಳೆ. ಅಲ್ಲಿನ ಸಿಬ್ಬಂದಿ ಈ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಪೊಲೀಸರು ಸ್ಥಳಕ್ಕೆ ಧಾವಿಸಿ ಬಾಲಕಿ ಮತ್ತು ನವಜಾತ ಶಿಶುವನ್ನು ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆಗೆ ಸ್ಥಳಾಂತರಿಸಿದರು. ತಾಯಿ ಮತ್ತು ಮಗು ಇಬ್ಬರೂ ಸುರಕ್ಷಿತರಾಗಿದ್ದು ಆರೈಕೆಯಲ್ಲಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

### ಜಾತಿ ಕಾರಣಕ್ಕೆ ಮದುವೆಗೆ ನಿರಾಕರಿಸಿದ ಪ್ರಿಯಕರ: ಮನನೊಂದು ಯುವತಿ ಆತ್ಮಹತ್ಯೆ

**ಸೇಲಂ:** ಜಾತಿ ಭೇದ ಕಾರಣ ನೀಡಿ ಪ್ರಿಯಕರನೊಬ್ಬ ಮದುವೆಗೆ ನಿರಾಕರಿಸಿದ್ದರಿಂದ ಮನನೊಂದ ಯುವತಿಯೊಬ್ಬಳು ಆತ್ಮಹತ್ಯೆಗೆ ಶರಣಾಗಿರುವ ಘಟನೆ ತಮಿಳುನಾಡಿನ ಸೇಲಂನಲ್ಲಿ ನಡೆದಿದೆ.

ಮೃತ ಯುವತಿ ಖಾಸಗಿ ಕಾಲೇಜಿನ ಮೂರನೇ ವರ್ಷದ ಪದವಿ ವಿದ್ಯಾರ್ಥಿನಿಯಾಗಿದ್ದಳು. ಈಕೆ ದಿನಗೂಲಿ ಕೆಲಸಗಾರ ಕಾರ್ತಿಕೇಯನ್ ಎಂಬಾತನನ್ನು ಹಲವು ವರ್ಷಗಳಿಂದ ಪ್ರೀತಿಸುತ್ತಿದ್ದಳು. ಇಬ್ಬರ ಜಾತಿ ಬೇರೆಯಾಗಿದೆ. ಯುವತಿ ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದವಳಾಗಿದ್ದರೆ, ಯುವಕ ಅತ್ಯಂತ ಹಿಂದುಳಿದ ವರ್ಗಕ್ಕೆ ಸೇರಿದವನಾಗಿದ್ದಾನೆ. ಇತ್ತೀಚೆಗೆ ಯುವಕ ಜಾತಿ ವಿಚಾರ ಪ್ರಸ್ತಾಪಿಸಿ, ಮದುವೆಗೆ ನಿರಾಕರಿಸಿದ್ದಾನೆ. ಇದರಿಂದ ಮನನೊಂದಿದ್ದ ಯುವತಿ ಫೆಬ್ರವರಿ 21ರಂದು ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ಕೂಡಲೇ ಆಕೆಯನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ನಂತರ ಸರ್ಕಾರಿ ಮೋಹನ್ ಕುಮಾರಮಂಗಲಂ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ಮೃತಪಟ್ಟಿದ್ದಾಳೆ. ಯುವತಿಯ ಸಾವಿನ ನಂತರ ಕುಟುಂಬದವರು ಮೃತದೇಹ ಸ್ವೀಕರಿಸಲು ನಿರಾಕರಿಸಿ, ಆರೋಪಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

# ಯಶ್ ನಿರ್ಧಾರದಿಂದ ಲೆಕ್ಕಾಚಾರಗಳೇ ಬುಡಮೇಲು!

ರಾಕಿಂಗ್ ಸ್ಟಾರ್ ಯಶ್ ಅವರ ಟಾಕ್ಸಿಕ್ ಸಿನಿಮಾದ ಮೇಲೆ ಅಭಿಮಾನಿಗಳು ಅಪಾರ ನಿರೀಕ್ಷೆಯನ್ನು ಇಟ್ಟುಕೊಂಡಿದ್ದರು. ಮಾರ್ಚ್ 19ರಂದು ಈ ಸಿನಿಮಾ ತೆರೆಗೆ ಬರಲು ಸಜ್ಜಾಗಿತ್ತು. ಆದರೆ ರಿಲೀಸ್‌ಗೆ 15 ದಿನ ಬಾಕಿ ಇರುವಾಗಲೇ ದಿನಾಂಕವನ್ನು ಯಶ್ ಬದಲಿಸಿಬಿಟ್ಟರು. ಈ ದೊಡ್ಡ ಬೆಳವಣಿಗೆಯಿಂದ ವಿವಿಧ ಚಿತ್ರರಂಗಗಳ ಹಲವು ಲೆಕ್ಕಾಚಾರಗಳು ಬುಡಮೇಲಾಗಿವೆ.

**ಸಿನಿಮಾಗಳು ಪೋಸ್ಟ್‌ಪೋನ್:** ಮಾ.27ರಂದು ತೆರೆಗೆ ಬರಬೇಕಿದ್ದ ಪೆದ್ದಿ ಮತ್ತು ಪ್ಯಾರಡೈಸ್ ಸಿನಿಮಾಗಳು ಮಾ.19ರ ಧುರಂಧರ್ 2 ವರ್ಸಸ್ ಟಾಕ್ಸಿಕ್ ಫೈಟ್‌ನಿಂದಾಗಿ ಪೋಸ್ಟ್ ಆಗಿದ್ದವು. ಆನಂತರ ಮಾ.27ರ ಸ್ಲಾಟ್ ಅನ್ನು ಪವನ್ ಕಲ್ಯಾಣ್ ಉಸ್ತಾದ್ ಭಗತ್ ಸಿಂಗ್ ಆಕ್ರಮಿಸಿಕೊಂಡಿತ್ತು.



ಆದರೆ ಟಾಕ್ಸಿಕ್ ಚಿತ್ರವೇ ಪೋಸ್ಟ್‌ಪೋನ್ ಆಗಿದ್ದರಿಂದ ಬೇರೆ ಸಿನಿಮಾಗಳ ರಿಲೀಸ್ ಲೆಕ್ಕಾಚಾರಗಳು ಬದಲಾಗಿವೆ.

ಆಂಧ್ರ ಪ್ರದೇಶ ಡಿಸಿಎಂ, ಪವರ್ ಸ್ಟಾರ್ ಪವನ್ ಕಲ್ಯಾಣ್ ಅವರ 'ಉಸ್ತಾದ್ ಭಗತ್ ಸಿಂಗ್' ಚಿತ್ರವು ಹರೀಶ್ ಶಂಕರ್ ನಿರ್ದೇಶನದಲ್ಲಿ ಮೂಡಿಬಂದಿದೆ.

ಮೊದಲು ಈ ಚಿತ್ರವನ್ನು ಮಾರ್ಚ್ 26 ರಂದು ಬಿಡುಗಡೆ ಮಾಡುವುದಾಗಿ ಚಿತ್ರತಂಡ ಘೋಷಿಸಿತ್ತು.

ಅದಕ್ಕೆ ತಕ್ಕಂತೆ ಪ್ರಚಾರ ಕಾರ್ಯಗಳೂ ನಡೆಯುತ್ತಿದ್ದವು. ಆದರೆ ಈಗ ದಿಢೀರ್ ಆಗಿ ಚಿತ್ರದ ಬಿಡುಗಡೆ ದಿನಾಂಕವನ್ನು ಬದಲಾಯಿಸಲಾಗಿದೆ. ಇದೀಗ ಈ ಸಿನಿಮಾವು ಮಾರ್ಚ್ 19ರಂದೇ ವಿಶ್ವದಾದ್ಯಂತ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ಮಾಹಿತಿ ನೀಡಿದೆ.

ಮಾರ್ಚ್ 19 ರಂದು ಬಿಡುಗಡೆಯಾಗಬೇಕಿದ್ದ ಯಶ್ ಅಭಿನಯದ 'ಟಾಕ್ಸಿಕ್' ಸಿನಿಮಾ ಮುಂದೂಡಲ್ಪಟ್ಟಿದ್ದರಿಂದ ಸಿಕ್ಕಿರುವ ಈ ಖಾಲಿ ಸ್ಲಾಟ್ ಅನ್ನು ಬಳಸಿಕೊಳ್ಳಲು ಪವನ್ ಕಲ್ಯಾಣ್ ಅವರ ಸಿನಿಮಾವನ್ನು ಮುಂಚಿತವಾಗಿಯೇ ಬಿಡುಗಡೆ ಮಾಡುತ್ತಿರುವುದು ಸ್ಪಷ್ಟವಾಗಿದೆ.




# ಒಂದೇ ಸಿನಿಮಾದಲ್ಲಿ ಮೂವರು ದಿಗ್ಗಜರು

ಬೇರೆ ಬೇರೆ ಭಾಷೆಯ ಸ್ಟಾರ್ ಕಲಾವಿದರು ಒಟ್ಟಿಗೆ ನಟಿಸುತ್ತಿದ್ದಾರೆ. ಅಚ್ಚರಿ ಎಂದರೆ ಈಗ ಒಂದೇ ಸಿನಿಮಾದಲ್ಲಿ ಶಾರುಖ್ ಖಾನ್, ರಜನಿಕಾಂತ್, ಶಿವರಾಜ್‌ಕುಮಾರ್ ಮುಂತಾದವರು ನಟಿಸುತ್ತಿದ್ದಾರೆ.

ಮಲ್ಟಿಸ್ಟಾರರ್ ಸಿನಿಮಾಗಳ ಬಗ್ಗೆ ಪ್ರೇಕ್ಷಕರು ಯಾವಾಗಲೂ ಒಲವು ತೋರಿಸುತ್ತಾರೆ. ಪ್ಯಾನ್ ಇಂಡಿಯಾ ಸಿನಿಮಾಗಳ ಸಂಖ್ಯೆ ಹೆಚ್ಚಿದ ಬಳಿಕ ಈ ಟ್ರೆಂಡ್ ಜಾಸ್ತಿ ಆಗಿದೆ.







ಬೇರೆ ಬೇರೆ ಭಾಷೆಯ ಸ್ಟಾರ್ ಕಲಾವಿದರು ಒಟ್ಟಿಗೆ ನಟಿಸುತ್ತಿದ್ದಾರೆ. ಅಚ್ಚರಿ ಎಂದರೆ ಈಗ ಒಂದೇ ಸಿನಿಮಾದಲ್ಲಿ ಶಾರುಖ್ ಖಾನ್, ರಜನಿಕಾಂತ್, ಶಿವರಾಜ್‌ಕುಮಾರ್ ಮುಂತಾದವರು ನಟಿಸುತ್ತಿದ್ದಾರೆ.

ದಕ್ಷಿಣ ಭಾರತದ ಸಿನಿಪ್ರಿಯರು ಕಾತುರದಿಂದ ಕಾಯುತ್ತಿರುವ ಸಿನಿಮಾ ಅಂದ್ರೆ ಅದು ರಜನಿಕಾಂತ್-ನೆಲ್ಸನ್ ಕಾಂಬಿನೇಷನ್‌ನ 'ಜೈಲರ್ 2'. ಮೊದಲ ಭಾಗದ ಬ್ಲಾಕ್ ಬಸ್ಟರ್ ಯಶಸ್ಸಿನ ನಂತರ, ಮುತ್ತುವೇಲ್ ಪಾಂಡಿಯನ್ ಆಗಿ ರಜನಿಕಾಂತ್ ಮತ್ತೆ ತೆರೆ ಮೇಲೆ ಬರಲಿದ್ದಾರೆ.

ಹೀಗಾಗಿ ಪ್ರೇಕ್ಷಕರಲ್ಲಿ ನಿರೀಕ್ಷೆ ಮುಗಿಲುಮುಟ್ಟಿದೆ. 'ಜೈಲರ್ 2' ನಲ್ಲಿ ರಜನಿ ಜೊತೆ ಭಾರತೀಯ ಚಿತ್ರರಂಗದ ಘಟಾನುಘಟಿ ನಟರು ಸೇರಲಿದ್ದಾರೆ ಎಂಬ ಸುದ್ದಿ ಮೊದಲಿನಿಂದಲೂ ಇತ್ತು. ಇದೀಗ, 'ಜೈಲರ್' ಮೊದಲ ಭಾಗದಲ್ಲಿ ಮೋಹನ್‌ಲಾಲ್‌ಗೆ ಕಾಸ್ಟ್ಯೂಮ್ ಡಿಸೈನರ್ ಆಗಿದ್ದ ಜಿಶಾದ್ ಶಂಸುದ್ದೀನ್ ಇನ್‌ಸ್ಟಾಗ್ರಾಂನಲ್ಲಿ ಹಂಚಿಕೊಂಡ ಪೋಸ್ಟ್ ಒಂದು ಹೊಸ ಚರ್ಚೆಗೆ ಕಾರಣವಾಗಿದೆ.

ಜೈಲರ್ 2 ಚಿತ್ರ ತಂಡವು ಇನ್ನೂ ಬಿಡುಗಡೆ ದಿನಾಂಕವನ್ನು ಘೋಷಿಸಿಲ್ಲ, ಆಗಸ್ಟ್ ಆಸುಪಾಸಿನಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಿದೆ.

# ನಾಯಕಿಯಾದ ಮೌನ ಗುಡ್ಡೆಮನೆ

ಕಿರುತೆರೆ ಮನರಂಜನಾ ಕ್ಷೇತ್ರದಲ್ಲಿ ಸದ್ಯ ನಂ.1 ಸ್ಥಾನದಲ್ಲಿರುವ ಜೀ ಕನ್ನಡ ವಾಹಿನಿ ಹೊಸದೊಂದು ಸರ್ಪ್ರೈಸ್ ನೀಡಲು ಸಜ್ಜಾಗಿದೆ. ಪ್ರೀತಿ, ಪ್ರತೀಕಾರ ಮತ್ತು ವಿಧಿಯಾಟದ ಸುತ್ತ ನಡೆಯುವ 'ಕೃಷ್ಣ ರುಕ್ಕು' ಧಾರಾವಾಹಿಯನ್ನು ಕನ್ನಡ ವೀಕ್ಷಕರಿಗೆ ನೀಡುತ್ತಿದೆ. ಮಾರ್ಚ್ 9 ರಿಂದ 6.30ಕ್ಕೆ ಜೀ ಕನ್ನಡ ವಾಹಿನಿಯಲ್ಲಿ ಈ ಹೊಸ ಸೀರಿಯಲ್ ಪ್ರಸಾರವಾಗಲಿದೆ.

ಕುಟುಂಬದ ಒಗ್ಗಟ್ಟು, ಜವಾಬ್ದಾರಿ, ಪ್ರೀತಿ ಜೊತೆಗೆ ಅನಿರೀಕ್ಷಿತ ತಿರುವುಗಳು ಕೂಡ ಕೃಷ್ಣ ರುಕ್ಕು ಧಾರಾವಾಹಿಯಲ್ಲಿ ಕಾಣಸಿಗಲಿದೆ. ಅಣ್ಣನ ಅಕಾಲಿಕ ನಿಧನದ ನಂತರ ತನ್ನ ಇಡೀ ಕುಟುಂಬದ ಜವಾಬ್ದಾರಿಯನ್ನು ತನ್ನ ಹೆಗಲಮೇಲೆ ಹಾಕಿಕೊಂಡ ರುಕ್ಕು ಏನೆಲ್ಲಾ ಸವಾಲುಗಳನ್ನು ಎದುರಿಸುತ್ತಾಳೆ ಎಂಬುದನ್ನು ಇಲ್ಲಿ ತೋರಿಸಲಾಗಿದೆಯಂತೆ. ಪ್ರೀತಿ, ದ್ವೇಷ ಮತ್ತು ವಿಧಿಯಾಟದ ನಡುವೆ ಕೃಷ್ಣ ಮತ್ತು ರುಕ್ಕುವಿನ ಜೀವನ ಹೇಗೆ ಸಾಗಲಿದೆ ಎನ್ನುವುದು ಈ ಧಾರಾವಾಹಿಯ ಮತ್ತೊಂದು ಕುತೂಹಲಕಾರಿ ಅಂಶ.

**ಕಲಾವಿದರು ಯಾರ್ ಯಾರು:** ನಟಿ ಮೌನ ಗುಡ್ಡೇಮನೆ ಅವರು ಇಲ್ಲಿ ರುಕ್ಕು ಆಗಿ ನಟಿಸಿದರೆ, ಕೃಷ್ಣನ ಪಾತ್ರವನ್ನು ಅಕ್ಷಯ್ ನಾಯಕ್ ನಿರ್ವಹಿಸಲಿದ್ದಾರೆ. ಅಷ್ಟೇ ಅಲ್ಲದೇ, ಹಿರಿಯ ನಿರ್ದೇಶಕ, ನಿರ್ಮಾಪಕ ಎಸ್. ನಾರಾಯಣ್ ಅವರಿಲ್ಲಿ ಸೂರ್ಯ ಪ್ರಕಾಶ್ ಎಂಬ ಮಹತ್ವದ ಪಾತ್ರಕ್ಕೆ ಜೀವ ತುಂಬಲಿದ್ದಾರೆ. ಹಲವು ವರ್ಷಗಳ ನಂತರ ಕನ್ನಡ ಕಿರುತೆರೆಗೆ ಕಮ್ ಬ್ಯಾಕ್ ಆಗಿದ್ದಾರೆ ಖ್ಯಾತ ನಟಿ ಸುಚಿತ್ರಾ. ಒಂದು ಮುಖ್ಯ ಪಾತ್ರವನ್ನು ಗಾಯಕ ನವೀನ ಸಜ್ಜು ಮಾಡಿದ್ದಾರೆ.

ಮತ್ತೆ ಕಿರುತೆರೆಗೆ ನಾರಾಯಣ್

# ಸದ್ದಿಲ್ಲದೇ ನಡೆಯುತ್ತಿದೆ ಸಮಂತಾ ಶೂಟಿಂಗ್




ಟಾಲಿವುಡ್ ನಟಿ ಸಮಂತಾ ರುತ್ ಪ್ರಭು ಅವರು ರಾಜ್ ನಿಡಿಮೋರು ಜೊತೆ ವಿವಾಹವಾದ ಮೇಲೆ ಪುನಃ ಸಿನಿಮಾ ಕೆಲಸಗಳಲ್ಲಿ ಸಕ್ರಿಯವಾಗಿದ್ದಾರೆ. ಸದ್ಯ ಮಾ ಇಂಟಿ ಬಂಗಾರಂ ಸಿನಿಮಾಗೆ ನಾಯಕಿಯಾಗಿರುವ ಸಮಂತಾ, ಆ ಚಿತ್ರದ ಚಿತ್ರೀಕರಣದಲ್ಲಿ ಬ್ಯುಸಿ ಆಗಿದ್ದಾರೆ. ವಿಶೇಷ ಏನಪ್ಪ ಅಂದರೆ, ಇದರ ಶೂಟಿಂಗ್ ಸದ್ಯ ಶಿವಮೊಗ್ಗ ಜಿಲ್ಲೆಯಲ್ಲಿ ನಡೆಯುತ್ತಿದೆ. ಹೌದು, ಮಾ ಇಂಟಿ ಬಂಗಾರಂ ಸಿನಿಮಾದ ಶೂಟಿಂಗ್ ಅನ್ನು ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ನಗರ ಸುತ್ತಮುತ್ತ ಮಾಡಲಾಗುತ್ತಿದೆ. ಈಚೆಗೆ ಸಿನಿಮಾದ ಸೆಟ್‌ನಲ್ಲಿ ಹೋಳಿ ಹಬ್ಬದ ಆಚರಣೆ ಮಾಡಲಾಗಿದೆ. ಅದರ ವಿಡಿಯೋವನ್ನು ಚಿತ್ರತಂಡ ಹಂಚಿಕೊಂಡಿತ್ತು. ವಿಡಿಯೋದಲ್ಲಿ ಸಮಂತಾ ಪಿಚಕಾರಿಯಿಂದ ನೀರು ಹಾರಿಸುವ ಮೂಲಕ ಹೋಳಿ ಆಟದಲ್ಲಿ ಮಿಂದೆದ್ದಿದ್ದಾರೆ. ಇದಕ್ಕೆ ಪ್ರತಿಯಾಗಿ ಅವರ ಸಹನಟರು ನೀರಿನ ಬಲೂನ್‌ಗಳನ್ನು ಎಸೆಯುವ ಮೂಲಕ ಇಡೀ ಸೆಟ್ ಅನ್ನು ಕಲರ್‌ಫುಲ್ ಮಾಡಿದ್ದಾರೆ. ಅಲ್ಲಿನ ಲೊಕೇಷನ್ ಅನ್ನು ಗಮನಿಸಿದವರಿಗೆ ಇದು ಶಿವಮೊಗ್ಗ ಸುತ್ತಮುತ್ತಲ ಪ್ರದೇಶ ಅನ್ನೋದು ಗೊತ್ತಾಗಿತ್ತು. ಎಷ್ಟು ದಿನ ಶೂಟಿಂಗ್ ನಡೆಯಲಿದೆ ಕಥೆಯಲ್ಲಿ ಕರ್ನಾಟಕದ ಕನೆಕ್ಷನ್ ಏನಾದರೂ ಇದೆಯಾ ಸದ್ಯಕ್ಕೆ ಈ ಬಗ್ಗೆ ಹೆಚ್ಚಿನ ಮಾಹಿತಿ ಇಲ್ಲ.

**ಬಿಸಿಲಿಗೆ ಶಾಕ್ ಆದ ಸಮಂತಾ:** ಇನ್ನು, ನಟಿ ಸಮಂತಾ ಅವರು ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಶೂಟಿಂಗ್ ಸೆಟ್‌ನಲ್ಲಿ ಸೆಲ್ಫಿಯನ್ನು ಕ್ಲಿಕ್ಕಿಸಿ, ಹಂಚಿಕೊಂಡಿದ್ದಾರೆ. ಶಿವಮೊಗ್ಗದ ಲೊಕೇಷನ್ ಅನ್ನು ಹಂಚಿಕೊಂಡಿರುವ ಅವರು, ಬೇಸಿಗೆ ಶುರುವಾಯ್ತು ಎಂದು ಬರೆದುಕೊಂಡಿದ್ದಾರೆ. ಇನ್ನು, ಈ ಸಿನಿಮಾದಲ್ಲಿ ಮಲೆನಾಡ ನಟ ದಿಗಂತ್ ಮಂಚಾಲೆ ನಾಯಕರಾಗಿದ್ದು, ಅವರು ಕೂಡ ಶೂಟಿಂಗ್‌ನಲ್ಲಿ ಭಾಗಿಯಾಗಿದ್ದಾರಾ ಎಂಬುದು ಸದ್ಯಕ್ಕೆ ಗೊತ್ತಾಗಿಲ್ಲ.

# ಸೋನು ಸೂದ್ ಕಡೆಯಿಂದ ಉಚಿತ ವಸತಿ

ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಅಮೆರಿಕ-ಇರಾನ್ ಸಂಘರ್ಷದ ನಡುವೆ, ವಿಮಾನಯಾನ ರದ್ದತಿಯಿಂದಾಗಿ ದುಬೈನಲ್ಲಿ ಸಿಲುಕಿರುವ ನೂರಾರು ಪ್ರವಾಸಿಗರ ನೆರವಿಗೆ ಬಾಲಿವುಡ್ ನಟ ಸೋನು ಸೂದ್ ಧಾವಿಸಿದ್ದಾರೆ. ಸಂಕಷ್ಟದಲ್ಲಿ ಇರುವವರಿಗೆ ಉಚಿತವಾಗಿ ವಸತಿ ಸೌಲಭ್ಯ ಕಲ್ಪಿಸುವುದಾಗಿ ಘೋಷಿಸುವ ಮೂಲಕ ಅವರು ಮತ್ತೊಮ್ಮೆ ತಮ್ಮ ದೊಡ್ಡ ಗುಣವನ್ನು ಪ್ರದರ್ಶಿಸಿದ್ದಾರೆ. ಈ ಹಿಂದೆ 2020-21ರ ಕೋವಿಡ್-19 ಲಾಕ್‌ಡೌನ್ ಸಮಯದಲ್ಲಿ ಲಕ್ಷಾಂತರ ವಲಸೆ ಕಾರ್ಮಿಕರನ್ನು ಅವರ ಮನೆಗಳಿಗೆ ತಲುಪಿಸುವ ಮೂಲಕ ಸೋನು ಸೂದ್ ದೇಶಾದ್ಯಂತ ಅಪಾರ ಪ್ರೀತಿ ಗಳಿಸಿದ್ದರು. ಇದೀಗ ಅಂತರಾಷ್ಟ್ರೀಯ ಮಟ್ಟದಲ್ಲೂ ಸಂಕಷ್ಟಕ್ಕೆ ಸ್ಪಂದಿಸುವ ಮೂಲಕ ಅವರು ಸುದ್ದಿಯಲ್ಲಿದ್ದಾರೆ.



ಇತ್ತೀಚಿನ ಜಾಗತಿಕ ಮಟ್ಟದ ರಾಜಕೀಯ ಉದ್ವಿಗ್ನತೆಯಿಂದಾಗಿ ಹಲವು ವಿಮಾನಯಾನ ಸಂಸ್ಥೆಗಳು ತಮ್ಮ ಹಾರಾಟವನ್ನು ರದ್ದುಗೊಳಿಸಿವೆ. ಇದರಿಂದಾಗಿ ಪ್ರವಾಸಿಗರು ತಾಯ್ನಾಡಿಗೆ ಮರಳಲಾಗದೆ ದುಬೈನಲ್ಲಿ ಪರದಾಡುತ್ತಿದ್ದಾರೆ. ಈ ಪರಿಸ್ಥಿತಿಯನ್ನು ಗಮನಿಸಿದ ಸೋನು ಸೂದ್, ಇನ್‌ಸ್ಟಾಗ್ರಾಮ್‌ನಲ್ಲಿ ವಿಡಿಯೋ ಸಂದೇಶವೊಂದನ್ನು ಹಂಚಿಕೊಂಡಿದ್ದಾರೆ.

'ಮಧ್ಯಪ್ರಾಚ್ಯದ ಬಿಕ್ಕಟ್ಟಿನಿಂದಾಗಿ ಯಾರೆಲ್ಲಾ ದುಬೈನಲ್ಲಿ ಸಿಲುಕಿಕೊಂಡಿದ್ದಾರೋ, ಅವರಿಗೆ ನಾವು ನೆರವಾಗಲು ಸಿದ್ಧರಿದ್ದೇವೆ. ನೀವು ಉಳಿದುಕೊಳ್ಳಲು ನಾವು ಉಚಿತ ವ್ಯವಸ್ಥೆ ಮಾಡುತ್ತೇವೆ' ಎಂದು ಅವರು ಭರವಸೆ ನೀಡಿದ್ದಾರೆ. ಕೇವಲ ಭಾರತೀಯರಿಗೆ ಮಾತ್ರವಲ್ಲದೆ, ಯಾವುದೇ ದೇಶದವರಾಗಿದ್ದರೂ ಅವರಿಗೆ ಆಶ್ರಯ ನೀಡುವುದಾಗಿ ಸೋನು ಸೂದ್ ತಿಳಿಸಿದ್ದಾರೆ. 'ನಮ್ಮ ಭಾರತೀಯ ಸಹೋದರರು ಇರಲಿ ಅಥವಾ ಬೇರೆ ಯಾವುದೇ ರಾಷ್ಟ್ರದವರೇ ಇರಲಿ, ನೀವು ದುಬೈನಲ್ಲಿ ಸಂಕಷ್ಟದಲ್ಲಿದ್ದರೆ ದಯವಿಟ್ಟು ನಮಗೆ ಅಥವಾ ದುಗಾಸ್ತ ಪ್ರಾಪರ್ಟೀಸ್ ಸಂಸ್ಥೆಗೆ ನೇರವಾಗಿ ಸಂದೇಶ ಕಳುಹಿಸಿ. ನೀವು ಸುರಕ್ಷಿತವಾಗಿ ನಿಮ್ಮ ದೇಶಕ್ಕೆ ಮರಳುವವರೆಗೆ ನಿಮ್ಮ ವಾಸ್ತವ್ಯದ ಜವಾಬ್ದಾರಿ ನಮ್ಮದು' ಎಂದು ಸೋನು ಸೂದ್ ಹೇಳಿದ್ದಾರೆ. ಸೋನು ಸೂದ್ ಅವರ ಈ ಕಾರ್ಯಕ್ಕೆ ಅಭಿಮಾನಿಗಳು ಸಾಮಾಜಿಕ ಜಾಲತಾಣದಲ್ಲಿ ಭಾರಿ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. 'ಬಾಲಿವುಡ್‌ನ ಏಕೈಕ ರಿಯಲ್ ಹೀರೋ ಎಂದರೆ ನೀವೇ', 'ಮಾನವೀಯತೆ ಎಲ್ಲಕ್ಕಿಂತ ದೊಡ್ಡದು ಎಂಬುದನ್ನು ನೀವು ಸಾಬೀತುಪಡಿಸಿದ್ದೀರಿ' ಎಂಬಿತ್ಯಾದಿ ಕಮೆಂಟ್‌ಗಳ ಮೂಲಕ ಸೋನು ಸೂದ್ ಅವರನ್ನು ಹೊಗಳಲಾಗಿದೆ.

# ನಮ್ಮನ್ನು ಒದ್ದು ಹೊರಗೆ ಹಾಕಿದ್ದಾರೆ ಅಷ್ಟೇ..!

ಟಿ20 ವಿಶ್ವಕಪ್‌ನಲ್ಲಿ ಎಲ್ಲಾ ಪಂದ್ಯಗಳನ್ನು ಗೆದ್ದು ಸೆಮಿಫೈನಲ್‌ಗೇರಿದ್ದ ಸೌತ್ ಆಫ್ರಿಕಾ ತಂಡವು ನಿರ್ಣಾಯಕ ಪಂದ್ಯದಲ್ಲಿ ಸೋತಿದೆ. ಅದು ಕೂಡ ಹೀನಾಯವಾಗಿ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಸೌತ್ ಆಫ್ರಿಕಾ ತಂಡವು 20 ಓವರ್‌ಗಳಲ್ಲಿ ಕಲೆಹಾಕಿದ್ದು ಕೇವಲ 169 ರನ್‌ಗಳು ಮಾತ್ರ.

ಈ ಗುರಿಯನ್ನು ಬೆನ್ನತ್ತಿದ ನ್ಯೂಝಿಲೆಂಡ್ ಪರ ಫಿನ್ ಅಲೆನ್ ಹಾಗೂ ಟಿಮ್ ಸೈಫರ್ಟ್ ಸಿಡಿಲಬ್ಬರದ ಬ್ಯಾಟಿಂಗ್ ಪ್ರದರ್ಶಿಸಿದ್ದರು. ಈ ಮೂಲಕ ಮೊದಲ ವಿಕೆಟ್‌ಗೆ 117 ರನ್ ಪೇರಿಸಿದ್ದರು. ಅಷ್ಟೇ ಅಲ್ಲದೆ 12.5 ಓವರ್‌ಗಳಲ್ಲಿ 173 ರನ್ ಸಿಡಿಸಿ 9 ವಿಕೆಟ್‌ಗಳ ಜಯ ಸಾಧಿಸಿದ್ದರು. ಈ ಗೆಲುವಿನೊಂದಿಗೆ ನ್ಯೂಝಿಲೆಂಡ್ ಫೈನಲ್‌ಗೆ ಪ್ರವೇಶಿಸಿದರೆ, ಸೌತ್ ಆಫ್ರಿಕಾ ತಂಡ ಟೂರ್ನಿಯಿಂದ ಹೊರಬಿದ್ದಿದೆ.

ಇತ್ತ ಟೂರ್ನಿಯಿಂದ ಹೊರಬಿದ್ದ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಸೌತ್ ಆಫ್ರಿಕಾ ತಂಡದ ಮುಖ್ಯ ಕೋಚ್ ಶುಕ್ರಿ ಕಾನ್ರಾಡ್ ಕಾಣಿಸಿಕೊಂಡಿದ್ದರು. ಎಂದಿನಂತೆ ಈ ಬಾರಿ ಕೂಡ 'ಚೋಕರ್ಸ್' ಹಣೆಪಟ್ಟಿಯ ಪ್ರಶ್ನೆಯನ್ನು ಅವರ ಮುಂದಿಡಲಾಗಿತ್ತು.

ಐಸಿಸಿ ಟೂರ್ನಿಯಲ್ಲಿ ಭರ್ಜರಿ ಪ್ರದರ್ಶನ ನೀಡುವ ಸೌತ್ ಆಫ್ರಿಕಾ ತಂಡವು ನಿರ್ಣಾಯಕ ಪಂದ್ಯಗಳಲ್ಲಿ ಸೋತು ಹೊರಬೀಳುವುದು ಸಾಮಾನ್ಯ. ಹೀಗಾಗಿಯೇ ಆಫ್ರಿಕಾ ಪಡೆಯನ್ನು ಚೋಕರ್ಸ್ ಎಂದು ಕರೆಯಲಾಗುತ್ತದೆ. ಇದೀಗ ಮತ್ತೊಮ್ಮೆ ಸೆಮಿಫೈನಲ್‌ನಲ್ಲಿ ಮುಗ್ಗರಿಸುವ ಮೂಲಕ ಸೌತ್ ಆಫ್ರಿಕಾ ತಂಡ ಹೊರಬಿದ್ದಿದೆ.

ಇದರೊಂದಿಗೆ ಸೌತ್ ಆಫ್ರಿಕಾ ತಂಡದ ಚೋಕರ್ಸ್ ಹಣೆಪಟ್ಟಿ ಮುಂದುವರೆದಿದೆ. ಆದರೆ ಈ ಬಾರಿಯ ಸೋಲನ್ನು ಚೋಕ್ ಎಂದು ಕರೆಯಲಾಗುವುದಿಲ್ಲ ಎಂದಿದ್ದಾರೆ ಸೌತ್ ಆಫ್ರಿಕಾ ತಂಡದ ಮುಖ್ಯ ಕೋಚ್ ಶುಕ್ರಿ ಕಾನ್ರಾಡ್.

ನ್ಯೂಝಿಲೆಂಡ್ ವಿರುದ್ಧದ ಸೋಲನ್ನು ಚೋಕ್ ಎಂದು ಒಪ್ಪಿಕೊಳ್ಳಲಾಗುವುದಿಲ್ಲ. ಏಕೆಂದರೆ ಇದು ನಮಗೆ ಬಿದ್ದಂತಹ ಏಟು. ನಾವು ಅಷ್ಟೊಂದು ಹೀನಾಯವಾಗಿ ಸೋತಿದ್ದೇವೆ.

'ಚೋಕರ್ಸ್' ಹಣೆಪಟ್ಟಿಯ ಪ್ರಶ್ನೆ

ನಾವು ಪಂದ್ಯದಲ್ಲಿ ಗೆಲ್ಲುವ ಸಣ್ಣ ಲಕ್ಷಣ ತೋರಿದ್ದರೆ ಮಾತ್ರ ಅದನ್ನು 'ಚೋಕ್' ಎನ್ನಬಹುದಿತ್ತು.

ನಮಗೆ ಅಂತಹ ಯಾವುದೇ ಅವಕಾಶ ಇರಲಿಲ್ಲ. ಸೌತ್ ಆಫ್ರಿಕಾದಲ್ಲಿ ನಾವು ಇದಕ್ಕೆ 'ಮೋರ್ಡ್' ಎನ್ನುತ್ತೇವೆ. ಇಂದು ನಮಗೆ ಸರಿಯಾದ 'ಸ್ನಾಟ್‌ಕ್ಲಾಪ್ಡ್' ಆಗಿದೆ. ಅಂದರೆ ಸೌತ್ ಆಫ್ರಿಕಾ ಭಾಷೆಯಲ್ಲಿ ಸರಿಯಾಗಿ ಒದೆ ತಿಂದಿದ್ದೇವೆ, ಒದ್ದು ಹೊರಹಾಕಿದ್ದಾರೆ ಎನ್ನುತ್ತೇವೆ. ಅಂತಹದೊಂದು ಹೀನಾಯ ಸೋಲು ಇದಾಗಿದೆ ಶುಕ್ರಿ ಕಾನ್ರಾಡ್ ಹೇಳಿದ್ದಾರೆ.



ಇದಕ್ಕೂ ಮುನ್ನ ಶುಕ್ರಿ ಕಾನ್ರಾಡ್, ಈ ಬಾರಿ ಸೌತ್ ಆಫ್ರಿಕಾ ತಂಡ ವಿಶ್ವಕಪ್ ಮುಡಿಗೇರಿಸಿಕೊಳ್ಳಲಿದೆ ಎಂದಿದ್ದರು. ಅಲ್ಲದೆ ಟೀಮ್ ಇಂಡಿಯಾ ವಿರುದ್ಧದ ಪಂದ್ಯದಲ್ಲಿ ಗೆದ್ದ ಬಳಿಕ ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂ ನಮ್ಮ ತವರು ಮೈದಾನವಾಗಿದೆ. ಹೀಗಾಗಿ ಇಲ್ಲಿ ನಡೆಯಲಿರುವ ಫೈನಲ್ ಪಂದ್ಯದಲ್ಲಿ ನಾವೇ ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದರು. ಆದರೀಗ ಸೆಮಿಫೈನಲ್ ಪಂದ್ಯದಲ್ಲಿ ಹೀನಾಯವಾಗಿ ಸೋತು ಹೊರಬಿದ್ದಿದ್ದಾರೆ. ಈ ಸೋಲನ್ನು ಶುಕ್ರಿ ಕಾನ್ರಾಡ್ ಸೌತ್ ಆಫ್ರಿಕಾ ತಂಡಕ್ಕೆ ಬಿದ್ದಂತಹ ಪೆಟ್ಟು ಎಂದು ಬಣ್ಣಿಸಿದ್ದಾರೆ.

# ಪಾಕ್ ಆಟಗಾರನ ನೀಚ ಕೃತ್ಯ

2026 ರ ಟಿ20 ವಿಶ್ವಕಪ್‌ನಲ್ಲಿ ಹೀನಾಯ ಪ್ರದರ್ಶನ ನೀಡಿ ತನ್ನ ಅಭಿಮಾನಿಗಳು ಹಾಗೂ ಕ್ರಿಕೆಟ್ ಮಂಡಳಿಯ ಕೆಂಗಣ್ಣಿಗೆ ಗುರಿಯಾಗಿರುವ ಪಾಕಿಸ್ತಾನ ಕ್ರಿಕೆಟಿಗರ ಬಗ್ಗೆ ಮತ್ತೊಂದು ಗಂಭೀರ ಆರೋಪ ಕೇಳಿಬಂದಿದೆ. ಮೈದಾನದಲ್ಲಿ ತಮ್ಮ ಪೌರುಷ ತೋರಿಸುವಲ್ಲಿ ವಿಫಲನಾಗಿದ್ದ ಪಾಕ್ ಕ್ರಿಕೆಟಿಗ ತಾವು ತಂಗಿದ್ದ ಹೋಟೆಲ್‌ನ ಮಹಿಳಾ ಸಿಬ್ಬಂದಿಯೊಂದಿಗೆ ಅನುಚಿತವಾಗಿ ವರ್ತಿಸಿ, ಹೋಟೆಲ್‌ನ ಆಡಳಿತ ಮಂಡಳಿಯಿಂದ ದಂಡನೆಗೆ ಒಳಗಾಗಿದ್ದಾನೆ.

ಇದರ ಜೊತೆಗೆ ಸಂತ್ರಸ್ತ ಮಹಿಳೆ ಹಾಗೂ ಹೋಟೆಲ್ ಆಡಳಿತ ಮಂಡಳಿಯ ಮುಂದೆ ಮಂಡಿಯೂರಿ ಕ್ಷಮೆಯಾಚಿಸಿದ್ದಾನೆ ಎಂದು ವರದಿಯಾಗಿದೆ.

ನಿಮಗೆಲ್ಲ ತಿಳಿದಿರುವಂತೆ ಭಾರತದೊಂದಿಗೆ ಸಂಬಂಧ ಹಳಸಿರುವುದರಿಂದ ಪಾಕಿಸ್ತಾನ ಕ್ರಿಕೆಟ್ ತಂಡ ತನ್ನೆಲ್ಲ ಪಂದ್ಯಗಳನ್ನು ಶ್ರೀಲಂಕಾದಲ್ಲಿ ಆಡಿತ್ತು. ಕ್ರಿಕೆಟ್ ಆಡಲು ಬಂದಿದ್ದ ಪಾಕ್ ಕ್ರಿಕೆಟಿಗರು ಬಂದಿರುವ ಕೆಲಸವನ್ನು ಮಾಡದೆ, ತಾವು ತಂಗಿದ್ದ ಹೋಟೆಲ್‌ನಲ್ಲಿ ಮಾಡಬಾರದ ಕೆಲಸ ಮಾಡಿದ್ದು, ವಿಶ್ವಕ್ರಿಕೆಟ್ ನಾಚಿಕೆ ಪಡುವಂತಹ ಕೆಲಸ ಮಾಡಿದ್ದಾರೆ. ಇದರ ಪರಿಣಾಮವಾಗಿ ತಪ್ಪು ಮಾಡಿದ ಆ ಆಟಗಾರನ ವಿರುದ್ಧ ಕ್ರಮ ಕೈಗೊಳ್ಳುವಂತೆ ಪಾಕಿಸ್ತಾನ ತಂಡದ ವ್ಯವಸ್ಥಾಪಕ ನವೀದ್ ಚೀಮಾರನ್ನು ಒತ್ತಾಯಿಸಲಾಗಿದೆ.

ಹೋಟೆಲ್ ಮಹಿಳಾ ಸಿಬ್ಬಂದಿ ಜೊತೆ ಅನುಚಿತ ವರ್ತನೆ!



**ಮಹಿಳಾ ಸಿಬ್ಬಂದಿ ಜೊತೆ ಅನುಚಿತ ವರ್ತನೆ:** ಶ್ರೀಲಂಕಾದಲ್ಲಿ ಹೋಟೆಲ್‌ನ ಮಹಿಳಾ ಸಿಬ್ಬಂದಿಯೊಂದಿಗೆ ಅನುಚಿತವಾಗಿ ವರ್ತಿಸಿದ ಆರೋಪದ ಮೇಲೆ ಪಾಕಿಸ್ತಾನಿ ಆಟಗಾರನಿಗೆ ದಂಡ ವಿಧಿಸಲಾಗಿದೆ. ಮಾಧ್ಯಮ ವರದಿಗಳ ಪ್ರಕಾರ, ವಿಶ್ವಕಪ್ ಸಮಯದಲ್ಲಿ ಪಾಕಿಸ್ತಾನ ತಂಡ ತಂಗಿದ್ದ ಶ್ರೀಲಂಕಾದ ಕ್ಯಾಂಡಿಯಲ್ಲಿರುವ ಗೋಲ್ಡನ್ ಕ್ರೌನ್ ಹೋಟೆಲ್‌ನಲ್ಲಿ ಈ ಘಟನೆ ನಡೆದಿದೆ.

ಆರೋಪಗಳ ಪ್ರಕಾರ, ಪಾಕ್ ಆಟಗಾರನೊಬ್ಬ ಮಹಿಳಾ ಹೌಸ್‌ಕೀಪಿಂಗ್ ಸಿಬ್ಬಂದಿಯೊಂದಿಗೆ ಅನುಚಿತವಾಗಿ ವರ್ತಿಸಿದ್ದಾನೆ.ಈ ಸಲುವಾಗಿ ಹೋಟೆಲ್ ಅಧಿಕಾರಿಗಳು ತಂಡದ ವ್ಯವಸ್ಥಾಪಕ ನವೀದ್ ಚೀಮಾ ಅವರಿಗೆ ದೂರು ನೀಡಿದ್ದು, ದೂರಿನನ್ವಯ ವ್ಯವಸ್ಥಾಪಕರು ಆಟಗಾರನಿಗೆ ದಂಡ ವಿಧಿಸಿ ಹೋಟೆಲ್ ಆಡಳಿತ ಮಂಡಳಿ ಮುಂದೆ ಆ ಕ್ರಿಕೆಟಿಗನಿಂದ ಕ್ಷಮೆಯಾಚಿಸಿದ್ದಾರೆ.

**ಆಟಗಾರನ ಹೆಸರು ಬಹಿರಂಗವಾಗಿಲ್ಲ:**

ಇದರ ಜೊತೆಗೆ ಹೆಚ್ಚಿನ ವಿಚಾರಣೆಗಾಗಿ ಆ ಆಟಗಾರ ಪಾಕಿಸ್ತಾನ ಕ್ರಿಕೆಟ್ ಮಂಡಳಿಯ (ಪಿಸಿಬಿ) ಶಿಸ್ತು ಸಮಿತಿಯ ಮುಂದೆ ಹಾಜರಾಗುವ ನಿರೀಕ್ಷೆಯಿದೆ. ಆದಾಗ್ಯೂ, ಮಹಿಳಾ ಸಿಬ್ಬಂದಿಯೊಂದಿಗೆ ಅನುಚಿತವಾಗಿ ವರ್ತಿಸಿದ ಆ ಆಟಗಾರನ ಹೆಸರು ಇನ್ನೂ ಬಹಿರಂಗವಾಗಿಲ್ಲ.

ವರದಿಯ ಪ್ರಕಾರ, ಈ ಘಟನೆ ಪಾಕಿಸ್ತಾನದ ಅಂತಿಮ ಸೂಪರ್ 8 ಪಂದ್ಯಕ್ಕೂ ಸ್ವಲ್ಪ ಮೊದಲು ಅಥವಾ ಆ ಸಮಯದಲ್ಲಿ ನಡೆದಿದೆ ಎಂದು ಹೇಳಲಾಗುತ್ತಿದೆ. ಪಾಕಿಸ್ತಾನ ಕ್ರಿಕೆಟ್‌ನಲ್ಲಿ ಇಂತಹ ವಿವಾದಗಳು ಹುಟ್ಟಿಕೊಂಡಿರುವುದು ಇದೇ ಮೊದಲಲ್ಲ ಎಂಬುದು ಗಮನಿಸಬೇಕಾದ ಸಂಗತಿ.

# ಇಂಗ್ಲೆಂಡ್ ವಿರುದ್ಧ ಭಾರತಕ್ಕೆ ರೋಚಕ ಜಯ

ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಟಿ20 ವಿಶ್ವಕಪ್ ನ ಸೆಮಿ ಫೈನಲ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ರೋಚಕವಾಗಿ ಸೋಲಿಸಿದ ಭಾರತ ತಂಡವು ಫೈನಲ್ ಗೇರಿದೆ. ಭಾರತ ನೀಡಿದ 254 ರನ್‌ಗಳ ಗುರಿ ಬೆನ್ನಟ್ಟಿದ ಇಂಗ್ಲೆಂಡ್ ತಂಡವು 20 ಓವರುಗಳಲ್ಲಿ 7 ವಿಕೆಟ್ ನಷ್ಟಕ್ಕೆ 246 ರನ್‌ಗಳ ಗಳಿಸಿತು. ಈ ಗೆಲುವಿನ ಮೂಲಕ ಭಾರತ 4ನೇ ಬಾರಿಗೆ ಚುಟುಕು ವಿಶ್ವಕಪ್ ಫೈನಲ್ ಪ್ರವೇಶಿಸಿದೆ. ಅಲ್ಲದೆ ಟಿ20 ವಿಶ್ವಕಪ್‌ನಲ್ಲಿ ಸತತ 2ನೇ ಬಾರಿಗೆ ಫೈನಲ್ ಪ್ರವೇಶಿಸಿ ಹೊಸ ದಾಖಲೆ ಬರೆಯಿತು. ಈ ಹಿಂದೆ ಪಾಕಿಸ್ತಾನ ಮಾತ್ರ ಈ ಸಾಧನೆ ಮಾಡಿತ್ತು. ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ 253 ರನ್‌ಗಳಿಸಿದರೆ, ಇದಕ್ಕೆ ಉತ್ತರವಾಗಿ ಇಂಗ್ಲೆಂಡ್ ತಂಡ 20 ಓವರ್ ಗಳಲ್ಲಿ 7 ವಿಕೆಟ್ ಕಳೆದುಕೊಂಡು 246 ರನ್ ಗಳಿಸಿತು. ಜಾಕೋಬ್ ಬೆಥೆಲ್ 105 ರನ್‌ಗಳಿಸಿ ನಡೆಸಿದ ಹೋರಾಟ ಆಂಗ್ಲರಿಗೆ ಫಲನೀಡಲಿಲ್ಲ. 254 ರನ್‌ಗಳ ಬೃಹತ್ ಗುರಿ ಬೆನ್ನಟ್ಟಿದ ಇಂಗ್ಲೆಂಡ್



ನಿರೀಕ್ಷಿತ ಆರಂಭ ಪಡೆಯುವಲ್ಲಿ ವಿಫಲ ಆಯಿತು. ಆರಂಭಿಕ ಬ್ಯಾಟರ್ ಫಿಲ್ ಸಾಲ್ಟ್(5) ಹಾಗೂ ನಾಯಕ ಬ್ರೂಕ್(7) ವಿಕೆಟ್‌ನ್ನು ಒಪ್ಪಿಸಿದರು. ಇವರಿಬ್ಬರನ್ನ ಹಾರ್ದಿಕ್ ಪಾಂಡ್ಯ ಹಾಗೂ ಬುಮ್ರಾ ಪೆವಿಲಿಯನ್‌ಗಟ್ಟಿದರು. ಟೂರ್ನಿಯಲ್ಲಿ ಸತತ ವೈಫಲ್ಯ ಅನುಭವಿಸಿದ್ದ ವಿಕೆಟ್ ಕೀಪರ್ ಜೋಸ್ ಬಟ್ಲರ್ ಇಂದು 17 ಎಸೆತಗಳಲ್ಲಿ 25 ರನ್‌ಗಳಿಸಿ ವರುಣ್ ಚಕ್ರವರ್ತಿಗೆ ಬೌಲಿಂಗ್‌ನಲ್ಲಿ ಬೌಲ್ಡ್ ಆದರು. 5ನೇ ಕ್ರಮಾಂಕದಲ್ಲಿ ಬಂದ ಟಾಮ್ ಬಾಂಟನ್ 5 ಎಸೆತಗಳಲ್ಲಿ 2 ಸಿಕ್ಸರ್, 1 ಬೌಂಡರಿ ಸಹಿತ 17 ರನ್‌ಗಳಿಸಿ ಅಕ್ಷರ್ ಪಟೇಲ್ ಬೌಲಿಂಗ್‌ನಲ್ಲಿ ಬೌಲ್ಡ್ ಆದರು.

ಸ್ಫೋಟಕ ಅರ್ಧಶತಕ ಸಿಡಿಸಿ ಕೊಹ್ಲಿ ದಾಖಲೆಯನ್ನು ಸರಿಗಟ್ಟಿದ ಸ್ಯಾಮ್ಸನ್: ಟಿ20 ವಿಶ್ವಕಪ್‌ನಲ್ಲಿ ಸಂಜು ಸ್ಯಾಮ್ಸನ್ ಅವರು ವಿರಾಟ್ ಕೊಹ್ಲಿ ಅವರ ದಾಖಲೆಯನ್ನು ಸರಿಗಟ್ಟಿದ್ದಾರೆ. ಇಂಗ್ಲೆಂಡ್ ವಿರುದ್ಧ ನಡೆಯುತ್ತಿರುವ ಸೆಮಿಫೈನಲ್ ಪಂದ್ಯದಲ್ಲಿ ಸ್ಯಾಮ್ಸನ್ 89 ರನ್(42 ಎಸೆತ, 8 ಬೌಂಡರಿ, 7 ಸಿಕ್ಸ್) ಹೊಡೆದು ಔಟಾದರು.ಈ ಹಿಂದೆ 2016 ರಲ್ಲಿ ವಿರಾಟ್ ಕೊಹ್ಲಿ ವೆಸ್ಟ್ ಇಂಡೀಸ್ ವಿರುದ್ಧ ಔಟಾಗದೇ 89 ರನ್(47 ಎಸೆತ, 11 ಬೌಂಡರಿ,1 ಸಿಕ್ಸ್) ಹೊಡೆದಿದ್ದರು.

ಭಾರತ ಫೈನಲ್‌ಗೆ ಲಗ್ಗೆ

ಸಂಜು ಸ್ಯಾಮ್ಸನ್ ಸ್ಫೋಟಕ ಅರ್ಧಶತಕದ ಜೊತೆ ಇಶನ್ ಕಿಶನ್ 39 ರನ್(18 ಎಸೆತ, 4 ಬೌಂಡರಿ, 2 ಸಿಕ್ಸ್), ಶಿವಂ ದುಬೆ 43 ರನ್ (25 ಎಸೆತ, 1 ಬೌಂಡರಿ, 4 ಸಿಕ್ಸ್) ಹಾರ್ದಿಕ್ ಪಾಂಡ್ಯ 27 ರನ್(12 ಎಸೆತ, 3 ಬೌಂಡರಿ, 2 ಸಿಕ್ಸ್), ತಿಲಕ್ ವರ್ಮಾ 21 ರನ್(7 ಎಸೆತ, 3 ಸಿಕ್ಸ್) ಹೊಡೆದ ಪರಿಣಾಮ ಭಾರತ 7 ವಿಕೆಟ್ 253 ರನ್ ಹೊಡೆದಿದೆ.



**ಬೆಥೆಲ್ ಶತಕ ವ್ಯರ್ಥ:** ಬೃಹತ್ ಮೊತ್ತದ , ತುದಿಗಾಲಿನಲ್ಲಿ ನಿಲ್ಲುವಂತೆ ಮಾಡಿದ ಐಸಿಸಿ ಪುರುಷರ ಟಿ20 ವಿಶ್ವಕಪ್‌ನ ಎರಡನೇ ಸೆಮಿಫೈನಲ್‌ನ ರೋಚಕ ಹಣಾಹಣಿಯಲ್ಲಿ ಇಂಗ್ಲೆಂಡ್ ತಂಡವನ್ನು 7 ರನ್‌ಗಳಿಂದ ಮಣಿಸಿದ ಟೀಮ್ ಇಂಡಿಯಾ ಫೈನಲ್‌ಗೆ ಲಗ್ಗೆಯಿಟ್ಟಿದೆ.

# ವೈವಾಹಿಕ ಜೀವನಕ್ಕೆ ಅರ್ಜುನ್- ಸಾನಿಯಾ

ಕ್ರಿಕೆಟ್ ದೇವರು ಸಚಿನ್ ತೆಂಡೂಲ್ಕರ್ ಅವರ ಪುತ್ರ ಅರ್ಜುನ್ ತೆಂಡೂಲ್ಕರ್ ತಮ್ಮ ಬಹುದಿನಗಳ ಗೆಳತಿ ಸಾನಿಯಾ ಚಾಂದೋಕ್ ಅವರೊಂದಿಗೆ ಇಂದು ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ಕಳೆದ ಆಗಸ್ಟ್‌ನಲ್ಲಿ ತೀರ ಖಾಸಗಿಯಾಗಿ ಕುಟುಂಬದವರ ಸಮ್ಮುಖದಲ್ಲಿ ಈ ಜೋಡಿ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಹಾಗೆಯೇ ಮಾರ್ಚ್ 3 ರಂದು ಮುಂಬೈನ ಮಹಾಲಕ್ಷ್ಮಿ ರೇಸ್ ಕೋರ್ಸ್‌ನಲ್ಲಿ ಮೆಹಂದಿ ಸಮಾರಂಭವು ನಡೆದಿತ್ತು. ಆ ಸಮಾರಂಭದಲ್ಲಿ ಕ್ರಿಕೆಟ್ ಜಗತ್ತಿನ ಅನೇಕ ದಂತಕಥೆಗಳು ಉಪಸ್ಥಿತರಿದ್ದರು. ಸಚಿನ್ ಅವರ ಆಪ್ತರು, ಕ್ರಿಕೆಟಿಗರು ಮತ್ತು ಸೆಲೆಬ್ರಿಟಿಗಳು ಮೆಹಂದಿ ಸಮಾರಂಭದಲ್ಲಿ ಭಾಗವಹಿಸಿದ್ದರು, ಅವರಲ್ಲಿ ರವಿಶಾಸ್ತ್ರಿ, ಯುವರಾಜ್ ಸಿಂಗ್, ಹರ್ಭಜನ್ ಸಿಂಗ್, ಜಹೀರ್ ಖಾನ್, ಇರ್ಫಾನ್ ಪಠಾಣ್, ಯೂಸುಫ್ ಪಠಾಣ್ ಮತ್ತು ಅಜಿತ್ ಅಗರ್ಕರ್ ಸೇರಿದ್ದರು. ಇದೀಗ ಮದುವೆಗೆ ಅತಿಥಿಗಳ ಮಹಾಪೂರವೇ ಹರಿದುಬಂದಿತ್ತು.



ಮದುವೆಯಲ್ಲಿ ಗಣ್ಯರ ಉಪಸ್ಥಿತಿ ಅರ್ಜುನ್ ತೆಂಡೂಲ್ಕರ್ ಮತ್ತು ಸಾನಿಯಾ ಚಾಂದೋಕ್ ಅವರ ವಿವಾಹ ಮುಂಬೈನಲ್ಲಿ ನೆರವೇರಿತು. ಭಾರತದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ತಮ್ಮ ಪತ್ನಿಯೊಂದಿಗೆ ವಿವಾಹ ಸಮಾರಂಭದಲ್ಲಿ ಕಾಣಿಸಿಕೊಂಡರು. ಮಾಜಿ ಕ್ರಿಕೆಟಿಗ ಮತ್ತು ಆಯ್ಕೆದಾರ ಅಜಿತ್ ಅಗರ್ಕರ್ ಕೂಡ ತಮ್ಮ ಪತ್ನಿಯೊಂದಿಗೆ ಆಗಮಿಸಿದ್ದರು. ರಾಹುಲ್ ದ್ರಾವಿಡ್ ಅವರ ಪತ್ನಿ ವಿಜೇತಾ ಪೆಂಧಾರ್ಕರ್, ಕಿರಣ್ ಮೋರೆ, ಅನಿಲ್ ಕುಂಬ್ಳೆ, ಅಜಿಂಕ್ಯ ರಹಾನೆ, ಸುರೇಶ್ ರೈನಾ ಮತ್ತು ವೆಂಕಟೇಶ್ ಪ್ರಸಾದ್ (ಮಾಜಿ ಕ್ರಿಕೆಟಿಗ ಮತ್ತು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯ ಅಧ್ಯಕ್ಷ) ಅವರೊಂದಿಗೆ ಸಮಾರಂಭದಲ್ಲಿ ಭಾಗವಹಿಸಿದ್ದರು. ಈ ವಿವಾಹ ಸಮಾರಂಭದಲ್ಲಿ ರಾಜಕೀಯ ವ್ಯಕ್ತಿಗಳು ಕೂಡ ಭಾಗವಹಿಸಿದ್ದರು. ಕೆಲವು ದಿನಗಳ ಹಿಂದೆ ಸಚಿನ್ ತೆಂಡೂಲ್ಕರ್ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಆಹ್ವಾನ ನೀಡಿದ್ದರು. ಕ್ರೀಡಾ ತಾರೆಯರು, ಕೈಗಾರಿಕೋದ್ಯಮಿಗಳು ಮತ್ತು ಪ್ರಮುಖ ವ್ಯಕ್ತಿಗಳು ಸಹ ಭಾಗವಹಿಸಿದ್ದರು, ಇದು ಕಾರ್ಯಕ್ರಮವನ್ನು ಇನ್ನಷ್ಟು ಅದ್ದೂರಿಯಾಗಿ ಮಾಡಿತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966